ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 76

6–9–2025 ಶನಿವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 76

# ಖಾಲಿ ಹಾಳೆಯಂತಿರುವ ಮಕ್ಕಳಿಗೆ ಅಕ್ಷರ ಜ್ಞಾನ ಧಾರೆ ಎರೆವ ಶಿಕ್ಷಕರ ವೃತ್ತಿ ಶ್ಲಾಘನೀಯ

## ಶಿಕ್ಷಕರ ದಿನಾಚರಣೆಯಲ್ಲಿ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ:** ಮಕ್ಕಳು ಶಾಲೆಗೆ ಬರುವಾಗ ಖಾಲಿ ಹಾಳೆಯಂತೆ. ಅವರಿಗೆ ತಮ್ಮಲ್ಲಿನ ಜ್ಞಾನ ಧಾರೆ ಎರೆದು ಭವಿಷ್ಯದ ರೂವಾರಿಗಳಾಗಿ ರೂಪಿಸುವ ಶಕ್ತಿ ಶಿಕ್ಷಕ ವೃತ್ತಿ ಅವಿಸ್ಮರಣೀಯ ಎಂದು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಹದಡಿ ರಸ್ತೆಯಲ್ಲಿನ ಶ್ಯಾಮನೂರು ಶಿವಶಂಕರಪ್ಪ ಪಾರ್ವತಮ್ಮ ಕಲ್ಯಾಣ ಮಂಟಪದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನಾಚರಣೆ ಹಾಗೂ ಶಿಕ್ಷಕರ ದಿನಾಚರಣೆ ಅಂಗವಾಗಿ ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತರಿಗೆ ಮತ್ತು ದಕ್ಷಿಣ ವಲಯದ ನಿವೃತ್ತ ಶಿಕ್ಷಕರಿಗೆ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ತಮ್ಮ ಬಾಲ್ಯ ಶಿಕ್ಷಣ ವ್ಯವಸ್ಥೆ ಕುರಿತು ಮಾತನಾಡಿದ ಅವರು, ಕಲಿಕೆ ಜೊತೆಗೆ ಪಠ್ಯೇತರ ಚಟುವಟಿಕೆಗಳನ್ನು ಕಲಿಸಬೇಕಿದೆ. ಅವರಲ್ಲಿನ ಪ್ರತಿಭೆಗಳನ್ನು ಗುರುತಿಸಿ ಅವರ ಶ್ರೇಯೋಭಿವೃದ್ಧಿಗೆ ಸಹಕರಿಸಬೇಕು. ಇಂದು ಸಾಮಾಜಿಕ ಜಾಲತಾಣ, ಕೃತಕ ಬದ್ಧಿ ಮತ್ತೆಯ ಪ್ರಭಾವ ಹೆಚ್ಚಾಗಿದ್ದಲ್ಲದೇ ಒತ್ತಡವೂ ಇದೆ. ಜವಾಬ್ದಾರಿಯುತ ಶಿಕ್ಷಕರಾಗಿ ತಮ್ಮ ಕರ್ತವ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಒಬ್ಬ ವಿದ್ಯಾರ್ಥಿಗೆ ಉತ್ತಮ ವಾತಾವರಣ ನಿರ್ಮಿಸಿ. ಗುಣಮಟ್ಟದ ಶಿಕ್ಷಣ ನೀಡಿದಲ್ಲಿ ಭವಿಷ್ಯದಲ್ಲಿ ಉತ್ತಮ ನಾಗರೀಕ ವ್ಯಕ್ತಿಯಾಗಿ ನೋಡಬಹುದು ಎಂದರು.



ಜಿಲ್ಲೆಯಲ್ಲಿ ಸರ್ಕಾರಿ, ಅನುದಾನಿತ, ಅನುದಾನ ರಹಿತ ಹಾಗೂ ವಿಶೇಷವಾಗಿ ಸರ್ಕಾರಿ ಅಂಧ ಮಕ್ಕಳ ಶಾಲೆ ಸೇರಿದಂತೆ ವಿವಿಧ ಶಾಲೆಗಳಲ್ಲಿ ಶೇ.100ರಷ್ಟು ಫಲಿತಾಂಶ ನೀಡಿದ 14 ಶಾಲೆಗೆ ಅಭಿನಂದನೆ ಸಲ್ಲಿಸಿದರು. ಯಾವ ಶಾಲೆ ಪ್ರತಿಶತ ನೂರು ಫಲಿತಾಂಶ ನೀಡಿವೆ. ಆ ಶಾಲೆಯಲ್ಲಿನ ಕೈಗೊಂಡ ಕಾರ್ಯ ಭೋಧನಾ ಕೌಶಲ್ಯಗಳನ್ನು ಅಳವಡಿಸಿಕೊಂಡು ಮುಂದಿನ ದಿನಗಳಲ್ಲಿ ಉತ್ತಮ ಫಲಿತಾಂಶ ನೀಡುವಲ್ಲಿ ಪ್ರಮುಖ ಪಾತ್ರ ವಹಿಸಬೇಕು.

**ಸಾರ್ವಜನಿಕರಿಂದ ಶಿಕ್ಷಣ ವಲಯಕ್ಕೆ 1.5 ಕೋಟಿ ದೇಣೀಗೆ :** ರಾಜ್ಯದಲ್ಲಿಯೇ ಜಿಲ್ಲೆಗೆ ಶೈಕ್ಷಣಿಕ ವಲಯಕ್ಕೆ ಶಿಕ್ಷಣದ ಮಹತ್ವವನ್ನರಿತು ಸಾರ್ವಜನಿಕರಿಂದ ಸುಮಾರು 1.5 ಕೋಟಿ ದೇಣೀಗೆ ನೀಡಿ ಶೈಕ್ಷಣಿಕ ಅಭಿವೃದ್ಧಿಗೆ ಸಾಕ್ಷಿಯಾಗಿದ್ದಾರೆ. ಹಾಗೆಯೇ ಸಿಎಸ್‌ಆರ್ ನಿಧಿಯಿಂದ ಸುಮಾರು ರೂ.2.18 ಕೋಟಿ ಶಿಕ್ಷಣ ಇಲಾಖೆಗೆ ವಿವಿಧ ಅಭಿವೃದ್ಧಿಗೆ ಬಳಸಲಾಗಿದೆ.

**ಶಿಕ್ಷಕಿ ನಾಗವೇಣಿ ಕಾರ್ಯಕ್ಕೆ ಸಂಸದರ ಮೆಚ್ಚುಗೆ:** ಈಹೆಚ್‌ಆರ್‌ಎಸ್ ಶ್ರೀರಾಮ್ ಬಡಾವಣೆಯ ಶಿಕ್ಷಕಿ ನಾಗವೇಣಿ ಕ್ಯಾನ್ಸರ್ ಕಾಯಿಲೆ ಇದ್ದರೂ, ವೈದ್ಯಕೀಯ ಚಿಕಿತ್ಸೆ ಪಡೆಯುತ್ತಲೇ ಮಕ್ಕಳೊಂದಿಗೆ ಅವಿನಾಭಾವ ಸಂಬಂಧ, ಪ್ರೀತಿ ಸಹಬಾಳ್ವೆಯಿಂದ ಬದುಕುವುದರ ಜೊತೆಗೆ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದಾರೆ. ಅಷ್ಟೇ ಅಲ್ಲದೇ ಸರ್ಕಾರದ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ ಇತರರಿಗೆ ಮಾದರಿ ಎಂದು ಶ್ಲಾಘಿಸಿದರು.

ಮಾಯಕೊಂಡ ಕ್ಷೇತ್ರದ ಶಾಸಕ ಬಸವಂತಪ್ಪ ಮಾತನಡಿ, ಡಾ.ಸರ್ವಪಲ್ಲಿ ರಾಧಕೃಷ್ಣನ್‌ರವರು ಶಿಕ್ಷರಾಗಿ ಸೇವೆ ಸಲ್ಲಿಸಿ ನಂತರ ರಾಷ್ಟ್ರಪತಿಯಾದರು. ಅವರಲ್ಲಿನ ಆಸ್ತಿ, ಅಂತಸ್ತು ನೋಡಿ ರಾಷ್ಟ್ರಪತಿ ಹುದ್ದೆಗ ಆಯ್ಕೆ ಮಾಡಲಿಲ್ಲ. ಅವರಲ್ಲಿನ ಮಾನವೀಯ ಗುಣಗಳನ್ನು ಗುರುತಿಸಿ ಈ ಮಹತ್ವದ ಹುದ್ದೆಗೆ ಆಯ್ಕೆ ಮಾಡಲಾಯಿತು. ಪ್ರತಿಯೊಬ್ಬ ಶಿಕ್ಷಕರು ಸಹ ಅಂತಹ ಮಾನವೀ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು. ಗುರುವಿಗೆ ತನ್ನದೇ ಆದ ಮಹತ್ವದ ಸ್ಥಾನವಿದೆ. ಸರ್ಕಾರಿ ಶಾಲೆಗೆ ಸೇರುವವರು ಬಹುತೇಕ ಬಡವರು, ಹಿಂದುಳಿದ ವರ್ಗಗಳ ಮಕ್ಕಳು. ಅಕ್ಷರ ಜ್ಞಾನ ತಿಳಿಯದೇ ಇರುವ ಮಕ್ಕಳನ್ನು ತಿದ್ದಿ ಶಿಕ್ಷಣವಂತರನ್ನಾಗಿಸುವ ಶಕ್ತಿ ನಿಮ್ಮಲ್ಲಿದೆ.

ರಜಾ ದಿನಗಳಲ್ಲಿ ಹಂತದಲ್ಲಿ ಹಾಜರಾತಿ ಹೆಚ್ಚಿಸಲು ಗ್ರಾಮೀಣ ಪ್ರದೇಶಗಳಿಗೆ ತೆರಳಿ ಶಿಕ್ಷಣದ ಬಗ್ಗೆ ಜಾಗೃತಿ ಮೂಡಿಸಿ. ಶಾಲೆಗೆ ಕರೆತರುವ ಮೂಲಕ ಶಿಕ್ಷಣ ಕ್ರಾಂತಿಯನ್ನಂಟು ಮಾಡಬೇಕು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕು ಎಂದ ಅವರು, ಹೋಬಳಿ ಮಟ್ಟದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆ ಮಂಜೂರು ಮಾಡಲಾಗಿದೆ. ಈ ಶಾಲಗಳಲ್ಲಿ 1 ರಿಂದ 12 ನೇ ತರಗತಿಯವರೆಗೆ ಕನ್ನಡ ಮತ್ತು ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ನೀಡಲಾಗುವುದು. ಇಂತಹ ಶಾಲೆಗಳನ್ನು ಪಂಚಾಯ್ತಿ ಮಟ್ಟದಲ್ಲಿ ಪ್ರಾಥಮಿಕ ಶಾಲೆ ಆರಂಭಿಸಿದಲ್ಲಿ ಸಾಕ್ಷರತೆ ಮಟ್ಟ ಹೆಚ್ಚಲಿದೆ. ಸಾರಿಗೆ ವ್ಯವಸ್ಥೆ, ಮೂಲ ಸೌಕರ್ಯಗಳಿಂದ ವಂಚಿತವಾದ ಸಮುದಾಯಗಳಿಗೆ ಅನುಕೂಲವಾಗಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

## ಇಂದು ಶ್ರೀ ಘಂಟೆ ಗಣಪತಿ ದೇವಾಲಯದ ಪ್ರಥಮ ವಾರ್ಷಿಕೋತ್ಸವ

**ದಾವಣಗೆರೆ:** ಇಲ್ಲಿನ ಎಸ್.ಜೆ.ಎಂ. ನಗರದ 'ಶ್ರೀ ಘಂಟೆ ಗಣಪತಿ' ದೇವಾಲಯದ ಪ್ರಥಮ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಸೆ.5ರಂದು ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 8 ರಿಂದ ಮಹಾಪಂಚಮೃತ ಅಭಿಷೇಕ, ಮಹಾಕುಂಬಾಭಿಷೇಕ. 11ಕ್ಕೆ ಸಹಸ್ರ ಮೋದಕ, ಗಣಹೋಮ, ಮಧ್ಯಾಹ್ನ 2ಕ್ಕೆ ಪೂರ್ಣಾಹುತಿ ನಂತರ ಅನ್ನಸಂತರ್ಪಣೆ ನಡೆಯಲಿದೆ.

ಸೆ.6 ರಂದು ಮಧ್ಯಾಹ್ನ 3:30ಕ್ಕೆ ಶ್ರೀ ಘಂಟೆ ಗಣಪತಿ ದೇವಸ್ಥಾನದ ಮಣ್ಣಿನ ಗಣಪತಿ ವಿಸರ್ಜನ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಶ್ರೀ ಘಂಟೆ ಗಣಪತಿ ದೇವಸ್ಥಾನ ಸೇವಾ ಸಮಿತಿ ತಿಳಿಸಿದೆ.

## ಸೆ.15ರಂದು ಪ್ರಚಾರ ಅಭಿಯಾನ

**ದಾವಣಗೆರೆ:** ಬಸವ ಸಂಸ್ಕೃತಿ ಅಭಿಯಾನದಿಂದ ದಾವಣಗೆರೆಯಲ್ಲಿ ನಡೆಯುವ ಬಸವ ಸಂಸ್ಕೃತಿ ಅಭಿಯಾನದ ಕಾರ್ಯಕ್ರಮದ ಅಂಗವಾಗಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಪ್ರಚಾರ ಮಾಡಲು ಸೆ.5ರಂದು ಸಂಜೆ 5 ಗಂಟೆಗೆ 'ಪ್ರಚಾರ ಅಭಿಯಾನ'ವನ್ನು ನಗರದ ಶಿವಯೋಗ ಮಂದಿರ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಅಭಿಯಾನದ ಜಿಲ್ಲಾಧ್ಯಕ್ಷ ಅಣಬೇರು ರಾಜಣ್ಣ ಅಧ್ಯಕ್ಷತೆಯಲ್ಲಿ ಜರುಗುವ ಕಾರ್ಯಕ್ರಮಕ್ಕೆ ಎಲ್ಲಾ ಬಸವಪರ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಎಲ್ಲಾ ಬಸವತತ್ವ ಅನುಯಾಯಿಗಳು ಭಾಗವಹಿಸಲು ಅಭಿಯಾನದ ಪ್ರಚಾರ ಸಮಿತಿಯ ಅವರಗೆರೆ ರುದ್ರಮುನಿ ತಿಳಿಸಿದ್ದಾರೆ.

## ಸೆ.8ರಂದು ವಾಕತಾನ್

**ದಾವಣಗೆರೆ:** ದಾವಣಗೆರೆ ನೇತ್ರಾಲಯ, ಡಾ. ಅಗರ್ವಾಲ್ ಕಣ್ಣಿನ ಆಸ್ಪತ್ರೆಯಿಂದ ಜಿ.ಎಂ ವಿಶ್ವವಿದ್ಯಾನಿಲಯದ ಎನ್ ಎಸ್ ಎಸ್ ವಿದ್ಯಾರ್ಥಿಗಳ ಸಹಯೋಗದಲ್ಲಿ ನೇತ್ರಾದಾನದ ಜಾಗೃತಿ ಮೂಡಿಸಲು ಸೆ.8ರಂದು ಬೆಳಿಗ್ಗೆ 10:30 ಕ್ಕೆ ನಗರದ ಗುಂಡಿ ಚೌಟ್ರಿ ಡಾ. ಅರ್ಗವಾಲ್ ಕಣ್ಣಿನ ಆಸ್ಪತ್ರೆಯಿಂದ ವಾಕತಾನ್ ಹಮ್ಮಿಕೊಳ್ಳಲಾಗಿದೆ.

ವಿದ್ಯಾರ್ಥಿಭವನ ಮೂಲಕ ಕೆ.ಬಿ ಸರ್ಕಲ್ ಮೂಲಕ ಬೀರಲಿಂಗೇಶ್ವರ ದೇವಸ್ಥಾನದವರೆಗೆ ವಾಕತಾನ್ ನಡೆಯಲಿದೆ ಎಂದು ತಿಳಿಸಲಾಗಿದೆ.

## ಇಂದು ಲಿಂ. ಶ್ರೀ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳ 34 ನೇ ಶ್ರದ್ಧಾಂಜಲಿ ಸಮಾರಂಭಕ್ಕೆಭಕ್ತಾದಿಗಳಿಂದ ಭಕ್ತಿಸಮರ್ಪಣೆ

**ದಾವಣಗೆರೆ:** ಸಿರಿಗೆರೆಯಲ್ಲಿ ಸೆ.24ರಂದು ನಡೆಯಲಿರುವ ಸಿರಿಗೆರೆಯ ಶ್ರೀ ಮದುಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ ಶ್ರೀ ತರಳಬಾಳು ಜಗದ್ಗುರು ಬೃಹನ್ಮಠದ 20ನೇ ಜಗದ್ಗುರುಗಳಾಗಿದ್ದ ಲಿಂಗೈಕ್ಯ ಶ್ರೀ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳವರ 34 ನೇ ಶ್ರದ್ಧಾಂಜಲಿ ಕಾರ್ಯಕ್ರಮದ ದಾಸೋಹಕ್ಕೆ ದಾವಣಗೆರೆ ನಗರದ ಭಕ್ತಾದಿಗಳ ವತಿಯಿಂದ ಭಕ್ತಿ ಸಂರ್ಪಣೆಯನ್ನು ಸೆ.6ರಂದು ಸಂಜೆ 6 ಗಂಟೆಗೆ ಹದಡಿ ರಸ್ತೆಯಲ್ಲಿರುವ ಶ್ರೀ ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಲಾಗಿದೆ.

ಸಮಾರಂಭದ ದಿವ್ಯ ಸಾನಿಧ್ಯವನ್ನು ಶ್ರೀ ಮದುಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ ಶ್ರೀ ತರಳಬಾಳು ಜಗದ್ಗುರು ಶ್ರೀ 1108 ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮೀಜಿಯವರು ವಹಿಸಲಿದ್ದಾರೆ.

ಸಿರಿಗೆರೆಯ ತರಳಬಾಳು ಕಲಾ ಸಂಘ ಮತ್ತು ದಾವಣಗೆರೆಯ ಅನುಭವ ಮಂಟಪ ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮವಿರುತ್ತದೆ.

ಕದಳಿ ವೇದಿಕೆಯ ಸದಸ್ಯರಿಂದ ವಚನ ಗಾಯನ, ಮಾಗನೂರು ಬಸಪ್ಪ ಶಾಲಾ ವಿದ್ಯಾರ್ಥಿಗಳಿಂದ ವಚನ ನೃತ್ಯ ಪ್ರದರ್ಶನ, ಹಾಗೂ ವಿನೂತನ ಮಹಿಳಾ ಸಮಾಜದ ತಂಡದವರಿಂದ ನೃತ್ಯ ರೂಪಕ ಕಾರ್ಯಕ್ರಮವಿರುತ್ತದೆ.

ಕಾರ್ಯಕ್ರಮದ ನಂತರ ಎಲ್ಲಾ ಭಕ್ತಾದಿಗಳಿಗೂ ಪ್ರಸಾದ ವ್ಯವಸ್ಥೆ ಇರುತ್ತದೆ.

ಕಾರ್ಯಕ್ರಮಕ್ಕೆ ಸರ್ವ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಭಕ್ತಿ ಸಮರ್ಪಣ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಕೊಡಬೇಕಾಗಿ ವ್ಯವಸ್ಥಾಪಕರು ಕೋರಿದ್ದಾರೆ.

## ಇದೇ 7ರಂದು ಶಿವಶರಣ ಹೂಗಾರ ಮಾದಯ್ಯ ಜಯಂತ್ಯುತ್ಸವ

**ಚಿತ್ರದುರ್ಗ:** ಇದೇ ತಿಂಗಳ 7ರಂದು ಭಾನುವಾರ ಮುಂಜಾನೆ 8–30ಗಂಟೆಗೆ ನಗರದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಶ್ರೀ ಮುರುಗಿಯ ಶಾಂತವೀರ ಮುರುಘರಾಜೇಂದ್ರ ಮಹಾಸ್ವಾಮಿಗಳವರ ಲೀಲಾವಿಶ್ರಾಂತಿ ತಾಣದ ಆವರಣದಲ್ಲಿ ಅರಿವಿನ ಪರಿಮಳ ಸೂಸಿದ ಶಿವಶರಣ ಹೂಗಾರ ಮಾದಯ್ಯನವರ ಜಯಂತ್ಯುತ್ಸವ (ಶರಣೋತ್ಸವ)ವನ್ನು ಹಮ್ಮಿಕೊಳ್ಳಲಾಗಿದೆ.

# 'ಭೋವಿ' ನಿಗಮದಲ್ಲಿ 'ಕಮಿಷನ್' ಆರೋಪ ಬೆನ್ನಲ್ಲೇ ಮೊದಲ ತಲೆದಂಡ: ಅಧ್ಯಕ್ಷ ಸ್ಥಾನಕ್ಕೆ ಎಸ್. ರವಿಕುಮಾರ್ ರಾಜೀನಾಮೆ

**ಬೆಂಗಳೂರು:** ರಾಜ್ಯ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನಕ್ಕೆ ಎಸ್.ರವಿಕುಮಾರ್ ರಾಜೀನಾಮೆ ನೀಡಿದ್ದಾರೆ ಎಂದು ವರದಿಯಾಗಿದೆ. ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ರಾಜಿನಾಮೆ ಪತ್ರ ಸಲ್ಲಿಸಿದ್ದಾರೆ ಎಂದು ಹೇಳಲಾಗುತ್ತಿದೆ.

ಕಮಿಷನ್ ವಸೂಲಿ ಆರೋಪಕ್ಕೆ ಗುರಿಯಾಗಿರುವ ಭೋವಿ ನಿಗಮದ ಅಧ್ಯಕ್ಷ ಎಸ್. ರವಿಕುಮಾರ್ ಗೆ ರಾಜೀನಾಮೆ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದು ಈ ಹಿನ್ನೆಲೆಯಲ್ಲಿ ಅವರು ರಾಜೀನಾಮೆ ನೀಡಿದ್ದಾರೆ.

ಸುಮಾರು 15 ಕೋಟಿ ರೂ. ವೆಚ್ಚದಲ್ಲಿ ಕರ್ನಾಟಕ ರಾಜ್ಯ ಭೋವಿ ಅಭಿವೃದ್ಧಿ ನಿಗಮವು ಭೂಒಡೆತನ ಯೋಜನೆ ಜಾರಿಗೊಳಿಸಲಾಗಿದ್ದು ಈ ಯೋಜನೆಯಡಿ 60 ಎಕರೆ ಖರೀದಿಸಿ ಫಲಾನುಭವಿಗಳಿಗೆ ಹಂಚಿಕೆ ಮಾಡಬೇಕಿತ್ತು. ಈ ಫಲಾನುಭವಿಗಳಿಂದ ಶೇಕಡ 60ರಷ್ಟು ಕಮಿಷನ್



ನಿಗದಿ ಮಾಡಿರುವ ಆರೋಪ ಕೇಳಿ ಬಂದಿತ್ತು. ಈ ಕುರಿತ ವಿಡಿಯೋವೊಂದು ವೈರಲ್ ಆಗಿತ್ತು.

ಈ ಹಿಂದೆ ಮಾತನಾಡಿದ್ದ ರವಿಕುಮಾರ್, ತಮ್ಮ ವಿರುದ್ಧದ ಆರೋಪಗಳನ್ನು ತಳ್ಳಿ ಹಾಕಿದ್ದರು. ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಬಳಸಿ ನನ್ನ ವಿರುದ್ಧ ಪಿತೂರಿ ನಡೆಸಲಾಗಿದೆ. ಆದರೂ ಪಕ್ಷಕ್ಕೆ ಮುಜುಗರ ಉಂಟಾಗುವುದನ್ನು ತಡೆಯಲು ನೈತಿಕ ಹೊಣೆ ಹೊತ್ತು ರಾಜೀನಾಮೆ ಕೊಡಲು ನಿರ್ಧರಿಸಿದ್ದೆ ಎಂದು ಹೇಳಿದ್ದರು. ನಿಗಮದ ಅಧ್ಯಕ್ಷನಾದ ನಂತರ ನಾನು ಯಾರ ಬಳಿಯೂ ಕಮೀಷನ್ ಪಡೆದಿಲ್ಲ. ಯಾರಿಗೂ ಕೊಟ್ಟಿಲ್ಲ. ಎಐ ತಂತ್ರಜ್ಞಾನ ಬಳಸಿಕೊಂಡು ನನ್ನ ಮಾತುಗಳನ್ನು ತಿರುಚಲಾಗಿದೆ. ನಿಗಮದ ಕಚೇರಿಯಲ್ಲಿಯೇ ವಿಡಿಯೊ ಚಿತ್ರೀಕರಿಸಿರುವುದು ಅಚ್ಚರಿ ಮೂಡಿಸಿದೆ. ಈ ಪಿತೂರಿಯಲ್ಲಿ ನಿಗಮದ ಅಧಿಕಾರಿಗಳ ಪಾತ್ರವನ್ನು ಅಲ್ಲಗಳೆಯಲಾಗದು. ಮುಖ್ಯಮಂತ್ರಿ ಮತ್ತು ಡಿಸಿಎಂ ಅವರನ್ನು ಭೇಟಿಯಾಗಿ ವಾಸ್ತವ ಏನೆಂಬುದನ್ನು ಮನವರಿಕೆ ಮಾಡಿಕೊಟ್ಟು ತನಿಖೆ ನಡೆಸುವಂತೆ ಮನವಿ ಮಾಡಲಿದ್ದೇನೆ ಎಂದು ತಿಳಿಸಿದರು.

ಈ ಹಿಂದೆ ಭೋವಿ ಅಭಿವೃದ್ಧಿ ನಿಗಮದಲ್ಲಿ ಬಹು ದೊಡ್ಡ ಹಗರಣವೇ ನಡೆದಿತ್ತು. ಅಧ್ಯಕ್ಷ ಸ್ಥಾನ ಮುಳ್ಳಿನ ಕುರ್ಚಿ ಎಂಬ ಅರಿವು ನನಗಿತ್ತು. ಭ್ರಷ್ಟಾಚಾರ ತಡೆಯಲು ಬಿಗಿ ಕ್ರಮಗಳನ್ನು ಅನುಸರಿಸಿದ್ದೆ. ಈ ಬೆಳವಣಿಗೆಗಳನ್ನು ಸಹಿಸಿಕೊಳ್ಳಲಾಗದ ಕೆಲವರು ಸಂಚು ರೂಪಿಸಿದ್ದಾರೆ ಎಂದು ಹೇಳಿದ್ದರು.

# ಶಾಸಕ ಹರೀಶ್ ವಿರುದ್ಧ ಮಹಿಳಾ ಆಯೋಗಕ್ಕೆ ದೂರು



**ದಾವಣಗೆರೆ:** ಹರಿಹರದ ಶಾಸಕ ಬಿ.ಪಿ. ಹರೀಶ್ ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಅವರಿಗೆ ಪೊಮೆರಿಯನ್ ನಾಯಿಗೆ ಹೋಲಿಕೆ ಮಾಡಿರುವುದನ್ನು ಸಮಾಜ ಸೇವಕ ಮಹಿಳಾ ತಂಡದವರು ಖಂಡಿಸಿದ್ದು, ಶಾಸಕರನ್ನು ತಕ್ಷಣವೇ ಬಂಧಿಸಬೇಕೆಂದು ಮನವಿ ಮಾಡಿದ್ದಾರೆ.

ಸಮಾಜ ಸೇವಕರಾದ ಮಂಜಮ್ಮ, ಸಾವಿತ್ರಮ್ಮ, ಸಲ್ಮಾಬಾನು ಇವರು ಅಪರ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಿಗೆ ಮನವಿ ಸಲ್ಲಿಸಿದ್ದಾರೆ.

# ದಾವಣಗೆರೆ: ಭಾರತೀಯ ಜನತಾ ಪಾರ್ಟಿಯಿಂದ ಬಾಗಿನ ಅರ್ಪಣೆ




**ದಾವಣಗೆರೆ:** ಭಾರತೀಯ ಜನತಾ ಪಾರ್ಟಿ, ಮಾಜಿ ಮಹಾನಗರ ಪಾಲಿಕೆ ಸದಸ್ಯರು ದಾವಣಗೆರೆ ಒಕ್ಕೂಟದಿಂದ ಭದ್ರ ನದಿಗೆ ಬಾಗಿನ ಅರ್ಪಿಸಲಾಯಿತು

ದಾವಣಗೆರೆ ಮಹಾನಗರದ ಜನರ ಕುಡಿಯುವ ನೀರಿನ ಜೀವನಾಡಿ ಆದಂತಹ ಭದ್ರೆಯು ತುಂಬಿ ಹರಿದರೆ ವರ್ಷಪೂರ್ತಿ ನಗರದ ನಾಗರೀಕರಿಗೆ ನೀರಿನ ಬವಣೆ ನೀಗಿಸುತ್ತದೆ ಆದಕಾರಣ ಭದ್ರೆಗೆ ಮಾಜಿ ಮಹಾನಗರ ಪಾಲಿಕೆ ಸದಸ್ಯರು ಮತ್ತು ಪಕ್ಷದ ಮುಖಂಡರೊಂದಿಗೆ ನಮ್ಮೆಲ್ಲರ ಜೀವ ಜಲಕ್ಕೆ ಪೂಜೆ ಸಲ್ಲಿಸಿ ಬಾಗಿನ ಸಲ್ಲಿಸಲಾಯಿತು ಮತ್ತು ಪ್ರತಿ ವರ್ಷ ಇದೆ ರೀತಿ ತುಂಬಿ ಹರಿಯುವ ಮೂಲಕ ರೈತರ ಜೀವನ ಹಸನು ಮಾಡಲಿ ಎಂಬ ಪ್ರಾರ್ಥನೆಯನ್ನು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾಜಿ ಮಹಾಪೌರರಾದ ವಸಂತ ಕುಮಾರ್, ಹೆಚ್ ಎನ್. ಗುರುನಾಥ್ , ಉಪಮಹಾಪೌರರಾದ ಪಿ.ಎಸ್. ಜಯಣ್ಣ, ಮಾಜಿ ವಿಪಕ್ಷ ನಾಯಕರಾದ ಪ್ರಸನ್ನ ಕುಮಾರ್ ಮಾಜಿ ಸದಸ್ಯರಾದ ಹೆಚ್ ಎನ್ ಶಿವಕುಮಾರ್, ಕೃಷ್ಣಮೂರ್ತಿ ಪವಾರ್, ಸಂಕೋಳ್ ಚಂದ್ರಶೇಖರ, ಯೋಗೀಶ್, ಜಯಪ್ರಕಾಶ್ , ಸುರೇಶ , ಶಿವರಾಜಪಾಟೀಲ್ , ಅವರಗೆರೆ ಸುರೇಶ, ಸಿದ್ದೇಶ್ ಮುಖಂಡರಾದ ಪ್ರಭು ಕಲ್ಬುರ್ಗಿ ,ಬೇತೂರ್ ಬಸವರಾಜ್, ಎಂ ಏನ್ ಶಿವಾಜಿರಾವ್ , ವೆಂಕಟೇಶ್ ಕಾಟೆ , ಗೌಳಿ ಲಿಂಗರಾಜ್,ಮಂಜು ಗಾಂಧಿನಗರ, ವಿನಯ್ ದಿಳ್ಯಪ್ಪ , ವಿಜಯ್ ಕುಮಾರ್ ಮತ್ತಿತರರಿದ್ದರು.

# ಶಿಕ್ಷಕರ ದಿನಾಚರಣೆ ಗುರುಶಿಷ್ಯರ ಸಂಗಮಕ್ಕೆ ಸಾಕ್ಷಿಯಾಗಬೇಕಿದೆ: ಶಾಸಕ ದೇವೇಂದ್ರಪ್ಪ

**ಜಗಳೂರು :** ಶಿಕ್ಷಕರ ದಿನಾಚರಣೆ ಗುರುಶಿಷ್ಯರ ಸಂಗಮಕ್ಕೆ ಸಾಕ್ಷಿಯಾಗಬೇಕಿದೆ. ವ್ಯಕ್ತಿ ಯಾವುದೇ ಉತ್ತುಂಗದ ಸ್ಥಾನಕ್ಕೆ ಬೆಳೆದರೂ ಗುರುವಿಗೆ ಶಿಷ್ಯನು ಎಂಬುದನ್ನು ಮರೆಯಬಾರದು. ಎಂದು ಶಾಸಕ ಬಿ.ದೇವೇಂದ್ರಪ್ಪ ಹೇಳಿದರು.

ಪಟ್ಟಣದ ವಾಲ್ಮೀಕಿ ಭವನದಲ್ಲಿ 137ನೇ ಡಾ.ರಾಧಕೃಷ್ಣನ್ ಜಯಂತಿ ಅಂಗವಾಗಿ ಶುಕ್ರವಾರ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

. ಕ್ಷೇತ್ರದಲ್ಲಿ ಅಧಿಕಾರಿಗಳಿಂದ ಅಭಿವೃದ್ಧಿ ಕೆಲಸ ನಿರೀಕ್ಷಿಸುವೆ, ಅಧಿಕಾರಿಗಳಿಗೆ ಭಯಪಡಿಸುವುದಿಲ್ಲ ಅಧಿಕಾರಿಗಳಿಗೆ ರಕ್ಷಣೆಯಾಗಿರುವೆ. ಇದುವರೆಗೂ ತಾಲ್ಲೂಕಿನಲ್ಲಿ ಒಂದೂ ಜಾತಿನಿಂದನೆ ಕೇಸ್ ದಾಖಲಾಗಿಲ್ಲ. ಅದಕ್ಕೆ ಅವಕಾಶ ನೀಡಿಲ್ಲ. ಕ್ಷೇತ್ರದ ಅಭಿವೃದ್ಧಿಯೇ ನನ್ನ ಆಧ್ಯತೆಯಾಗಿದೆ. ಇತ್ತೀಚೆಗೆ ಸಮಾಜದಲ್ಲಿ ಎಷ್ಟೇ ಸಂಪತ್ತು ಹೊಂದಿದ್ದರೂ ನೆಮ್ಮದಿ, ನಿದ್ರೆ ಸಿಗುತ್ತಿಲ್ಲ. ಮೊಬೈಲ್ ಸಂಸ್ಕೃತಿಯಿಂದ ಮಕ್ಕಳು ಸಂಸ್ಕಾರದಿಂದ ವಿಮುಖಗೊಂಡು ಶ್ವೇಚ್ಛಾಚಾರ ಮೆರೆದು ಕೌಟುಂಬಿಕ ಕಲಹಗಳು ಹೆಚ್ಚಾಗುತ್ತಿವೆ ಎಂದರು.

ಸಾಹಿತಿ ಸಹಾಯಕ ಪ್ರಾಧ್ಯಾಪಕ ಅರುಣ್ ಜೋಳದ ಕೂಡ್ಲಿಗಿ ಪ್ರಸ್ತುತ ಶಿಕ್ಷಕರ ಮುಂದಿನ ಸವಾಲು ಕುರಿತು ಉಪನ್ಯಾಸ ನೀಡಿದ ಅವರು, ಮೈಸೂರು ಸಂಸ್ಥಾನದಲ್ಲಿ ದಿವಾನರಾಗಿ ಸೇವೆಸಲ್ಲಿಸಿ ರಾಜ್ಯದಲ್ಲಿ 1000 ಶಾಲೆಗಳನ್ನು ಸ್ಥಾಪಿಸಿ, ಪ್ರತಿ ತಾಲ್ಲೂಕುವಾರು ಮೂರು ಮಾಧ್ಯಮಶಾಲೆ ತೆರೆದು, ವಯಸ್ಕರ ಶಿಕ್ಷಣ ಜಾರಿಗೆ ತಂದ ಜಗಳೂರಿನ ಇಮಾಂ ಸಾಹೇಬರನ್ನು ಪ್ರತಿಯೊಬ್ಬರೂ ಸ್ಮರಿಸಬೇಕು ಎಂದರು.ಶಿಕ್ಷಕರು ಬಸವಣ್ಣನ ನಡೆನುಡಿ, ಬುದ್ದನ ಅರಿವಿನ ಗುಣ ಅಳವಡಿಸಿಕೊಂಡು ಭಾರತ ಸಂವಿಧಾನದ ಕನಸ್ಸುಗಳನ್ನು ಮಕ್ಕಳ ಮನಸ್ಸಿನಲ್ಲಿ ಭಿತ್ತಿದರೆ ಶಿಕ್ಷಣ ಕ್ರಾಂತಿ ಸಾಧ್ಯ. ಅಂಬೇಡ್ಕರ್ ಅವರ ಮೊದಲ ಸೂತ್ರ ಶಿಕ್ಷಣವಾಗಿದ್ದು ಶಿಕ್ಷಣ ಮತ್ತು ಪ್ರಜಾಪ್ರಭುತ್ವ ಸಾಧಿಸುವ ಆಶಯ ಸಾಕಾರಗೊಳಿಸಬೇಕು ಎಂದರು.



ಸಮಾರಂಭದಲ್ಲಿ ನಿವೃತ್ತ ಶಿಕ್ಷಕ, ಉಪನ್ಯಾಸಕರನ್ನು, ಎಸ್.ಎಸ್.ಎಲ್.ಸಿ. ಪಿಯುಸಿ ಪರೀಕ್ಷೆಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ಪಾಸಾದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ, ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮಕ್ಕೂ ಮುನ್ನ ಅಂಬೇಡ್ಕರ್ ವೃತ್ತದಲ್ಲಿ ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಸಲ್ಲಿಸಿ, ರಾಧಕೃಷ್ಣನ್, ಸಾವಿತ್ರಿಭಾಯಿಪುಲೆ, ಭಾವಚಿತ್ರದೊಂದಿಗೆ ಬೆಳ್ಳಿ ಸಾರೋಟು, ಉರಿಮೆ, ತಮಟೆ, ಕಹಳೆ, ವಿವಿಧ ವಾದ್ಯ ವೃಂದಗಳೊಂದಿಗೆ ಮಹಾತ್ಮಗಾಂಧಿ ವೃತ್ತದ ಮೂಲಕ ವೇದಿಕೆಗೆ ಆಗಮಿಸಿತು.

ಈ ಸಂದರ್ಭದಲ್ಲಿ ಶಾಸಕರ ದರ್ಮಪತ್ನಿ ತಿಪ್ಪಮ್ಮ ಬಿ.ದೇವೇಂದ್ರಪ್ಪ, ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಎ.ಎಲ್ ತಿಪ್ಪೇಸ್ವಾಮಿ, ಗ್ಯಾರಂಟಿ ಸಮಿತಿ ಅಧ್ಯಕ್ಷ ಷಂಷೀರ್ ಅಹಮ್ಮದ್, ಪಿ.ಎಲ್. ಡಿ. ಬ್ಯಾಂಕ್ ಅಧ್ಯಕ್ಷ ಹಾಲಸ್ವಾಮಿ, ಡಿಡಿಪಿಐ ಕರಿಸಿದ್ದಪ್ಪ, ತಾ.ಪಂ ಇ.ಓ ಕೆಂಚಪ್ಪ, ಬಿಇಓ ಹಾಲಮೂರ್ತಿ, ಬಿಆರ್ ಸಿ ಡಿ.ಡಿ ಹಾಲಪ್ಪ, ಇತರರು ಇದ್ದರು.

# ಬೀರೂರಿನಲ್ಲಿ ಯುವ ಸಾಹಿತ್ಯ ಸಮ್ಮೇಳನ ಶೀಘ್ರ ಆಯೋಜನೆ :ಸೂರಿ ಶ್ರೀನಿವಾಸ್

**ಚಿಕ್ಕಮಗಳೂರು:** ಕನ್ನಡ ಕಟ್ಟುವ ಯುವಕರು ಇಂದಿನ ತುರ್ತು ಅಗತ್ಯವಾಗಿದೆ. ಯುವಕರು ಭವ್ಯ ಭಾರತದ ಆಸ್ತಿ ಇದ್ದಂತೆ, ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಅವರ ಪಾತ್ರ ತುಂಬಾ ಹಿರಿದಾಗಿದೆ. ನಮ್ಮ ಜಿಲ್ಲೆಯಲ್ಲಿ ಕಸಾಪ ಯುವ ಘಟಕ ಪ್ರಾರಂಭವಾಗುತ್ತಿದೆ. ಮುಂದಿನ ದಿನಗಳಲ್ಲಿ ಬೀರೂರಿನಲ್ಲಿ ಜಿಲ್ಲಾ ಮಟ್ಟದ ಯುವ ಸಾಹಿತ್ಯ ಸಮ್ಮೇಳನ ಆಯೋಜಿಸಲಾಗುವುದು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸೂರಿ ಶ್ರೀನಿವಾಸ್ ತಿಳಿಸಿದರು.

ಅವರು ಕಡೂರಿನ ಕನ್ನಡ ಭವನದಲ್ಲಿ ನಡೆದ ಕನ್ನಡ ಸಾಹಿತ್ಯ ಪರಿಷತ್ತು ಕಡೂರು ತಾಲ್ಲೂಕು ಯುವ ಘಟಕದ ಉದ್ಘಾಟನಾ ಸಮಾರಂಭ ಹಾಗೂ ಸೇವಾ ದೀಕ್ಷೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಬೀರೂರಿನಲ್ಲಿ ನಡೆಯುವ ಯುವ ಸಾಹಿತ್ಯ ಸಮ್ಮೇಳನದ ಸ್ವಾಗತ ಸಮಿತಿಯ ಅಧ್ಯಕ್ಷರನ್ನಾಗಿ ಸವಿತಾ ರಮೇಶ್ ಅವರನ್ನು ಸಭೆ ಆಯ್ಕೆ ಮಾಡಿಕೊಂಡಿದ್ದಕ್ಕೆ ಒಪ್ಪಿಗೆ ಸೂಚಿಸಿದರು.

ಕಸಾಪ ಮಹಿಳಾ ಘಟಕದ ಅಧ್ಯಕ್ಷರಾದ ಲತಾ ರಾಜಶೇಖರ್ ತಾಯಿ ಭುವನೇಶ್ವರಿಗೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ನಮ್ಮ ತಾಲೂಕಿನಲ್ಲಿ ಜಿಲ್ಲಾಮಟ್ಟದ ಕಾರ್ಯಾಗಾರಗಳನ್ನು ಮತ್ತು ವಿಚಾರ ಸಂಕಿರಣಗಳನ್ನು ಆಯೋಜಿಸಲಾಗುವುದು ಎಂದು ತಿಳಿಸಿದರು.

ಸೇವಾ ದೀಕ್ಷ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಮಹಿಳಾ ಘಟಕದ ಪ್ರಧಾನ ಕಾರ್ಯದರ್ಶಿಗಳಾದ ಸವಿತಾ ರಮೇಶ್ ಮಾತನಾಡಿ, ಯುವ ಘಟಕದ ಮೂಲಕ ವಿನೂತನವಾದಂತ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಯುವ ಘಟಕವನ್ನು ಚೇತನಗೊಳಿಸುವುದು ಮಾರ್ಗದರ್ಶನ ನೀಡುವುದು



ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ತಿಳಿಸಿದರು.

ನೂತನ ಪದಾಧಿಕಾರಿಗಳಿಗೆ ಕಸಾಪ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಎಸ್.ಎಸ್.ವೆಂಕಟೇಶ್ ಸೇವಾ ದೀಕ್ಷೆ ಬೋಧಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಕಸಾಪ ಜಿಲ್ಲಾ ಯುವ ಘಟಕ ಅಧ್ಯಕ್ಷರಾದ ಪ್ರಿಯಾಂಕಾ ಭರತ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಸಾಪ ಜಿಲ್ಲಾ ಕೋಶಾಧ್ಯಕ್ಷರಾದ ಬಿ. ಪ್ರಕಾಶ್ ನೂತನ ಅಧ್ಯಕ್ಷರಿಗೆ ಧ್ವಜ ಹಸ್ತಾಂತರ ಮಾಡಿದರು.

ತಾಲ್ಲೂಕು ಅಧ್ಯಕ್ಷರಾದ ಚಿಕ್ಕನಲ್ಲೂರು ಎಸ್.ಪರಮೇಶ್ ಅಧ್ಯಕ್ಷತೆ ವಹಿಸಿದ್ದರು.

ಕಸಾಪ ತಾಲ್ಲೂಕು ಘಟಕದ ಅಧ್ಯಕ್ಷರಾಗಿ ಚೇತನ್‌ಕುಮಾರ್ ಕೆ.ವಿ, ಗೌರವಾಧ್ಯಕ್ಷರಾಗಿ ಭರತ್ ಕೆಂಪರಾಜು ಹಾಗೂ ಮರಗುದ್ದಿ ಮನು, ಕಾರ್ಯದರ್ಶಿಗಳಾಗಿ ಶಬರೀಶ್ ಜೀವ ಹಾಗೂ ಕಲ್ಲೇಶ್ ಎಸ್ ನಗರ್ಕರ್, ಗೌರವ ಸಲಹೆಗಾರರಾಗಿ ಸವಿತಾ ರಮೇಶ್, ಶ್ರೀಧರ್ ಹಾಗೂ ಮಂಜುನಾಥ ಜೈನ್, ಪ್ರಧಾನ ಸಂಚಾಲಕರಾಗಿ ಅರುಣ್ , ಕುಮಾರ್, ರಕ್ಷಿತ್.ಸಿ, ವೆಂಕಟೇಶ್, ಸಂಘಟನಾ ಕಾರ್ಯದರ್ಶಿಗಳಾಗಿ ದೇವರಾಜು ಹಾಗೂ ವಿಜಯ್ ವರ್ಣೇಕರ್, ಯುವ ಘಟಕದ ಹೋಬಳಿ ಅಧ್ಯಕ್ಷರುಗಳಾಗಿ ಕುರುಬ ಗೆರೆ ಲೋಕೇಶ್ ಕಡೂರು ಕಸಬಾ ಹೋಬಳಿ, ಸುಪ್ರೀತ್ ಬೀರೂರು ಹೋಬಳಿ ದಿಲೀಪ್ ಹುಲಿಕೆರೆ ಸಖರಾಯಪಟ್ಟಣ ಹೋಬಳಿ, ಸಂದೀಪ್, ಚೌಳಹಿರಿಯೂರು ಹೋಬಳಿ, ವರುಣ್ ಹೆಚ್.ಟಿ ಹಿರೇನಲ್ಲೂರು ಹೋಬಳಿ, ಗಿರೀಶಾರಾಧ್ಯ ಸಿಂಗಟಗೆರೆ ಹೋಬಳಿ, ಸಂಜಯ್ ಪಂಚನಹಳ್ಳಿ ಹೋಬಳಿ ಗಗನ್ ರಾಥೋಡ್ ಕಡೂರು ನಗರ ಹೆಸರುಗಳನ್ನು ಘೋಷಣೆ ಮಾಡಲಾಯಿತು.

ಪಂಚನಹಳ್ಳಿ ಹೋಬಳಿ ಅಧ್ಯಕ್ಷರಾದ ಜಯ ಸ್ವಾಮಿ ಕಸಬಾ ಹೋಬಳಿ ಅಧ್ಯಕ್ಷರಾದ ಕೆ.ಜಿ ವಸಂತ್‌ಕುಮಾರ್ ಯಗಟಿ ಹೋಬಳಿ ಅಧ್ಯಕ್ಷರು ರುದ್ರಚಾರ್ ಹಾಗೂ ಕಸಾಪ ಯುವ ಘಟಕದ ವಿವಿಧ ಜವಾಬ್ದಾರಿ ಪದಾಧಿಕಾರಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮನ್ನು ಕು.ಬಿಂದು ನಿರೂಪಿಸಿ, ಜಯಸ್ವಾಮಿ ವಂದಿಸಿದರು.

# ಇಂದಿನ ರಾಶಿ ಭವಿಷ್ಯ

## ಮೇಷ ರಾಶಿ

ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ನೀವು ಕುಟುಂಬದ ಸದಸ್ಯರ ಜೊತೆ ಸ್ವಲ್ಪ ತೊಂದರೆ ಹೊಂದಿದ್ದರೂ ಇದು ನಿಮ್ಮ ಮನಶ್ಶಾಂತಿಯನ್ನು ಹಾಳು ಮಾಡಲು ಅವಕಾಶ ನೀಡಬೇಡಿ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ.

## ವೃಷಭ ರಾಶಿ

ನಿಮ್ಮ ಆರೋಗ್ಯ ಸುಧಾರಿಸಲು ಸಹಕಾರಿಯಾಗುವ ಕೆಲಸಗಳನ್ನು ಮಾಡಬಹುದಾದ ಒಂದು ದಿನ. ಈ ರಾಶಿಚಕ್ರಕ್ಕೆ ಸಂಬಂಧಿಸಿದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ವಿಷಯದ ಬಗ್ಗೆ ಹಣವನ್ನು ಖರ್ಚುಮಾಡಬಹುದು ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ. ಅವರೊಂದಿಗೆ ನಿಮ್ಮ ಗುಣಮಟ್ಟದ ಸಮಯ ಕಳೆಯಿರಿ.

## ಮಿಥುನ ರಾಶಿ

ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಉದ್ಯೋಗಕ್ಕೆ ಸಂಬಂಧಿಸಿರುವ ಜನರಿಗೆ ಇಂದು ಹಣದ ಬಹಳಷ್ಟು ಅಗತ್ಯವಿರುತ್ತದೆ ಆದರೆ ಹಿಂದಿನ ದಿನಗಳಲ್ಲಿ ಮಾಡಲಾಗಿರುವ ಅನಗತ್ಯ ಖರ್ಚುಗಳ ಕಾರಣದಿಂದಾಗಿ ಅವರ ಹತ್ತಿರ ಸಾಕಷ್ಟು ಹಣ ಇರುವುದಿಲ್ಲ. ಇಂದು ನೀವು ಸೀಮಿತ ತಾಳ್ಮೆ ಹೊಂದಿರುತ್ತೀರಿ ಆದರೆ ಕಠಿಣ ಅಥವಾ ಅಸಮತೋಲಿತ ಪದಗಳು ನಿಮ್ಮ ಸುತ್ತಲಿನ ಜನರ ಅಸಮಾಧಾನಕ್ಕೆ ಕಾರಣವಾಗಬಹುದಾದ್ದರಿಂದ ಎಚ್ಚರಿಕೆಯಿಂದಿರಿ.

## ಕರ್ಕ ರಾಶಿ

ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ನಿಮ್ಮ ಹಣ ಖರ್ಚಾಗುತ್ತಿದೆ ಎಂಬುದರ ಮೇಲೆ ನಿಗಾ ಇರಿಸುವ ಅಗತ್ಯವಿದೆ ಇಲ್ಲದಿದ್ದರೆ ಮುಂಬರುವ ಸಮಯದಲ್ಲಿ ನೀವು ತೊಂದರೆಗೊಳಗಾಗಬಹುದು ನಿಮ್ಮ ಕುಟುಂಬದೊಂದಿಗೆ ಸಾಮಾಜಿಕ ಚಟುವಟಿಕೆ ಎಲ್ಲರನ್ನೂ ಆರಾಮವಾಗಿ ಮತ್ತು ಆಹ್ಲಾದಕರ ಮನಸ್ಥಿತಿಯಲ್ಲಿಡುತ್ತದೆ. ಇಂದು ಯಾರನ್ನೂ ಚುಡಾಯಿಸಬೇಡಿ.

## ಸಿಂಹ ರಾಶಿ

ಇಂದು ನೀವು ಆರಾಮವಾಗಿರಬೇಕು ಹಾಗೂ ನಿಕಟ ಸ್ನೇಹಿತರು ಮತ್ತು ಕುಟುಂಬದ ಎಲ್ಲಾ ಸದಸ್ಯರನ್ನು ಸಂತೋಷವಾಗಿರಿಸಲು ಪ್ರಯತ್ನಿಸಬೇಕು. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ಇಂದು ನೀವು ಹಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು.

## ಕನ್ಯಾ ರಾಶಿ

ಕ್ರೀಡೆಗಳು ಮತ್ತು ಇತರ ಹೊರಾಂಗಣ ಚಟುವಟಿಕೆಗಳಲ್ಲಿ ಭಾಗವಹಿಸುವುದು ನಿಮ್ಮ ಕಳೆದುಕೊಂಡ ಚೈತನ್ಯವನ್ನು ಸಂಗ್ರಹಿಸಲು ಸಹಾಯ ಮಾಡುತ್ತದೆ. ಹಣ ನಿಮಗೆ ಅಗತ್ಯವಾಗಿದೆ ಆದರೆ ನಿಮ್ಮ ಸಂಬಂಧಗಳನ್ನು ಹಾಳುಮಾಡುವಷ್ಟು ಹಣದ ಬಗ್ಗೆ ಗಂಭೀರವಾಗಬೇಡಿ. ನಿಮ್ಮ ಅಸಡ್ಡೆಯ ವರ್ತನೆ ಪೋಷಕರನ್ನು ಚಿಂತೆಗೀಡು ಮಾಡಬಹುದು.

## ತುಲಾ ರಾಶಿ

ನೀವು ಸಂದಿಗ್ಧ ಪರಿಸ್ಥಿತಿಯನ್ನು ಎದುರಿಸಿದಲ್ಲಿ ಖಿನ್ನತೆಗೊಳಗಾಗಬೇಡಿ. ಆಹಾರದ ಸ್ವಾದಕ್ಕೆ ಉಪ್ಪು ಬೇಕಾದ ಹಾಗೆ ಅತೃಪ್ತಿಯಿಂದ ಮಾತ್ರ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ನಿಮ್ಮ ಮನಸ್ಥಿತಿಯನ್ನು ಬದಲಾಯಿಸಲು ಕೆಲವು ಸಾಮಾಜಿಕ ಸಮಾರಂಭಗಳಿಗೆ ಹಾಜರಾಗಿ. ಅನಿರೀಕ್ಷಿತ ಬಿಲ್‌ಗಳು ಹಣಕಾಸಿನಹೊರೆಯನ್ನು ಹೆಚ್ಚಿಸುತ್ತದೆ. ಸ್ನೇಹಿತರು ಮತ್ತು ಕುಟುಂಬದ ಸದಸ್ಯರು ನಿಮ್ಮ ಹೆಚ್ಚಿನ ಸಮಯ ತೆಗೆದುಕೊಳ್ಳುತ್ತಾರೆ.

## ವೃಶ್ಚಿಕ ರಾಶಿ

ಎಣ್ಣೆಯುಕ್ತ ಮತ್ತು ಮಸಾಲೆಯುಕ್ತ ಆಹಾರ ತಪ್ಪಿಸಿ. ವಿದೇಶದಲ್ಲಿ ವ್ಯಾಪಾರ ಮಾಡುವ ಈ ರಾಶಿಚಕ್ರದ ಜನರಿಗೆ ಇಂದು ಸಾಕಷ್ಟು ಹಣದ ಲಾಭವನ್ನು ಪಡೆಯಬಹುದು. ನಿಮ್ಮ ಜ್ಞಾನದಾಹ ನಿಮಗೆ ಹೊಸ ಸ್ನೇಹಿತರನ್ನು ಪಡೆಯಲು ಸಹಾಯ ಮಾಡುತ್ತದೆ. ನೀವು ಸಂತೋಷ ನೀಡುವ ಮೂಲಕ ಮತ್ತು ಹಿಂದಿನ ತಪ್ಪುಗಳನ್ನು ಮನ್ನಿಸುವ ಮೂಲಕ ನಿಮ್ಮ ಜೀವನವನ್ನು ಸಮರ್ಥಗೊಳಿಸಲಿದ್ದೀರಿ.

## ಧನು ರಾಶಿ

ಕಿಕ್ಕಿರಿದ ಬಸ್‌ನಲ್ಲಿ ಪ್ರಯಾಣಿಸುವಾಗ ರಕ್ತದೊತ್ತಡವಿರುವ ರೋಗಿಗಳು ಅವರ ಆರೋಗ್ಯದ ಬಗ್ಗೆ ಹೆಚ್ಚು ಎಚ್ಚರಿಕೆ ವಹಿಸಬೇಕು. ಇಂದು ಸುಮ್ಮನೆ ಕುಳಿತುಕೊಳ್ಳುವ ಬದಲು –ಏಕೆ ಏನನ್ನಾದರೂ ಮಾಡಬಾರದು ಇದು ನಿಮ್ಮ ಗಳಿಕೆಯ ಶಕ್ತಿಯನ್ನು ಸುಧಾರಿಸುತ್ತದೆ. ನಿಮ್ಮನ್ನು ಈ ಮೊದಲು ಆಮಂತ್ರಿಸಿರದಿದ್ದಲ್ಲಿ ಆಮಂತ್ರಿಸಿದಲ್ಲಿ –ಆಹ್ವಾನವನ್ನು ಸಭ್ಯತೆಯಿಂದ ಸ್ವೀಕರಿಸಿ. ಪ್ರೀತಿ ಮಿತಿಯಿಲ್ಲದ್ದಾಗಿದೆ, ಅಪಾರವಾಗಿದೆ;ನೀವು ಈ ಮುಂಚೆ ಈ ವಿಷಯಗಳನ್ನು ಕೇಳಿರಬೇಕು. ಆದರೆ ಇಂದು, ನೀವು ಇದನ್ನು ಅನುಭವಿಸುತ್ತೀರಿ.

## ಮಕರ ರಾಶಿ

ನಿಮ್ಮ ಆಹಾರವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ ಮತ್ತು ಫಿಟ್ ಆಗಿ ಉಳಿಯಲು ವ್ಯಾಯಾಮ ಮಾಡಿ. ಇಂದು ನೀವು ಆಲ್ಕೊಹಾಲ್ಯುಕ್ತ ಮದ್ಯವನ್ನು ಸೇವಿಸಬಾರದು, ಮಾದಕತೆಯ ಸಂದರ್ಭದಲ್ಲಿ ನೀವು ಯಾವುದೇ ಬೆಲೆಬಾಳುವ ವಸ್ತುಗಳನ್ನು ಕಳೆದುಕೊಳ್ಳಬಹುದು. ಕುಟುಂಬದ ಸದಸ್ಯರು ಅಥವಾ ಸಂಗಾತಿ ಕೆಲವು ಆತಂಕಗಳನ್ನು ಉಂಟುಮಾಡುತ್ತಾರೆ. ಯಾರಾದರೂ ನಿಮ್ಮ ಹೆಸರು ಕೆಡಿಸಲು ಪ್ರಯತ್ನಿಸಬಹುದದ್ದರಿಂದ ಜಾಗರೂಕರಾಗಿರಿ. ಇಂದು ನೀವು ಅಂದುಕೊಂಡಿದ್ದಕ್ಕಿಂತಲೂ ಹೆಚ್ಚು ನಿಮ್ಮ ಜೀವನದಲ್ಲಿ ತೆರೆಮರೆಯಲ್ಲಿ ನಡೆಯುತ್ತಿದೆ.


## ಕುಂಭ ರಾಶಿ

ಒತ್ತಡದ ಕೆಲಸದ ವೇಳಾಪಟ್ಟಿ ನಿಮ್ಮ ಸಹನೆಯನ್ನು ಕೆಣಕಬಹುದು. ಇಂದು ಮಾಡಿದ ಹೂಡಿಕೆ ನಿಮ್ಮ ಅಭ್ಯುದಯ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸುತ್ತದೆ. ಸಂಬಂಧಿಕರು ಮತ್ತು ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು. ನಿಮ್ಮ ಮನದನ್ನೆಯ ವಿಚಿತ್ರ ನಡವಳಿಕೆ ನಿಮ್ಮ ಮನಸ್ಥಿತಿಗೆ ಅಸಮಾಧಾನ ತರಬಹುದು. ಇಂದು ಹೆಚ್ಚಿನ ಸಾಧನೆ ಮತ್ತು ಉನ್ನತ ಪ್ರೊಫೈಲ್‌ಗೆ ಒಂದು ಒಳ್ಳೆಯ ದಿನ. ನಿಮ್ಮ ಜೀವನದಲ್ಲಿ ನಂತರ ವಿಷಾದಿಸಬಹುದಾದ ಆತುರದ ನಿರ್ಧಾರಗಳನ್ನು ಕೈಗೊಳ್ಳಬೇಡಿ. ಇಂದು ನಿಮ್ಮ ಮದುವೆಯಲ್ಲಿನ ಒಂದು ಕಠಿಣ ಸಮಯವಾಗಿರಬಹುದು.

## ಮೀನ ರಾಶಿ

ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ನಿಮ್ಮ ಸಹೋದರ–ಸಹೋದರಿಯರಲ್ಲಿ ಒಬ್ಬರು ಇಂದು ನಿಮ್ಮಿಂದ ಹಣವನ್ನು ಎರವಲು ಪಡೆಯಬಹುದು, ನೀವು ಅವರಿಗೆ ಹಣವನ್ನು ಸಾಲವಾಗಿ ಕೊಡುತ್ತೀರಿ ಆದರೆ ಇದರಿಂದ ನಿಮ್ಮ ಆರ್ಥಿಕ ಪರಿಸ್ಥಿತಿ ಹದಗೆಡಬಹುದು. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಸೇಷ ಸ್ಥಾನವನ್ನು ಹೊಂದಿರುತ್ತಾರೆ.

# ಮಹಾಗಣಪತಿ ವಿಶೇಷ ಪೂಜೆಯಲ್ಲಿ ಪಾಲ್ಗೊಂಡ ಜಿ. ಬಿ. ವಿನಯ್ ಕುಮಾರ್



**ದಾವಣಗೆರೆ:** ಹರಿಹರ ನಗರದಲ್ಲಿ ಹಿಂದೂ ಜಾಗರಣ ವೇದಿಕೆ ಪ್ರತಿಷ್ಠಾಪಿಸಿರುವ ಪ್ರಯುಕ್ತ ಏರ್ಪಡಿಸಿದ್ದ ಮಹಾಗಣಪತಿ ವಿಶೇಷ ಪೂಜೆಯಲ್ಲಿ ಇನ್ ಸೈಟ್ಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕರೂ ಆದ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಪಾಲ್ಗೊಂಡರು.


ಈ ವೇಳೆ ಮಾತನಾಡಿದ ವಿನಯ್ ಕುಮಾರ್ ಅವರು, ಮಹಾಗಣಪತಿ ವಿಶೇಷ ಪೂಜೆ ಹಾಗೂ ಹೋಮದಲ್ಲಿ ಪಾಲ್ಗೊಂಡಿದ್ದು ಸಂತೋಷ ತಂದಿದೆ. ಗಣೇಶನು ಎಲ್ಲರಿಗೂ ಒಳ್ಳೆಯದಾಗಲಿ, ರೈತರು ಮತ್ತು ನಾಡಿನ ಜನತೆಗೆ ಒಳಿತಾಗಲಿ ಎಂದು ಪ್ರಾರ್ಥಿಸಿದರು.

ಗಣೇಶ ಹಬ್ಬವು ವಿಜೃಂಭಣೆ ಹಾಗೂ ಸಂಭ್ರಮದಿಂದ ನಡೆಯುತ್ತಿದೆ. ಹಿಂದೂ ಜಾಗರಣ ವೇದಿಕೆಯವರು ಪ್ರತಿಷ್ಠಾಪಿಸಿರುವ ಮಹಾಗಣಪತಿ ಹಾಗೂ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರಿಂದ ಮನಸ್ಸಿಗೆ ಮುದ ನೀಡಿತು. ಸಾಮರಸ್ಯದಿಂದ ಸಹೋದರ ಭಾವನೆಯಿಂದ ಹಬ್ಬ ಆಚರಿಸುತ್ತಿರುವುದು ಒಳ್ಳೆಯ ಬೆಳವಣಿಗೆ ಎಂದು ಅಭಿಪ್ರಾಯಪಟ್ಟರು.

ಭಕ್ತಾದಿಗಳಿಗೆ ಪ್ರಸಾದವನ್ನು ನೀಡುವ ಮೂಲಕ ಜಿ. ಬಿ. ವಿನಯ್ ಕುಮಾರ್ ಅವರು ಗಮನ ಸೆಳೆದರು. ಇದೇ ವೇಳೆ ಜಿ. ಬಿ. ವಿನಯ್ ಕುಮಾರ್ ಅವರಿಗೆ ಹಿಂದೂ ಮಹಾಗಣಪತಿ ಬಳಗದ ವತಿಯಿಂದ ಸನ್ಮಾನಿಸಿ ಬೀಳ್ಕೊಡಲಾಯಿತು. ಯುವ ಮುಖಂಡರಾದ ಸುರೇಶ್ ಪೈಲ್ವಾನ್, ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷರು ಹಾಗೂ ಬಿಜೆಪಿ ಮುಖಂಡ ವೀರೇಶ್ ಹನಗವಾಡಿ, ಹನುಮಂತಣ್ಣ, ಹಿರಿಯರಾದ ಶಿವಕುಮಾರ್ ಸಂಬಳಿ, ನಾಗರಾಜ್ ಭಂಡಾರಿ, ಕೃಷ್ಣಮೂರ್ತಿ ಶೆಟ್ಟಿ, ಅರ್ಚಕರಾದ ದೇಶಪಾಂಡೆ, ಜಿಮ್ ರವಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಬಾಪೂಜಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಾವೀನ್ಯತಾ ಜನಸಂಪರ್ಕ ಅಭಿಯಾನ

# ಐಟಿ, ಬಿಟಿ ತಂತ್ರಜ್ಞಾನ ಅಭಿವೃದ್ಧಿ ಅವಕಾಶಗಳ ಅನಾವರಣ



**ದಾವಣಗೆರೆ:** ನಗರದ ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದ ಎಸ್. ಎಸ್. ಮಲ್ಲಿಕಾರ್ಜುನ ಸಾಂಸ್ಕೃತಿಕ ಕೇಂದ್ರದಲ್ಲಿ ಗುರುವಾರ ಕರ್ನಾಟಕ ಸರ್ಕಾರದ ಎಲೆಕ್ಟ್ರಾನಿಕ್ಸ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ ಮತ್ತು ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದ ಸಹಯೋಗದೊಂದಿಗೆ "ನಾವೀನ್ಯತಾ ಜನಸಂಪರ್ಕ ಅಭಿಯಾನ ಕಾರ್ಯಕ್ರಮ" ನಡೆಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ಸ್ಟಾರ್ಟ್ ಅಪ್ ನೀತಿ, ಜೈವಿಕ ತಂತ್ರಜ್ಞಾನ, ಮಾಹಿತಿ ತಂತ್ರಜ್ಞಾನ, ಬಾಹ್ಯಾಕಾಶ ನೀತಿ ಹೀಗೆ ಹಲವಾರು ಇಲಾಖೆಯ ವೈವಿಧ್ಯಮಯ ನೀತಿಗಳು ಮತ್ತು ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಯಿತು.

ಇದರೊಂದಿಗೆ ಕರ್ನಾಟಕ ಡಿಜಿಟಲ್ ಎಕಾನಾಮಿ ಮಿಷನ್‌ನ (KDEM) ಭರತ್ ಅವರು ಬೆಂಗಳೂರಿನಾಚೆ ಉದ್ಯಮ ಪರಿಸರ ವ್ಯವಸ್ಥೆಯನ್ನು ಬೆಂಬಲಿಸಲು ವಿನ್ಯಾಸಗೊಳಿಸಲಾದ ಉಪಕ್ರಮ ಮತ್ತು ಕಾರ್ಯಕ್ರಮಗಳ ಸೇರಿದಂತೆ ರಾಜ್ಯಾದ್ಯಂತ ನಾವೀನ್ಯತೆ, ಉದ್ಯಮಶೀಲತೆ ಮತ್ತು ತಂತ್ರಜ್ಞಾನ–ನೇತೃತ್ವದ ಅಭಿವೃದ್ಧಿಯನ್ನು ಬೆಂಬಲಿಸುವ ಉಪಕ್ರಮಗಳು, ಯೋಜನೆಗಳು, ಪ್ರೋತ್ಸಾಹಕಗಳು ಮತ್ತು ದೊರಕುವ ರಿಯಾಯಿತಿಗಳ ಬಗ್ಗೆ ತಿಳಿಸಿದರು.

ಸಮಾರಂಭದಲ್ಲಿ ಸ್ಟಾರ್ಟಪ್ ಸೆಲ್‌ನ ಯೋಜನಾ ಕಾರ್ಯನಿರ್ವಾಹಕರಾದ ಒವಿಯಾ.ಜಿ, ಕೆ.ಡಿ.ಇ.ಎಂ ನ ಭರತ್, ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ,

ಬಾಪೂಜಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಎಚ್.ಬಿ.ಅರವಿಂದ್, ನಿರ್ದೇಶಕ ಪ್ರೊ. ವೈ. ವೃಷಭೇಂದ್ರಪ್ಪ, ಸಂಶೋಧನೆ ಮತ್ತು ಅಭಿವೃದ್ಧಿ ಡೀನ್ ಡಾ. ಜಿ.ಎಸ್.ಸುನಿತಾ, ದಾವಣಗೆರೆ ವಿಷನ್ ಗ್ರೂಪ್ ಸದಸ್ಯರು, ವಿವಿಧ ಕಂಪನಿಗಳ ಉದ್ಯಮಿಗಳು (Entrepreneur), , ಪಾಲುದಾರರು (takeholders), ನವೀನಕಾರರು (Innovators), ಎಂಜಿನಿಯರಿಂಗ್ ಮತ್ತು ಪದವಿ ಕಾಲೇಜಿನ ಅಧ್ಯಾಪಕ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಬಾಲ ನ್ಯಾಯ ಖಾಯ್ದೆ ಅಡಿ ಮಕ್ಕಳ ರಕ್ಷಣೆ ,ಪಾಲನೆ ಮತ್ತು ಪೋಷಣೆ ನಮ್ಮೆಲ್ಲರ ಆದ್ಯ ಕರ್ತವ್ಯ




**ಗದಗ:** ಅನಾಥ,ಏಕ ಪಾಲಕ,ಭಿಕ್ಷಾಟನೆ ಮಾಡುತ್ತಿದ್ದ ಮಕ್ಕಳನ್ನು ದೈವಾಂಶ ಮಕ್ಕಳೆಂದು ತಿಳಿದು ಅವರ ಪಾಲನೆ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ ಅವರು ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಸಭಾಭವನದಲ್ಲಿ ಗುರುವಾರ ಜರುಗಿದ ಮಕ್ಕಳ ರಕ್ಷಣೆ ಮತ್ತು ಪಾಲನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲಮಂದಿರದಲ್ಲಿರುವ ಮಕ್ಕಳ ಪಾಲನೆಯನ್ನು ಚೆನ್ನಾಗಿ ಮಾಡವುದು ನಮ್ಮೆಲ್ಲರ ಆದ್ಯ ಕರ್ತವ್ಯ ವಾಗಿದೆ,ಸಮಿತಿಯಲ್ಲಿರುವ ಸರ್ವ ಸದಸ್ಯರು ಜೆ ಜೆ ಸೆಟ್ ಕುರಿತು ಸಮಗ್ರವಾಗಿ ತಿಳಿದುಕೊಳ್ಳಬೇಕು ಅಂದಾಗ ಸಮಿತಿಯಿಂದ ಉತ್ತಮ ಕಾರ್ಯ ಕೈಗೊಂಡು ಮಕ್ಕಳನ್ನು ರಕ್ಷಿಸಿ ಪಾಲನೆ ಮಾಡಬಹುದಾಗಿದೆ ಬಾಲಮಂದಿರದಲ್ಲಿ ಕೆಲವು ಮಕ್ಕಳು ಅತಿಯಾಗಿ ತುಂಟತನ ಚೇಷ್ಠೆ ಮಾಡುತ್ತಿರುತ್ತಾರೆ ಅಂತಹವರನ್ನು ಗಮನಿಸಿ ಅವರನ್ನು ಬೇರೆ ಕೆಲಸಗಳಲ್ಲಿ ತೊಡುಗುವಂತೆ ಮಾಡಬೇಕು ಎಂದರು

ಮಕ್ಕಳ ರಕ್ಷಣೆ ಮತ್ತ ಪಾಲನೆಗೆ ನೇಮಿಸಿದ ಸಮಿತಿಯು ಪ್ರತಿ ತಿಂಗಳು ಸಂಬಂಧಿಸಿದ ಬಾಲಂಮದಿರಗಳಿಗೆ ಭೇಟಿ ನೀಡಿ ಅಲ್ಲಿನ ವಾಸ್ತವ ಸ್ಥಿತಿ ಯನ್ನು ತಿಳಿದುಕೊಳ್ಳಬೇಕು,ಅಲ್ಲಿರುವ ಕುಂದು ಕೊರತೆಗಳನ್ನು ಸರ್ಕಾರದ ಗಮನಕ್ಕೆ ತರಬೇಕು ಮತ್ತು ಅಲ್ಲಿರುವ ಮಕ್ಕಳ ಬೇಡಿಕೆಗಳನ್ನು ತಿಳಿಯಬೇಕು, ಇಂತಹ ಸಂದರ್ಭದಲ್ಲಿ ಎಲ್ಲರ ಪಾಲ್ಗೊಳುವಿಕೆ ಅತ್ಯವಶ್ಯಕವಾಗಿದೆ ಸಮಾಜದಲ್ಲಿರುವ ಮಕ್ಕಳ ಭವಿಷ್ಯವನ್ನು ನಿರ್ಮಾಣ ಮಾಡಲು ದೊರೆತ ಅವಕಾಶ ಎಂದು ಭಾವಿಸಿ ಎಲ್ಲರು ಕಾರ್ಯ ಮಾಡಬೇಕು ಜಿಲ್ಲಾಡಳಿತದಿಂದ ಬಾಲಮಂದಿರದಲ್ಲಿರುವ ಮಕ್ಕಳಿಗೆ

ವಿದ್ಯಾಭ್ಯಾಸ ಮಾಡಲು ಅನುಕೂಲ ಕಲ್ಪಿಸಲಾಗುತ್ತದೆ ಮತ್ತು ಕಿತ್ತೂರು ಚೆನ್ನಮ್ಮ,ಮೊರಾರ್ಜಿ ದೇಸಾಯಿ ಅಂತಹ ಶಾಲೆಗಳಲ್ಲಿ ಪ್ರಮುಖ್ಯತೆ ನೀಡಲಾಗುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಡಾ ದುರಗೇಶ ಅವರು ತಿಳಿಸಿದರು.

ಸಭೆಯಲ್ಲಿ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರ ಮಾತನಾಡಿ ಜಿಲ್ಲೆಯಲಿರುವ ಸರ್ಕಾರಿ ಮತ್ತು ಖಾಸಗಿ ಬಾಲಮಂದಿರ ಅಂಕಿ ಅಂಶ ನೀಡಿದರು,ಹಾಗು ಸರ್ಕಾರಿ ಬಾಲ ಮಂದಿರ ನಿರ್ಮಾಣಕ್ಕೆ ಬೇಕಾದ ಅನುದಾನಕ್ಕೆ ಈಗಾಗಲೇ ಸರ್ಕಾರಕ್ಕೆ ಕಳುಹಿಸಲಾಗಿದೆ ಎಂದು ತಿಳಿಸಿದರು.

ಸಭೆಗೆ ಆಗಮಿಸಿದ ಬಾಲಮಂದಿರದ ಮುಖ್ಯಸ್ಥರು ಬಾಲಮಂದಿರದಲ್ಲಿರುವ ಮಕ್ಕಳ ಮಾಹಿತಿಯನ್ನು ಸಭೆಗೆ ತಿಳಿಸಿದರು.

ಸಭೆಯಲ್ಲಿ ಬಾಲಂಮದಿರದ ಮುಖ್ಯಸ್ತರು ಬಾಲ ಮಕ್ಕಳ ರಕ್ಷಣೆ ಮತ್ತು ಪಾಲನಾ ಸಮಿತಿಯ ಸದಸ್ಯರು ಹಾಜರಿದ್ದರು.

# ಬೈಪಾಸ್ ರಸ್ತೆ ನಿರ್ಮಾಣದ ಭೂಮಿಗೆ ನ್ಯಾಯಯುತ ಪರಿಹಾರ




**ಹಾಸನ:** ತುಮಕೂರು–ಶಿವಮೊಗ್ಗ ಚತುಷ್ಪಥ ಬೈಪಾಸ್ ರಸ್ತೆ ನಿರ್ಮಾಣಕ್ಕೆ ವಶಪಡಿಸಿಕೊಳ್ಳಲು ನಿರ್ಧರಿಸಲಾಗಿರುವ ಭೂಮಿಗೆ ನ್ಯಾಯಯುತ ಪರಿಹಾರ ನೀಡಬೇಕು ಎಂದು ಅರಸೀಕೆರೆ ತಾಲ್ಲೂಕು ಬೆಂಡೇಕೆರೆ ಗ್ರಾಮದ ರೈತರು ಬುಧವಾರ ಜೆಡಿಎಸ್ ಮುಖಂಡ ಎನ್.ಆರ್. ಸಂತೋಷ್ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರಿಗೆ ಮನವಿ ಸಲ್ಲಿಸಿದರು.

ಒಂದೂವರೆ ವರ್ಷದ ಹಿಂದೆ ಮಾಜಿ ಸಚಿವ ಪ್ರಜ್ವಲ್ ರೇವಣ್ಣ, ಮಾಜಿ ಸಚಿವ ಹೆಚ್.ಡಿ. ರೇವಣ್ಣ ಯೋಜನಾ ನಿರ್ದೇಶಕರು ಹಾಗು ಜಿಲ್ಲಾಧಿಕಾರಿ ಸಮಕ್ಷ ಮದಲ್ಲಿ ನಡೆದಿದ್ದ ಸಭೆಯಲ್ಲಿ ಪ್ರತಿ ಗುಂಟೆ ಜಮೀನಿಗೆ 36 ಸಾವಿರ ರೂ. ಪರಿಹಾರ ನೀಡಲು ತಾತ್ವಿಕ ಒಪ್ಪಿಗೆ ನೀಡಲಾಗಿತ್ತು. ಆದರೆ ಈಗ 11,232 ರೂ. ನೀಡಿ ಕಾಮಗಾರಿ ನಿರ್ವಹಿಸಲು ಮುಂದಾದ್ದಾರೆ. ಕಡಿಮೆ ಪರಿಹಾರ ನೀಡಿದರೆ ಭಾರೀ ಅನ್ಯಾಯವಾಗುತ್ತದೆಂದು ರೈತರು ಜಿಲ್ಲಾಧಿಕಾರಿ ಗಮನಕ್ಕೆ ತಂದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರು ಮಾತನಾಡಿ, ಪರಿಹಾರ ವಿಚಾರದಲ್ಲಿ ಅನ್ಯಾಯವಾಗಿದ್ದರೆ ಕಾನೂನು ಹೋರಾಟಕ್ಕೆ ಅವಕಾಶವಿದೆ. ಅಭಿವೃದ್ಧಿ ಕೆಲಸಗಳಿಗೆ ಸಹಕಾರ ನೀಡುವುದು ಜವಾಬ್ದಾರಿ. ಕಾಮಗಾರಿ ಪೂರ್ಣಗೊಳಿಸಲು ಸಹಕರಿಸಬೇಕೆಂದು ಮನವಿ ಮಾಡಿದರು. ಜಿಲ್ಲಾಧಿಕಾರಿ ಮನವಿಗೆ ಒಪ್ಪದ ರೈತರು ಸಭೆಯಿಂದ ನಿರ್ಗಮಿಸಿದರು.

ಜೆಡಿಎಸ್ ಮುಖಂಡ ಎನ್.ಆರ್. ಸಂತೋಷ್ ಅವರು ಮಾತನಾಡಿ, ಜಾಜೂರು, ಕಾಟಿಕೆರೆ ಗ್ರಾಮದ ರೈತರಿಗೆ ನೀಡಿರುವ ಮಾರ್ಗಸೂಚಿ ಬೆಲೆ ನೀಡಬೇಕು. ಕೆಲವರ ರಾಜಕೀಯ ಕುತಂತ್ರ, ಒತ್ತಡದಿಂದ ಭೂಮಿ ವಶಕ್ಕೆ ಪಡೆಯಲು ಈ ಹಿಂದೆ ಜೀಪ್, ಡಿಆರ್ ವ್ಯಾನ್ ಜೊತೆ ಅಪಾರ ಸಂಖ್ಯೆಯಲ್ಲಿ ಪೊಲೀಸರನ್ನು ಕಳುಹಿಸಲಾಗಿತ್ತು. ನ್ಯಾಯಯುತ ಪರಿಹಾರ ನೀಡಿ ಕೆಲಸ ಪೂರ್ಣಗೊಳಿಸಬೇಕು ಎಂದು ಆಗ್ರಹಿಸಿದರು.

# ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಅಂತಿಮ ದಿನ

**ಚಿಕ್ಕಮಗಳೂರು:** 2024–25ನೇ ಸಾಲಿನಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಂದು ಪರಿಶಿಷ್ಟ ವರ್ಗದ ಜನಾಂಗದ ಏಳಿಗೆಗಾಗಿ ಶ್ರಮಿಸಿದ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಯನ್ನು ನೀಡಿ ಗೌರವಿಸಲು ಅರ್ಹ ವ್ಯಕ್ತಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಜಿಲ್ಲೆಯಲ್ಲಿ ಪರಿಶಿಷ್ಟ ವರ್ಗದವರಿಗೆ ರಾಜ್ಯ ಮಟ್ಟದಲ್ಲಿ ಸಾಮಾಜಿಕ ಸೇವೆ ಸಲ್ಲಿಸುತ್ತಿರುವ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಮುಖ್ಯವಾಗಿ ಪರಿಶಿಷ್ಟ ಪಂಗಡದ ಜನಾಂಗದವರಿಗೆ ಸೇವೆ ಸಲ್ಲಿಸಿದ ವ್ಯಕ್ತಿಯಾಗಿದ್ದು, ಜನಸಾಮಾನ್ಯರಲ್ಲಿ ಸ್ವಯಂ ಸೇವಕರಾಗಿ ಕೀರ್ತಿ, ಪ್ರಖ್ಯಾತಿ ಹೊಂದಿರಬೇಕು, ಅವರು ಸಾಧನೆ ಮಾಡಿರುವ ಸಾಧನೆಗಳ ಬಗ್ಗೆ ದಾಖಲಾತಿ ಹೊಂದಿರುವ ವ್ಯಕ್ತಿಗಳು ಅಸ್ಪೃಶ್ಯತೆ ನಿರ್ಮೂಲನೆ, ದೌರ್ಜನ್ಯ ನಿಯಂತ್ರಿಸುವ, ಸಮಾಜದಲ್ಲಿ ಸಾಮರಸ್ಯ ವಾತಾವರಣ ಮೂಡಿಸುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಶ್ರಮಿಸಿರುವ ವ್ಯಕ್ತಿಗಳು ಸ್ವಯಂ ಅರ್ಜಿ ಹಾಗೂ ಎಲ್ಲಾ ದಾಖಲಾತಿಗಳೊಂದಿಗೆ ಆಯಾ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಿಗೆ ಸೆಪ್ಟಂಬರ್ 12ರ ಬೆಳಿಗ್ಗೆ 11 ಗಂಟೆಯ ಒಳಗಾಗಿ ಅರ್ಜಿ ಸಲ್ಲಿಸುವಂತೆ ಈ ಮೊದಲು ತಿಳಿಸಲಾಗಿತ್ತು. ಇದೀಗ ಈ ದಿನಾಂಕವನ್ನು ಮಾರ್ಪಾಡು ಮಾಡಲಾಗಿದ್ದು, ಇದೀಗ ಸೆಪ್ಟಂಬರ್ 10ರ ಸಂಜೆ 5 ಗಂಟೆಯ ಒಳಗೆ ಅರ್ಜಿ ಸಲ್ಲಿಸಬೇಕೆಂದು ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆಯ ಯೋಜನಾ ಸಮನ್ವಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಡಿತರ ಚೀಟಿದಾರರಿಗೆ ಅಕ್ಕಿ ವಿತರಣೆ

**ಚಿಕ್ಕಮಗಳೂರು:** ಸಾರ್ವಜನಿಕ ವಿತರಣಾ ಪದ್ಧತಿಯಡಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಅಂತ್ಯೋದಯ ಮತ್ತು ಆದ್ಯತಾ ಪಡಿತರ ಚೀಟಿದಾರರಿಗೆ 2025ರ ಸೆಪ್ಟಂಬರ್ ಮಾಹೆಗೆ ಈ ಕೆಳಗಿನಂತೆ ಅಕ್ಕಿ ವಿತರಿಸಲಾಗುತ್ತಿದೆ.

ಅಂತ್ಯೋದಯ (ಎಎವೈ) ಪ್ರತೀ ಪಡಿತರ ಚೀಟಿಗೆ ಚಿಕ್ಕಮಗಳೂರು, ಕಡೂರು, ತರೀಕೆರೆ ಹಾಗೂ ಅಜ್ಜಂಪುರ ತಾಲ್ಲೂಕಿನವರಿಗೆ ಎನ್‌ಎಫ್‌ಎಸ್‌ಎ ಯೋಜನೆಯಲ್ಲಿ ಕೇಂದ್ರದ 14 ಕೆ.ಜಿ. ಅಕ್ಕಿ, 21 ಕೆ.ಜಿ. ರಾಗಿ, ಮೂಡಿಗೆರೆ, ಕೊಪ್ಪ, ಶೃಂಗೇರಿ, ಎನ್.ಆರ್.ಪುರ ತಾಲ್ಲೂಕಿನವರಿಗೆ ಕೇಂದ್ರದ 35 ಕೆ.ಜಿ. ಅಕ್ಕಿ, ಈ ಎಲ್ಲಾ ತಾಲ್ಲೂಕುಗಳಿಗೆ ಅನ್ನಭಾಗ್ಯ ಯೋಜನೆಯಡಿ 4 ಮತ್ತು 4ಕ್ಕಿಂತ ಹೆಚ್ಚು ಸದಸ್ಯರಿರುವ ಪಡಿತರ ಚೀಟಿಯ ಪ್ರತೀ ಸದಸ್ಯರಿಗೆ 5 ಕೆ.ಜಿ. ಅಕ್ಕಿ ವಿತರಿಸಲಾಗುವುದು.

ಆದ್ಯತಾ (ಬಿಪಿಎಲ್) ಪಡಿತರ ಚೀಟಿ ಹೊಂದಿರುವ ಪ್ರತೀ ಸದಸ್ಯರಿಗೆ ಚಿಕ್ಕಮಗಳೂರು, ಕಡೂರು, ತರೀಕೆರೆ ಹಾಗೂ ಅಜ್ಜಂಪುರ ತಾಲ್ಲೂಕಿನಲ್ಲಿ ಎನ್‌ಎಫ್‌ಸಿ ಯೋಜನೆಯಡಿ ಕೇಂದ್ರದಿಂದ 2 ಕೆ.ಜಿ. ಅಕ್ಕಿ, 3 ಕೆ.ಜಿ. ರಾಗಿ, ರಾಜ್ಯದಿಂದ 5 ಕೆ.ಜಿ. ಅಕ್ಕಿ, ಅನ್ನಭಾಗ್ಯ ಯೋಜನೆಯಡಿ ಕೇಂದ್ರ ಹಾಗೂ ರಾಜ್ಯದ ತಲಾ 5 ಕೆ.ಜಿ. ಅಕ್ಕಿ, ಮೂಡಿಗೆರೆ, ಕೊಪ್ಪ, ಶೃಂಗೇರಿ, ಎನ್.ಆರ್.ಪುರ ತಾಲ್ಲೂಕಿನವರಿಗೆ ಕೇಂದ್ರ ಹಾಗೂ ರಾಜ್ಯದಿಂದ 5 ಕೆ.ಜಿ. ಅಕ್ಕಿ, ಅನ್ನಭಾಗ್ಯ ಯೋಜನೆಯಡಿ 5 ಕೆ.ಜಿ. ಅಕ್ಕಿ ವಿತರಿಸಲಾಗುವುದು ಎಂದು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಜನಾದ್ರಿ: ಮೂಲಸೌಕರ್ಯ ಒದಗಿಸಲು ಸಿ.ಎಂ ಸೂಚನೆ



**ಬೆಂಗಳೂರು:** 'ಹನುಮ ಜಯಂತಿ ವೇಳೆಗೆ ಅಂಜನಾದ್ರಿ ಬೆಟ್ಟಕ್ಕೆ ಲಕ್ಷಾಂತರ ಭಕ್ತರು ಭೇಟಿ ನೀಡುತ್ತಾರೆ. ಆ ಹೊತ್ತಿಗೆ ಅಗತ್ಯ ಸೌಕರ್ಯಗಳನ್ನು ಒದಗಿಸಿ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಮುಖ್ಯಮಂತ್ರಿ ಅವರ ಕಾವೇರಿ ನಿವಾಸದಲ್ಲಿ ಬುಧವಾರ ನಡೆದ ಸಭೆಯಲ್ಲಿ, ಅಂಜನಾದ್ರಿ ಬೆಟ್ಟದಲ್ಲಿನ ಅಭಿವೃದ್ಧಿ ಕಾಮಗಾರಿಗಳ ವಿವರಗಳನ್ನು ಅಧಿಕಾರಿಗಳು ಒದಗಿಸಿದರು. ಅದನ್ನು ಪರಿಶೀಲಿಸಿದ ಸಿದ್ದರಾಮಯ್ಯ ಅವರು, 'ಯಾವೆಲ್ಲಾ ಸವಲತ್ತುಗಳನ್ನು ಒದಗಿಸಲು ಸಾಧ್ಯವಾಗುತ್ತದೆಯೋ, ಆ ಸಂಬಂಧ ಶೀಘ್ರ ಕ್ರಮ ತೆಗೆದುಕೊಳ್ಳಿ' ಎಂದು ಸೂಚಿಸಿದರು.


ಕ್ಷೇತ್ರದ ಅಭಿವೃದ್ಧಿಗೆ 1 ಮತ್ತು 2ನೇ ಹಂತದಲ್ಲಿ ಒಟ್ಟು ರೂ 200 ಕೋಟಿ ಅನುದಾನ ಹಂಚಿಕೆ ಮಾಡಲಾಗಿದೆ.

ಸಿದ್ದರಾಮಯ್ಯ ಅದರಲ್ಲಿ ರೂ10 ಕೋಟಿಯನ್ನಷ್ಟೇ ಈವರೆಗೆ ಬಿಡುಗಡೆ ಮಾಡಲಾಗಿದೆ. ಅಗತ್ಯವಿರುವ ಅನುದಾನವನ್ನು ಹಂತ–ಹಂತವಾಗಿ ಬಿಡುಗಡೆ ಮಾಡಲಾಗುವುದು ಎಂದು ಅವರು ತಿಳಿಸಿದರು.

ಕ್ಷೇತ್ರದಲ್ಲಿ ಕೆಲವು ಕಾಮಗಾರಿಗಳನ್ನು ನಡೆಸಲು ಸರ್ಕಾರಿ ಜಮೀನಿನ ಕೊರತೆ ಇದೆ. ಖಾಸಗಿಯವರಿಂದ ಜಮೀನು ಖರೀದಿಸಲು ಅನುದಾನದ ಕೊರತೆ ಇದೆ ಎಂಬುದನ್ನು ಅಧಿಕಾರಿಗಳು ಮುಖ್ಯಮಂತ್ರಿಯ ಗಮನಕ್ಕೆ ತಂದರು.

ಈ ಬಗ್ಗೆ ಪರಿಶೀಲನೆ ನಡೆಸಲಾಗುವುದು ಎಂದುಮುಖ್ಯಮಂತ್ರಿ ತಿಳಿಸಿದರು.

ರಾಜ್ಯದ 11 ಪ್ರವಾಸಿ ತಾಣಗಳಲ್ಲಿ ರೋಪ್‌ವೇ ನಿರ್ಮಾಣಕ್ಕೆ ಅನುಮೋದನೆ ನೀಡಲಾಯಿತು. ಸಭೆಯಲ್ಲಿ ಪ್ರವಾಸೋದ್ಯಮ ಸಚಿವ ಎಚ್. ಕೆ.ಪಾಟೀಲ, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್, ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿದ್ದರು.




*** ಅಂಜನಾದ್ರಿಗೆ ರೋಪ್‌ವೇ ನಿರ್ಮಾಣ ಯೋಜನೆಯ ಸ್ಥಿತಿ ಬಗ್ಗೆ ಪರಿಶೀಲನೆ**

*** ಅರಣ್ಯ ಪ್ರದೇಶದಲ್ಲಿ ನಡೆಯಲಿರುವ ಕಾಮಗಾರಿಗೆ ಅನುಮತಿ ಪಡೆದುಕೊಳ್ಳಲು ಸೂಚನೆ**

*** ಮೆಟ್ಟಿಲು, ಸಮುದಾಯ ಭವನ, ಶೌಚಾಲಯ ಮತ್ತಿತರ ಮೂಲಸೌಕರ್ಯ ಒದಗಿಸಲು ಸೂಚನೆ**

# ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆ

## ಮತ ಯಂತ್ರದ ಬದಲು ಮತಪತ್ರ ಬಳಸುವ ಕುರಿತು ಕೈ-ಕಮಲ ಜಟಾಪಟಿ

**ಬೆಂಗಳೂರು:** ರಾಜ್ಯದಲ್ಲಿ ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ವಿದ್ಯುನ್ಮಾನ ಮತಯಂತ್ರದ (ಇವಿಎಂ) ಬದಲು ಮತಪತ್ರ (ಬ್ಯಾಲೆಟ್ ಪೇಪರ್) ಬಳಸಲು ರಾಜ್ಯಸರ್ಕಾರ ನಿರ್ಧಾರ ಪರ ವಿರೋಧ ಚರ್ಚೆಗೆ ಕಾರಣವಾಗಿದ್ದು, ಬಿಜೆಪಿ ಮತಪತ್ರ ಬಳಕೆಗೆ ವಿರೋಧ ವ್ಯಕ್ತಪಡಿಸಿದರೆ. ಕಾಂಗ್ರೆಸ್ ಪಕ್ಷ ಮತಪತ್ರ ಬಳಸುವುದನ್ನು ಸಮರ್ಥಿಸಿಕೊಂಡು ಕಾನೂನಿನಲ್ಲೇ ಇದಕ್ಕೆ ಅವಕಾಶವಿದೆ ಎಂದಿದೆ.

ಸ್ಥಳೀಯ ಸಂಸ್ಥೆಗಳಲ್ಲಿ ಮತಪತ್ರ ಬಳಸುವ ಸರ್ಕಾರದ ತೀರ್ಮಾನ ಬಿಜೆಪಿ-ಕಾಂಗ್ರೆಸ್ ನಡುವೆ ಆರೋಪ-ಪ್ರತ್ಯಾರೋಪಗಳಿಗೂ ಕಾರಣವಾಗಿರುವಾಗಲೇ ರಾಜ್ಯ ಚುನಾವಣಾ ಆಯೋಗ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ವಿದ್ಯುನ್ಮಾನ ಮತಯಂತ್ರದ ಬದಲು ಇವಿಎಂ ಬಳಸಲು ನಾವು ಸಿದ್ಧರಿದ್ದೇವೆ. ಈಗಿರುವ ಕೆಲ ನಿಯಮಗಳಿಗೆ ರಾಜ್ಯಸರ್ಕಾರ ತಿದ್ದುಪಡಿ ಮಾಡಿದರೆ ಮತಪತ್ರಗಳ ಮೂಲಕವೇ ಚುನಾವಣೆ ನಡೆಸಲು ಅಗತ್ಯ ಕ್ರಮಕೈಗೊಳ್ಳುತ್ತೇವೆ ಎಂದು ಹೇಳಿದೆ.

ಬಿಜೆಪಿ ವಿರೋಧ

ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇವಿಎಂ ಬದಲು ಮತಪತ್ರ ಬಳಸುವ ಸರ್ಕಾರದ ತೀರ್ಮಾನವನ್ನು ರಾಜ್ಯ ಬಿಜೆಪಿ ವಿರೋಧಿಸಿದ್ದು, ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಪಾರದರ್ಶಕ ಚುನಾವಣೆಯಲ್ಲಿ ಧಿಕ್ಕರಿಸುವುದೇ ಕಾಂಗ್ರೆಸ್‌ನ ಕಾರ್ಯಸೂಚಿ ಹಾಗೂ ಗುರಿಯಾಗಿದೆ ಎಂದು ಟೀಕಿಸಿದೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ ವಿಜಯೇಂದ್ರ ಅವರು, ಮತ ಪತ್ರಗಳ ಬಳಕೆಯಿಂದ ಚುನಾವಣಾ ಅಕ್ರಮವೆಸಗಬಹುದು. ಮತಗಟ್ಟೆಗಳಲ್ಲಿ ದೌರ್ಜನ್ಯ ಮೆರೆಯಬಹುದು, ಎಗ್ಗಿಲ್ಲದೆ ಕಳ್ಳ ಮತದಾನವನ್ನು ಮಾಡಬಹುದು ಎಂಬ ಏಕೈಕ ಕಾರಣಕ್ಕೆ ಕಾಂಗ್ರೆಸ್ ಮತಪತ್ರ ಆಧರಿಸಿದ ಚುನಾವಣೆಯನ್ನು ರಾಹುಲ್‌ಗಾಂಧಿ ನೇತೃತ್ವದಲ್ಲಿ ಬೆಂಬಲಿಸುತ್ತಿದೆ ಎಂದು ವಾಗ್ದಾಳಿನಡೆಸಿದ್ದಾರೆ.

ಮುಂದಿನ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇವಿಎಂ ಯಂತ್ರ ಬದಿಗಿಟ್ಟು ಮತಪತ್ರ ಬಳಕೆಗೆ ನಿರ್ಧರಿಸಿರುವ ಸರ್ಕಾರದ ತೀರ್ಮಾನ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿರುವುದೇ ಮತಗಳ್ಳತನದಿಂದ ಎಂದು ಸ್ವಯಂ ಪ್ರಮಾಣೀಕರಿಸಿಕೊಂಡಂತಿದೆ ಎಂದು ಅವರು ಟೀಕಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಇವಿಎಂ ಮತಯಂತ್ರ ಬಳಸಿ ರಾಜ್ಯದಲ್ಲಿ 2023ರ ವಿಧಾನಸಭಾ ಚುನಾವಣೆಯಲ್ಲಿ ಗೆದ್ದು ಬಂದಿರುವ ಕಾಂಗ್ರೆಸ್, 136 ಶಾಸಕರಿಂದ ಹಾಗೂ 9 ಕಾಂಗ್ರೆಸ್ ಲೋಕಸಭಾ ಸದಸ್ಯರಿಂದ ರಾಜೀನಾಮೆ ಕೊಡಿಸಲಿ. ಮತಪತ್ರ ಬಳಸಿ ಮತ್ತೆ ಚುನಾವಣೆಯಲ್ಲಿ ಗೆದ್ದು ಬರಲಿ, ಇಲ್ಲದಿದ್ದರೆ ಮತಗಳ್ಳತನದಿಂದ ನಾವು ಆಯ್ಕೆಯಾಗಿ ಅಧಿಕಾರಕ್ಕೆ ಬಂದಿರುವುದು ಎಂದು ಒಪ್ಪಿಕೊಳ್ಳಲಿ ಎಂದೂ ವಿಜಯೇಂದ್ರ ಟ್ವೀಟ್‌ನಲ್ಲಿ ಒತ್ತಾಯಿಸಿದ್ದಾರೆ.





ದೇಶದಲ್ಲಿ ಅತೀ ಹೆಚ್ಚು ಅಕ್ರಮ ಮತದಾನ ಮತಗಳ್ಳತನದ ದೂರುಗಳು, ಚುನಾವಣಾ ದೌರ್ಜನ್ಯದ ಘಟನೆಗಳು, ಚುನಾವಣಾ ಅಕ್ರಮದ ಬಗ್ಗೆ ನ್ಯಾಯಾಲಯಗಳಲ್ಲಿ ಅತೀ ಹೆಚ್ಚು ದೂರು ದಾಖಲಾಗಿದ್ದರೆ ಅದು ಮತಪತ್ರ ಆಧರಿಸಿ ನಡೆದ ಚುನಾವಣೆಗಳಲ್ಲಿ ಅದು ಕಾಂಗ್ರೆಸ್ಸಿಗರ ಮೇಲೆ ಹೆಚ್ಚು ಎಂಬುದನ್ನು ಕಾಂಗ್ರೆಸ್ಸಿಗರು ಇತಿಹಾಸದ ಪುಟಗಳನ್ನು ತೆರೆದು ನೋಡಲಿ ಎಂದು ಅವರು ಹೇಳಿದ್ದಾರೆ.

ಇಂದಿರಾಗಾಂಧಿ ಅವರು ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಲು ಕಾರಣವಾಗಿದ್ದು, ಅವರು ನಡೆಸಿದ ಮತಗಳ್ಳತನ ಹಾಗೂ ಅಕ್ರಮ ಚುನಾವಣೆ ಹಿನ್ನೆಲೆಯಲ್ಲಿ ನ್ಯಾಯಾಲಯ ನೀಡಿದ ತೀರ್ಪಿನಿಂದ ಎಂಬ ಇತಿಹಾಸವನ್ನು ದೇಶದ ಜನ ಮರೆತ್ತಿಲ್ಲ ಎಂದು ವಿಜಯೇಂದ್ರ ತಿಳಿಸಿದ್ದಾರೆ.

ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದ ಅವಧಿಯಲ್ಲಿ ಮತಪತ್ರ ಬಳಸಿ ನಡೆದ ಚುನಾವಣೆಗಳಲ್ಲಿ ಎಷ್ಟು ಅಕ್ರಮ ನಡೆದಿದೆ ಎಂಬುದಕ್ಕೆ ಇವತ್ತೂ ದಾಖಲೆಗಳಿವೆ. 1990ರ ದಶಕದಲ್ಲಿ ದಾವಣಗೆರೆಯಲ್ಲಿ ಲೋಕಸಭಾ ಚುನಾವಣೆಯಲ್ಲಿ ಜಯಗಳಿಸಿದ್ದ ಬಿಜೆಪಿ ಅಭ್ಯರ್ಥಿಯನ್ನು ಮರು ಎಣಿಕೆಯಲ್ಲಿ ಸೋಲಿಸಿ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಲಾಯಿತು. ಬಿಜೆಪಿ ಅಭ್ಯರ್ಥಿಯ ಮತಪತ್ರಗಳನ್ನು ಹೇಗೆ ತಿರಸ್ಕೃತಗೊಳಿಸಲಾಯಿತು ಎಂಬುದಕ್ಕೆ ಅಂದು ದಾವಣಗೆರೆಯ ಮತ ಎಣಿಕೆ ಕೇಂದ್ರಗಳಲ್ಲಿ ಶೌಚಾಲಯಗಳಲ್ಲಿ ಬಿಜೆಪಿ ಅಭ್ಯರ್ಥಿಯ ಮತಪತ್ರಗಳು ಚೆಲ್ಲಾಡಿರುವುದನ್ನು ಮಾಧ್ಯಮಗಳು ವರದಿ ಮಾಡಿದ್ದವು ಎಂದು ಅವರು ತಿಳಿಸಿದ್ದಾರೆ.

ಮತಪತ್ರ ಆಧರಿಸಿದ ಚುನಾವಣೆಗಳಲ್ಲಿ ಅಕ್ರಮ ಹಾಗೂ ಮತಗಳ್ಳತನ ನಡೆಸುವುದರಲ್ಲಿ ನಿಷ್ಣಾತರಾದ ಕಾಂಗ್ರೆಸ್ಸಿಗರು ಚುನಾವಣೆಗಳ ನಿರಂತರ ಸೋಲುಗಳಿಂದ ಮೂಲೆಗುಂಪಾಗುತ್ತಿರುವ ಪರಿಸ್ಥಿತಿಯಿಂದ ಕೆಂಗೆಟ್ಟು ಹೋಗಿದ್ದಾರೆ.

ಈ ಕಾರಣದಿಂದ ಆಧಾರರಹಿತ ಅಪ್ರಬುದ್ಧ,ವಿತ್ತಂಡ ವಾದವನ್ನು ಮುಂದಿಟ್ಟುಕೊಂಡು ರಾಹುಲ್‌ಗಾಂಧಿಯವರು ಮತಗಳ್ಳತನದ ಹೆಸರಿನಲ್ಲಿ ಬಾಲಿಶ ವಿವಾದ ಹುಟ್ಟುಹಾಕಲು ಹೊರಟ್ಟಿದ್ದಾರೆ. ಇದನ್ನು ಬೆಂಬಲಿಸಲು ರಾಜ್ಯದ ಕಾಂಗ್ರೆಸ್ ಸರ್ಕಾರ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರಗಳನ್ನುಬಳಸಿ ಚುನಾವಣೆ ನಡೆಸುವುದಾಗಿ ನಿರ್ಣಯ ಕೈಗೊಂಡಿದೆ. ಇಡೀ ದೇಶ, ಜಗತ್ತು ತಂತ್ರಜ್ಞಾನವನ್ನಾಧರಿಸಿ ವೇಗವಾಗಿ ನಡೆಯುತ್ತಿದ್ದರೆ, ಕರ್ನಾಟಕದ ಕಾಂಗ್ರೆಸ್ ಸರ್ಕಾರ ತಂತ್ರಜ್ಞಾನವನ್ನು ಅಪಮಾನಿಸಿ ಹೆಬ್ಬೆಟ್ಟಿನ ದಿನಗಳನ್ನು ನೆನಪಿಸಲು ಹೊರಟಿದೆ ಎಂದು ಅವರು ದೂರಿದ್ದಾರೆ.

ಮತ ಪತ್ರ ಬಳಕೆಯಿಂದ ಚುನಾವಣಾ ಅಕ್ರಮವೆಸಗಬಹುದು ಎಂಬ ಕಾರಣಕ್ಕಾಗಿ ಕಾಂಗ್ರೆಸ್ ಮತಪತ್ರ ಆಧರಿಸಿದ ಚುನಾವಣೆಯನ್ನು ರಾಹುಲ್ ನೇತೃತ್ವದಲ್ಲಿ ಬೆಂಬಲಿಸುತ್ತಿದೆ. ಅದನ್ನು ಕರ್ನಾಟಕದ ಕಾಂಗ್ರೆಸ್ ಸರ್ಕಾರ ಜಾರಿಗೊಳಿಸಲು ಮೊದಲ ಹೆಜ್ಜೆ ಇಡಲು ಹೊರಟಿದೆ. ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಪಾರದರ್ಶಕ ಚುನಾವಣೆಯನ್ನು ಧಿಕ್ಕರಿಸುವುದೇ ಕಾಂಗ್ರೆಸ್‌ನ ಕಾರ್ಯಸೂಚಿ ಹಾಗೂ ಗುರಿಯಾಗಿದೆ ಎಂದು ಅವರು ಹರಿಹಾಯ್ದಿದ್ದಾರೆ.

ಬಿಜೆಪಿಗೆ ಆತಂಕ-ಗಾಬರಿ ಏಕೆ? ಡಿಕೆಶಿ

ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇವಿಎಂ ಬದಲಿಗೆ ಮತಪತ್ರಗಳನ್ನು ಬಳಸುವ ತೀರ್ಮಾನವನ್ನು ರಾಜ್ಯಸರ್ಕಾರ ಕೈಗೊಂಡಿದೆ. ಈ ತೀರ್ಮಾನದ ಬಗ್ಗೆ ಬಿಜೆಪಿಗೆ ಆತಂಕ-ಗಾಬರಿ ಏಕೆ ಎಂದು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಪ್ರಶ್ನಿಸಿ ಸ್ಥಳೀಯ ಸಂಸ್ಥೆಗಳಲ್ಲಿ ಮತಪತ್ರ ಬಳಸುವ ರಾಜ್ಯಸರ್ಕಾರದ ತೀರ್ಮಾನವನ್ನು ಸಮರ್ಥಿಸಿಕೊಂಡಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ಕಾನೂನಿನಲ್ಲೇ ಮತಪತ್ರ ಬಳಸಲು ಅವಕಾಶವಿದೆ. ಈ ಕಾನೂನನ್ನು ನಾವು ಮಾಡಿದ್ದಲ್ಲ, ಬಿಜೆಪಿಯವರೇ ಮಾಡಿರುವುದು, ಹೀಗಿರುವಾಗ ಮತಪತ್ರ ಬಳಸುವ ರಾಜ್ಯಸರ್ಕಾರದ ತೀರ್ಮಾನವನ್ನು ಬಿಜೆಪಿಯವರು ವಿರೋಧಿಸುತ್ತಿರುವುದು ಏಕೆ?ಅವರಿಗೆ ಆತಂಕ ಗಾಬರಿಯಾಗಿದೆಯೇ ಎಂದು ವ್ಯಂಗ್ಯವಾಗಿ ಹೇಳಿದ್ದಾರೆ.

ಸ್ಥಳೀಯ ಸಂಸ್ಥೆಗಳ ಚುನಾವಣಾ ಸಂದರ್ಭದಲ್ಲಿ ಮತಪತ್ರ ಅಥವಾ ಇವಿಎಂನ್ನು ಬಳಸಬಹುದು ಎಂಬ ಕಾನೂನನ್ನು ಬಿಜೆಪಿಯವರೇ ಮಾಡಿದ್ದಾರೆ. ನಾವು ಕಾನೂನಿನಂತೆ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಸುವ ತೀರ್ಮಾನ ಮಾಡಿದ್ದೇವೆ. ಮುಂದೆ ನಡೆಯುವ ಬಿಬಿಎಂಪಿ ಸೇರಿದಂತೆ ಎಲ್ಲ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲೂ ಇವಿಎಂ ಬದಲು ಮತಪತ್ರ ಬಳಕೆಯಾಗಲಿದೆ ಎಂದರು.

## ಉಕ್ರೇನ್-ರಷ್ಯಾ ಯುದ್ಧ ಅಂತ್ಯಕ್ಕೆ ಮೋದಿ ಮಧ್ಯಸ್ಥಿಕೆ ವಹಿಸಲಿ



**ನವದೆಹಲಿ:** ಉಕ್ರೇನ್-ರಷ್ಯಾಯುದ್ಧ ಕೊನೆಗೊಳಿಸುವಲ್ಲಿ ಭಾರತ ಪ್ರಮುಖ ಪಾತ್ರವಹಿಸಬೇಕು ಎಂದು ಯುರೋಪಿಯನ್ ಒಕ್ಕೂಟದ ನಾಯಕರು ಪ್ರಧಾನಿ ನರೇಂದ್ರ ಮೋದಿಗೆ ಅವರಿಗೆ ಮನವಿ ಮಾಡಿದ್ದಾರೆ.

ಭಾರತ-ಯುರೋಪಿಯನ್ ಒಕ್ಕೂಟದ ಸಂಬಂಧ ಪರಿಶೀಲಿಸಲು ಪ್ರಧಾನಿ ನರೇಂದ್ರ ಮೋದಿ ಅವರು ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಕೋಸ್ಟಾ ಮತ್ತು ಯುರೋಪಿಯನ್ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಅವರೊಂದಿಗೆ ದೂರವಾಣಿ ಮಾತುಕತೆಯಲ್ಲಿ ವೇಳೆ ಈ ಅಭಿಪ್ರಾಯ ವ್ಯಕ್ತಪಡಿಸಲಾಗಿದೆ.

ಈ ಸಂದರ್ಭದಲ್ಲಿ ಯುರೋಪಿಯನ್ ಒಕ್ಕೂಟದ ನಾಯಕರೊಂದಿಗೆ ನಡೆದ ಜಂಟಿ ಸಭೆಯಲ್ಲಿ ವ್ಯಾಪಾರ, ಭದ್ರತೆ ಮತ್ತು ಉಕ್ರೇನ್ ವಿಷಯದ ಕುರಿತು ಸುದೀರ್ಘ ಚರ್ಚೆ ನಡೆದಿದೆ. ಮುಂದಿನ ಶೃಂಗಸಭೆಗೆ ಭಾರತಕ್ಕೆ ಬರುವಂತೆ ಯುರೋಪಿಯನ್ ಒಕ್ಕೂಟದ ನಾಯಕರಿಗೆ ಪ್ರಧಾನಿ ನರೇಂದ್ರ ಮೋದಿ ಇದೇ ವೇಳೆ ಆಹ್ವಾನ ನೀಡಿದ್ದಾರೆ.

ಭಾರತ-ಯುರೋಪಿಯನ್ ಒಕ್ಕೂಟದ ಕಾರ್ಯತಂತ್ರದ ಪಾಲುದಾರಿಕೆ ಬಲಪಡಿಸುವ ತಮ್ಮ ಬದ್ಧತೆಯನ್ನು ಇದೇ ವೇಳೆ ಉಭಯ ಕಡೆಯ ನಾಯಕರು ಪುನರುಚ್ಚರಿಸಿದ್ದು ವ್ಯಾಪಾರ, ತಂತ್ರಜ್ಞಾನ, ಹೂಡಿಕೆ, ನಾವೀನ್ಯತೆ, ಸುಸ್ಥಿರತೆ, ರಕ್ಷಣೆ, ಭದ್ರತೆ ಮತ್ತು ಪೂರೈಕೆ ಸರಪಳಿ ಸ್ಥಿತಿಸ್ಥಾಪಕತ್ವ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿನ ಪ್ರಗತಿಯನ್ನು ಎರಡೂ ಕಡೆಯ ನಾಯಕರು ಸ್ವಾಗತಿಸಿದ್ದಾರೆ. ಭಾರತ-ಯುರೋಪಿಯನ್ ಒಕ್ಕೂಟದ ಮುಕ್ತ ವ್ಯಾಪಾರ ಒಪ್ಪಂದದ ಆರಂಭಿಕ ತೀರ್ಮಾನ ಮತ್ತು ಐಎಂಇಇಸಿ ಕಾರಿಡಾರ್ ಅನುಷ್ಠಾನದ ಬದ್ಧತೆಯ ಬಗ್ಗೆ ನಾಯಕರು ಪುನರುಚ್ಚರಿಸಿದ್ದಾರೆ.

ಉಕ್ರೇನ್‌ನಲ್ಲಿನ ಯುದ್ಧ ಜಾಗತಿಕ ಭದ್ರತೆ ಮತ್ತು ಆರ್ಥಿಕ ಸ್ಥಿರತೆಗೆ ದೂರಗಾಮಿ ಪರಿಣಾಮ ಬೀರುತ್ತದೆ ಎಂದು ಯುರೋಪಿಯನ್ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಒತ್ತಿ ಹೇಳಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಪ್ರಧಾನಿ ನರೇಂದ್ರ ಮೋದಿ ಅವರು "ರಷ್ಯಾ ತನ್ನ ಆಕ್ರಮಣಕಾರಿ ಯುದ್ಧ ಕೊನೆಗೊಳಿಸಲು ಮತ್ತು ಶಾಂತಿಯತ್ತ ಸಾಗಲು ಸಹಾಯ ಮಾಡುವಲ್ಲಿ ಭಾರತ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದ್ದಾರೆ. ಉಕ್ರೇನ್ ಮತ್ತು ರಷ್ಯಾ ಯುದ್ಧ ಜಾಗತಿಕ ಭದ್ರತಾ ಪರಿಣಾಮ ಬೀರುತ್ತದೆ ಮತ್ತು ಆರ್ಥಿಕ ಸ್ಥಿರತೆ ದುರ್ಬಲಗೊಳಿಸುತ್ತದೆ. ಆದ್ದರಿಂದ ಇದು ಇಡೀ ಜಗತ್ತಿಗೆ ಅಪಾಯವಾಗಿದೆ". ಹೀಗಾಗಿ ಯುದ್ಧ ಕೊನೆಯಾಗಬೇಕಾಗಿದೆ ಎಂದಿದ್ದಾರೆ.

## 5 ಲಕ್ಷ ರೂ.ವರೆಗೆ ಯುಪಿಐ ವಹಿವಾಟಿಗೆ ಅವಕಾಶ



**ನವದೆಹಲಿ:** ಡಿಜಿಟಲ್ ಪಾವತಿಗಳ ಬಳಕೆ ದಿನೇದಿನೇ ವಿಸ್ತರಿಸುತ್ತಿರುವ ಹಿನ್ನೆಲೆಯಲ್ಲಿ ಯುಪಿಐ ಬಳಕೆದಾರರಿಗೆ ಭಾರತೀಯ ರಾಷ್ಟ್ರೀಯ ಪಾವತಿ ನಿಗಮ ಮಹತ್ವದ ನಿರ್ಧಾರ ಕೈಗೊಂಡಿದ್ದು, ಇತ್ತೀಚಿನವರೆಗೂ ಒಂದೇ ಬಾರಿ ಗರಿಷ್ಠ 1 ಲಕ್ಷ ರೂಪಾಯಿ ಪಾವತಿ ಮಿತಿ ಇತ್ತು. ಈಗ ಮಿತಿಯನ್ನು 5 ಲಕ್ಷ ರೂಪಾಯಿಗೆ ಏರಿಸಲಾಗಿದೆ. ಜೊತೆಗೆ, ದಿನವೊಂದಕ್ಕೆ ಗರಿಷ್ಠ 10 ಲಕ್ಷ ರೂಪಾಯಿವರೆಗೆ ವಹಿವಾಟು ನಡೆಸಲು ಅವಕಾಶ ನೀಡಲಾಗಿದೆ.

ಈ ಹೊಸ ಪಾವತಿ ಮಿತಿಗಳು ಸೆಪ್ಟೆಂಬರ್ 15ರಿಂದಲೇ ಜಾರಿಯಾಗಲಿವೆ. ತೆರಿಗೆ ಪಾವತಿ, ಸಾಲದ ಇಎಂಐ, ದೈನಂದಿನ ವಹಿವಾಟು ಮುಂತಾದ ಪ್ರಮುಖ ಹಣಕಾಸು ವ್ಯವಹಾರಗಳಲ್ಲಿ ಗ್ರಾಹಕರಿಗೆ ಇದರಿಂದ ದೊಡ್ಡ ಮಟ್ಟದಲ್ಲಿ ಅನುಕೂಲವಾಗಲಿದೆ.

ಆದರೆ, ಈ ಹೆಚ್ಚುವರಿ ಮಿತಿ ವ್ಯಾಪಾರಿಗಳಿಗೆ (ಃ2ಃ) ಮಾಡುವ ಪಾವತಿಗಳಿಗೆ ಮಾತ್ರ ಅನ್ವಯವಾಗುತ್ತದೆ. ವ್ಯಕ್ತಿಯಿಂದ ವ್ಯಕ್ತಿಗೆ (P2P) ಮಾಡುವ ಪಾವತಿಗೆ ಮಿತಿಯು ಹಳೆಯದಂತೆ 1 ಲಕ್ಷ ರೂಪಾಯಿ ಮುಂದುವರಿಯಲಿದೆ ಎಂದು ನಿಗಮ ತಿಳಿಸಿದೆ.

ಡಿಜಿಟಲ್ ಪಾವತಿಯ ಬಳಕೆಯ ಹೆಚ್ಚಳಕ್ಕೆ ಸಾಕ್ಷಿಯಾಗಿ, ಈ ವರ್ಷ ಆಗಸ್ಟ್ ತಿಂಗಳಲ್ಲಿ 2,000 ಕೋಟಿಗೂ ಅಧಿಕ ಯುಪಿಐ ವಹಿವಾಟುಗಳು ನಡೆದಿದ್ದು, ಇದರ ಒಟ್ಟು ಮೊತ್ತ 24.85 ಲಕ್ಷ ಕೋಟಿ ರೂಪಾಯಿ ತಲುಪಿದೆ. ಹಿಂದಿನ ವರ್ಷಕ್ಕೆ ಹೋಲಿಕೆ ಮಾಡಿದರೆ, ಆಗಸ್ಟ್ ತಿಂಗಳಲ್ಲಿ ಯುಪಿಐ ವಹಿವಾಟಿನಲ್ಲಿ 34% ಏರಿಕೆ ದಾಖಲಾಗಿದೆ.

## ಧರ್ಮಸ್ಥಳ ಪ್ರಕರಣ: ಮಹಿಳಾ ಸಂಘಟನೆಗಳಿಂದ ಸೋನಿಯಾಗೆ ಪತ್ರ

**ಬೆಂಗಳೂರು:** ದಿನೇ ದಿನೇ ಹತ್ತು ಹಲವು ತಿರುವು ಪಡೆಯುತ್ತಿರುವ ಧರ್ಮಸ್ಥಳ ಪ್ರಕರಣ ಇದೀಗ ಮಹಿಳಾ ಸಂಘಟನೆಗಳ ಮೂಲಕ ಈಗ ಸೋನಿಯಾ ಗಾಂಧಿ ಅವರಿಗೆ ತಲುಪಿದೆ.

ಮಹಿಳಾ ಸಂಘಟನೆಗಳು ಪತ್ರ ಮುಖೇನ ಸೋನಿಯಾ ಗಾಂಧಿಗೆ ವಿಸ್ತೃತ ಮಾಹಿತಿ ನೀಡಿವೆ.

ಯಾರು ಕೊಂದರು ಎಂಬ ಶೀರ್ಷಿಕೆಯಡಿಯಲ್ಲಿ ಸೋನಿಯಾ ಗಾಂಧಿಗೆ ಪತ್ರ ಬರೆಯಲಾಗಿದೆ.

ರಾಜ್ಯದ 10 ಮಹಿಳಾ ಸಂಘಟನೆಗಳು ಮತ್ತು 40 ಮಹಿಳಾ ಕಾರ್ಯಕರ್ತರು ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಸೋನಿಯಾ ಗಾಂಧಿಗೆ ಪತ್ರ ಬರೆದು ಎಸ್‌ಐಟಿ ತನಿಖೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಪತ್ರದಲ್ಲಿ ಆರೋಪಿ ಚಿನ್ನಯ್ಯ ಬಂಧನ, ಸುಜಾತಾ ಭಟ್ ಪ್ರಕರಣ ಮತ್ತು ಮಾಧ್ಯಮ ವರದಿಗಳನ್ನು ಉಲ್ಲೇಖಿಸಲಾಗಿದೆ.

ಕಾರ್ಯಕರ್ತರು ಡಿಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಸಹ ಉಲ್ಲೇಖಿಸಿದ್ದಾರೆ. ಧರ್ಮಸ್ಥಳ ಪ್ರಕರಣದಲ್ಲಿ ಪಿತೂರಿ ನಡೆದಿದೆ ಇದರಲ್ಲಿ ಹುರುಳಿಲ್ಲ ಎಂದು ಡಿ.ಕೆ. ಶಿವಕುಮಾರ್ ತಪ್ಪುದಾರಿಗೆಳೆಯುವ ಹೇಳಿಕೆ ನೀಡಿದ್ದಾರೆ.

ಡಿ.ಕೆ.ಶಿವಕುಮಾರ್ ಅವರ ಹೇಳಿಕೆಯನ್ನು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಬೆಂಬಲಿಸಿದ್ದಾರೆ. ಗೃಹ ಸಚಿವ ಡಾ.ಜಿ. ಪರಮೇಶ್ವರ ಅವರು ವಿರೋಧ ಪಕ್ಷದ ಒತ್ತಡಕ್ಕೆ ಮಣಿದು ಧರ್ಮಸ್ಥಳದ ಕುರಿತು ವರದಿ ಮಾಡುವ ಯೂಟ್ಯೂಬ್ ಚಾನೆಲ್‌ಗಳನ್ನು ನಿಷೇಧಿಸಿದ್ದಾರೆ ಎಂದು ಅವರು ಹೇಳಿದ್ದಾರೆ.

ಸೋನಿಯಾ ಗಾಂಧಿಗೆ ಬರೆದ ಪತ್ರದಲ್ಲಿ, ಕಾರ್ಯಕರ್ತರು ಮೂರು ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟಿದ್ದಾರೆ. ವಿ.ಎಸ್. ಉಗ್ರಪ್ಪ ಸಮಿತಿ 2018 ರಲ್ಲಿ ಸಲ್ಲಿಸಿದ ವರದಿಯನ್ನು ಪರಿಗಣಿಸಬೇಕು.

ಸಾರ್ವಜನಿಕ ಪ್ರತಿನಿಧಿಗಳು ನಿಷ್ಪಕ್ಷಪಾತ ತನಿಖೆಗೆ ಸಹಕರಿಸಬೇಕು.

ಸೌಜನ್ಯ ಪ್ರಕರಣದ ತನಿಖೆಯಲ್ಲಿ ಲೋಪ ಎಸಗಿದ ಅಧಿಕಾರಿಗಳನ್ನು ನ್ಯಾಯಾಲಯದ ಆದೇಶದಂತೆ ತನಿಖೆ ನಡೆಸಬೇಕೆಂದು ವಿನಂತಿಸಲಾಗಿದೆ.

## ರಫ್ತುದಾರರಿಗೆ ಕೇಂದ್ರ ಸರ್ಕಾರದ ಬೆಂಬಲ ನಿರೀಕ್ಷೆ

**ನವದೆಹಲಿ:** ಇತ್ತೀಚೆಗೆ ಸಾಮಾನ್ಯ ಜನರಿಗೆ ಸ್ವಲ್ಪ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ದರಗಳನ್ನು ಕಡಿತಗೊಳಿಸಿದ ಬೆನ್ನಲ್ಲೇ ನರೇಂದ್ರ ಮೋದಿ ಸರ್ಕಾರ ಈಗ ಡೊನಾಲ್ಡ್ ಟ್ರಂಪ್ ಅವರ ಹೊಸ ಸುಂಕದಿಂದಾಗಿ ತೊಂದರೆಗೀಡಾದ ರಫ್ತುದಾರರನ್ನು ಬೆಂಬಲಿಸಲು ಯೋಜಿಸುತ್ತಿದೆ.

ಅಮೆರಿಕ ಆಡಳಿತ ಇತ್ತೀಚೆಗೆ ಘೋಷಿಸಿದ ಹೆಚ್ಚಿನ ಆಮದು ಸುಂಕವನ್ನು ಎದುರಿಸಲು ಹೆಣಗಾಡುತ್ತಿರುವ ರಫ್ತುದಾರರಿಗೆ ಸರ್ಕಾರ ಪರಿಹಾರ ಪ್ಯಾಕೇಜ್ ಅನ್ನು ಸಿದ್ಧಪಡಿಸುತ್ತಿದೆ ಎಂದು ಮೂಲಗಳು ತಿಳಿಸಿವೆ.

ಭಾರತದ ಇತ್ತೀಚಿನ ಜಿಎಸ್ ಟಿ 2.0 ಸುಧಾರಣೆಗಳು ಸ್ವದೇಶದಲ್ಲಿ ಗೃಹ ಬಜೆಟ್ ಗಳನ್ನು ಸ್ಥಿರಗೊಳಿಸಿವೆ. ಆದರೆ ಸಾಗರರೊತ್ತರ ವ್ಯವಹಾರ ನಡೆಸುವವರಿಗೆ, ಟ್ರಂಪ್



ಅವರ ದುಬಾರಿ ಸುಂಕಗಳು ರಫ್ತುದಾರರನ್ನು ಅಸ್ಥಿರಗೊಳಿಸಿವೆ. "ರಫ್ತುದಾರರಿಗೆ ನೆರವಾಗುವ ನಿಟ್ಟಿನಲ್ಲಿ ಚರ್ಚೆಗಳು ನಡೆಯುತ್ತಿವೆ. ಟ್ರಂಪ್ ಆಡಳಿತವು ವಿಧಿಸಿದ ಶೇ.50 ರಫ್ತು ಸುಂಕದ ಪರಿಣಾಮವನ್ನು ನಿರ್ವಹಿಸಲು ರಫ್ತುದಾರರಿಗೆ ಸಹಾಯ ಮಾಡುವ ಯೋಜನೆಗಳನ್ನು ಶೀಘ್ರದಲ್ಲೇ ಘೋಷಿಸಬಹುದು," ಎಂದು ಸರ್ಕಾರಿ ಅಧಿಕಾರಿಗಳು ತಿಳಿಸಿದ್ದಾರೆ.

ಜವಳಿ ಮತ್ತು ಉಡುಪು ಜೊತೆಗೆ ರತ್ನಗಳು ಮತ್ತು ಆಭರಣಗಳು 'ಐಷಾರಾಮಿ ಸರಕುಗಳ' ಪಟ್ಟಿಗೆ ಸೇರಿವೆ. ಇದು ಒಟ್ಟಾಗಿ ಭಾರತದ ರಫ್ತುಗಳಿಕೆಯಲ್ಲಿ ಹೆಚ್ಚಿನ ಪಾಲನ್ನು ಹೊಂದಿದೆ.

ಇತರ ಕೈಗಾರಿಕೆಗಳಲ್ಲಿನ ರಫ್ತುದಾರರು ಸಹ ಒತ್ತಡದಲ್ಲಿದ್ದಾರೆ. ಇವುಗಳಲ್ಲಿ ಚರ್ಮ ಮತ್ತು ಪಾದರಕ್ಷೆಗಳು, ರಾಸಾಯನಿಕಗಳು, ಎಂಜಿನಿಯರಿಂಗ್ ಉತ್ಪನ್ನಗಳು ಮತ್ತು ಕೃಷಿ ಮತ್ತು ಸಾಗರೋತ್ತರ ರಫ್ತುಗಳು ಸೇರಿವೆ

## ಶಿಕ್ಷಕರು ರಾಷ್ಟ್ರ ನಿರ್ಮಾಣಕಾರರು: ಸಿಯುಕೆ ಕುಲಪತಿ ಬಟ್ಟು ಸತ್ಯನಾರಾಯಣ



**ಕಲಬುರಗಿ:** ಶಿಕ್ಷಕರು ರಾಷ್ಟ್ರ ನಿರ್ಮಾಣಕಾರರು ಎಂದು ಕರ್ನಾಟಕಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಹೇಳಿದರು. ಅವರು ಸಿಯುಕೆಯಲ್ಲಿ ನಡೆದ ಶಿಕ್ಷಕರ ದಿನಾಚರಣೆಯ ಸಂದರ್ಭದಲ್ಲಿ ಮಾತನಾಡುತ್ತಿದ್ದರು. ಅವರು ಮುಂದುವರೆದು ಮಾತನಾಡಿ ಡಾ. ಸರ್ವಪಲ್ಲಿ ರಾಧಾಕೃಷ್ಣನ ಅವರು ಒಬ್ಬ ಶ್ರೇಷ್ಠ ಶಿಕ್ಷಕರಾಗಿದ್ದರು ಅವರ ಜನ್ಮ ದಿನವನ್ನು ಶಿಕ್ಷಕರ ದಿನವನ್ನಾಗಿ ನಾವು ಆಚರಿಸುತ್ತಿದ್ದೇವೆ ಎಂದು ಅವರು ಹೇಳಿದರು.

2023-24ನೇ ಶೈಕ್ಷಣಿಕ ವರ್ಷಕ್ಕಾಗಿ ಸಿಯುಕೆಯು ಎನ್‌ಐಆರ್‌ಎಫ್ (ರಾಷ್ಟ್ರೀಯ ಸಾಂಸ್ಥಿಕ ಶ್ರೇಯಾಂಕಚೌಕಟ್ಟು)ನಲ್ಲಿ 150 ರಿಂದ 200 ಶ್ರೇಣಿಯಲ್ಲಿ ಸ್ಥಾನ ಪಡೆದಿದೆ. ಶಿಕ್ಷಕರ ಕಠಿಣ ಪರಿಶ್ರಮಮತ್ತು ಸತತ ಪ್ರಯತ್ನಗಳಿಂದಾಗಿ ಇದು ಸಾಧ್ಯವಾಗಿದೆ. ಶಿಕ್ಷಕರು ವಿಶ್ವವಿದ್ಯಾನಿಲಯದ ಬೆನ್ನೆಲುಬು. ವಿಶ್ವವಿದ್ಯಾನಿಲಯದ ಅಭಿವೃದ್ಧಿಗಾಗಿನಾವು ಬಲವಾದ ಹಳೆಯ ವಿದ್ಯಾರ್ಥಿಗಳ ಜಾಲ, ನಿಯೋಜನೆ ಕೋಶ, ಅಪ್ರೆಂಟಿಸ್‌ಶಿಪ್‌ಆಧಾರಿತ ಕೋರ್ಸಗಳು, ಇಂಟರ್ನ್‌ಶಿಪ್ ಮತ್ತು ಉದ್ಯಮ ಮತ್ತು ಶೈಕ್ಷಣಿಕಸಹಯೋಗಗಳನ್ನು ಹೊಂದಬೇಕು ಎಂದು ಹೇಳಿದರು.

ಕುಲಸಚಿವ ಪ್ರೊ. ಆರ್. ಆರ್. ಬಿರಾದಾರ್ ಮತ್ತು ಸಂಶೋಧನೆ ಮತ್ತು ಅಭಿವೃದ್ಧಿ ನಿರ್ದೇಶಕ ಪ್ರೊರ. ಎನ್. ಸತ್ಯನಾರಾಯಣ ಅವರು ಈ ಸಂದರ್ಭದಲ್ಲಿ ಮಾತನಾಡಿದರು..

ಈ ಸಂದರ್ಭದಲ್ಲಿ ಅತ್ಯುತ್ತಮ ಪ್ರಕಟಣೆಗಳಿಗಾಗಿ ಶಿಕ್ಷಕರಾದಪ್ರೊ?ರ.ಶೇಷನಾಥ ಭೋಸ್ಲೆ, ಡಾ.ಸಂಜೀತ್ ಸರ್ಕಾರ್, ಡಾ.ನುರಸಿಂಗ ಚರಣ್‌ಪ್ರಧಾನ್ ಅವರನ್ನು ಸನ್ಮಾನಿಸಲಾಯಿತು.ಪುಸ್ತಕಗಳ ಪ್ರಕಟಣೆಗಾಗಿ ಡಾ.ರೋಹಿಣಾಕ್ಷ ಶ್ರೀರ್ಲಾರು, ಪ್ರೊ.ಎಂ.ಎ.ಅಸ್ಲಂ, ಡಾ.ಬಾಬು ಎನ್, ಡಾ.ಜಯದೇವಿ ಜಂಗಮಶೆಟ್ಟಿ ಮತ್ತು ಡಾ.ರಾಘವೇಂದ್ರ ಬೋನಾಳ್‌ರನ್ನು ಸನ್ಮಾನಿಸಲಾಯಿತು.ಪ್ರತಿಷ್ಠಿತ ಸಂಸ್ಥೆಯಿಂದ ಪ್ರಶಸ್ತಿ ಪಡೆದ ಗ್ರಂಥಪಾಲಕ ಡಾ.ಪಿ.ಎಸ್.ಕಟ್ಟಿಮನಿಹಾಗೂ ಡಾ.ಜಯದೇವಿ ಜಂಗಮಶೆಟ್ಟಿ ಅವರನ್ನು ಕೂಡ ಸನ್ಮಾನಿಸಲಾಯಿತು.

ಕಾರ್ಯಕ್ರಮದ ಸಂಯೋಜಕ ಪ್ರೊ?ರ.ಆರ್.ಎಸ್.ಹೆಗಡಿ ಸ್ವಾಗತಿಸಿದರು. ಡಾ.ರಾಜೀವ್ ಜೋಶಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಡಾ.ಜಯದೇವಿ ಜಂಗಮಶೆಟ್ಟಿ,

ಡಾ.ರವಿ ಕಿರಣ್ ನಾಖೋಡ್ ಮತ್ತು ಡಾ.ಸ್ವಪ್ನಿಲ್ ಚಾಪೇಕರ್ ರಾಷ್ಟ್ರಗೀತೆ ಮತ್ತು ನಾಡ ಗೀತೆಯನ್ನು ಹಾಡಿದರು.ಈ ಸಂದರ್ಭದಲ್ಲಿ ಪ್ರೊ?ರ. ಚನ್ನವೀರ್ ಆರ್.ಎಂ, ಪ್ರೊ. ಜಿ.ಆರ್. ಅಂಗಡಿ, ಪ್ರೊ.ಪರಮೇಶ್, ವಿವಿಧ ನಿಕಾಯಗಳ ಡೀನ್‌ರು, ವಿವಿಧ ವಿಭಾಗಗಳ ಮುಖ್ಯಸ್ಥರುಮತ್ತು ಅಧ್ಯಾಪಕರು ಉಪಸ್ಥಿತರಿದ್ದರು.

## ಮಹಿಳೆಯರ ಮೇಲಿನ ದೌರ್ಜನ್ಯ ಖಂಡಿಸಿ ಪ್ರತಿಭಟನೆ

**ವಿಜಯಪುರ:** ಮಹಿಳೆಯರ ಮತ್ತು ಮಕ್ಕಳ ಮೇಲಿನ ದೌರ್ಜನ್ಯಗಳಿಗೆ ಕೊನೆಹಾಕಿ ಸೂಕ್ತ ಭದ್ರತೆ ಒದಗಿಸಲು ಆಗ್ರಹಿಸಿ ಮಹಿಳಾ ಸಾಂಸ್ಕೃತಿಕ ಸಂಘಟನೆ ಪ್ರತಿಭಟನೆ ನಡೆಸಿತು.

ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆಯು ವಿಜಯಪುರದ ಜಿಲ್ಲಾಧಿಕಾರಿಗಳ ಕಚೇರಿ ಎದುರು ಅಖಿಲ ಭಾರತ ಸಾಂಸ್ಕೃತಿಕ ಸಂಘಟನೆ ಸಮಿತಿಯ ಕರೆಯ ಮೇರೆಗೆ ಜಿಲ್ಲಾಧಿಕಾರಿಗಳ ಕಚೇರಿ ಎದುರು ಸಾಂಕೇತಿಕ ಪ್ರತಿಭಟನೆ ನಡೆಸಿ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆ ಸಂಘಟನೆಯು ದೇಶದಾದ್ಯಂತ ಮಹಿಳೆಯರ ಹಕ್ಕುಗಳಿಗಾಗಿ, ಮಹಿಳೆಯರ ಘನತೆಯ ಬದುಕಿಗಾಗಿ ಶ್ರಮಿಸುತ್ತಿದೆ. ವಿಜಯಪುರ ಜಿಲ್ಲೆಯಲ್ಲಿ ಬಾಲಗರ್ಭಿಣಿಯರ ಸಂಖ್ಯೆ ಹೆಚ್ಚಾಗಿದೆ ಎಂದು ವರದಿಯಾಗಿದೆ, ಅದೇ ರೀತಿ ಇತ್ತೀಚೆಗೆ 5 ವರ್ಷದ ಹೆಣ್ಣು ಮಗುವಿನ ಮೇಲೆ ತಂದೆಯಿಂದಲೇ ಲೈಂಗಿಕ ದೌರ್ಜನ್ಯ ನಡೆದಿದ್ದು ಇಡೀ ಜಿಲ್ಲೆಯ ಜನತೆ ತಲೆತಗ್ಗಿಸುವಂತಾಗಿದೆ.

ಹಳೆಯ ಉಳಿಗಮಾನ್ಯ ವ್ಯವಸ್ಥೆಯ ಪುರುಷ ಪ್ರಧಾನ ಮೌಲ್ಯಗಳ ಜೊತೆಗೆ ಇಂದಿನ ಹೆಣ್ಣು ಬೋಗದ ವಸ್ತು ಎಂಬಂತೆ ಬಿತ್ತರಿಸುವ ಅಶ್ಲೀಲ ಸಿನಿಮಾ ಸಾಹಿತ್ಯ, ಜಾಹೀರಾತುಗಳು, ಫೋನ್, ವೆಬ್‌ಸೈಟ್‌ಗಳು, ಮದ್ಯ ಮಾದಕ ವಸ್ತುಗಳು ಯುವಜನತೆಯನ್ನು ದಾರಿ ತಪ್ಪಿಸುತ್ತಿವೆ. ಸಮಾಜದಲ್ಲಿ ಅಪರಾಧಗಳು ಹೆಚ್ಚುವಂತೆ ಪ್ರೇರಿಪಿಸುವಂತಾಗಿದೆ. ಸಾಮಾಜಿಕ ವಾತಾವರಣದಲ್ಲಿ ಮೌಲ್ಯಗಳು ಕುಸಿಯುತ್ತಿವೆ.

ಮಹಿಳೆಯರ ಜ್ವಲಂತ ಸಮಸ್ಯೆಗಳಾದ ಬಾಲ್ಯ ವಿವಾಹ, ಸ್ತ್ರೀ ಭ್ರೂಣ ಹತ್ಯೆ, ಲಿಂಗ ತಾರತಮ್ಯ, ವರದಕ್ಷಿಣೆ, ಕೌಟುಂಬಿಕ ದೌರ್ಜನ್ಯ, ಅಪೌಷ್ಟಿಕತೆ, ಅಭದ್ರತೆ ಹಾಗೂ ಉದ್ಯೋಗಸ್ಥ ಮಹಿಳೆಯರು ಎದುರಿಸುತ್ತಿರುವ ಸಮಸ್ಯೆಗಳಿಗೆ





ಪರಿಹಾರವಾಗಿ ಎಲ್ಲಾ ಸ್ತರದ ಮಹಿಳಾ ಸಮುದಾಯವನ್ನು ಸಂಘಟಿಸುತ್ತಿದೆ.

ಮಹಿಳೆ ಮತ್ತು ಮಕ್ಕಳ ಮೇಲೆ ದೇಶಾದ್ಯಂತ ನಡೆಯುತ್ತಿರುವ ಘೋರ ಅತ್ಯಾಚಾರ, ಗುಂಪು ಅತ್ಯಾಚಾರ ಮತ್ತು ಕೊಲೆಗಳು, ಆ ಪ್ರಕರಣಗಳ ತಾರ್ಕಿಕ ಹಂತಕ್ಕೆ ತಲುಪಲು ದೀರ್ಘಕಾಲ ತೆಗೆದುಕೊಳ್ಳುವುದು. ಹಲವು ಪ್ರಕರಣಗಳಲ್ಲಿ ಪ್ರಭಾವೀ ಆರೋಪಿಗಳು ಖುಲಾಸೆಯಾಗಿರುವುದು ಅಥವಾ ನಿಜವಾದ ಆರೋಪಿಗಳು ಸಿಗದೇ ಇರುವುದು ಸಾರ್ವಜನಿಕರಲ್ಲಿ ಸಿಟ್ಟು ಮಡುಗಟ್ಟುವಂತೆ ಮಾಡಿದೆ ಎಂದು ಪ್ರತಿಭಟನೆಕಾರರು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಇಂದಿಗೂ ಕದ್ದು ಮುಚ್ಚಿ ನಡೆಯುತ್ತಿರುವ ಸ್ತ್ರೀ ಭ್ರೂಣ ಹತ್ಯೆಯ ಘಟನೆಗಳು ಸಮಾಜದಲ್ಲಿರುವ ಹಳೆಯ ಮೌಲ್ಯಗಳನ್ನು ಎತ್ತಿ ಹಿಡಿಯುತ್ತವೆ.

2024-25ರ ಅವಧಿಯಲ್ಲಿ 700ಕ್ಕೂ ಹೆಚ್ಚು ಬಾಲ್ಯ ವಿವಾಹಗಳು ವರದಿಯಾಗಿದ್ದು, ಕಳೆದ ಮೂರು ವರ್ಷಗಳಲ್ಲಿ (2023-ಜುಲೈ 2025) 80,813 ಬಾಲ ಗರ್ಭಿಣಿ ಪ್ರಕರಣಗಳು (ಆರ್ ಸಿ ಎಚ್ ಪೋ?ರ್ಟಲ್) ಪತ್ತೆಯಾಗಿರುವುದು ಆತಂಕವನ್ನು ಮೂಡಿಸಿದೆ ಎಂದು ಅವರು ಹೇಳಿದರು.

ಇಂತಹ ಗಂಭೀರ ಪರಿಸ್ಥಿತಿಯಲ್ಲಿ ಸರ್ಕಾರವು ಸ್ಪಂದಿಸಬೇಕಾಗಿದೆ. ಹಲವಾರು ಸಾಮಾಜಿಕ ಸಮಸ್ಯೆಗಳ ಪರಿಹಾರಕ್ಕೆ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಬೇಕಾಗಿದೆ. ಈ ಮೇಲೆ ಪ್ರಸ್ತಾಪಿಸಿರುವ ಹಲವಾರು ಸಮಸ್ಯೆಗಳ ಕುರಿತು ರಾಜ್ಯದ ಮಹಿಳೆಯರ ಧ್ವನಿಯಾಗಿ ಮಹಿಳಾ ಸಾಂಸ್ಕೃತಿಕ ಸಂಘಟನೆಯ ರಾಜ್ಯ ಸಮಿತಿಯು ಮಹಿಳೆಯರ ಹಾಗೂ ಮಕ್ಕಳ ಹಕ್ಕೊತ್ತಾಯಗಳನ್ನು ಮಂಡಿಸಿದೆ.

ಮಹಿಳೆಯರ ಮತ್ತು ಮಕ್ಕಳ ಭದ್ರತೆಗೆ ಸೂಕ್ತ ಕ್ರಮ ಕೈಗೊಳ್ಳಿ,

ಸ್ತ್ರೀ ಭ್ರೂಣ ಹತ್ಯೆ ಕಾಯ್ದೆಯನ್ನು (ಪಿಸಿ ಮತ್ತು ಪಿಎನ್ ಡಿಟಿ) ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಿ, ಅಶ್ಲೀಲ ಸಿನಿಮಾ-ಸಾಹಿತ್ಯ-ಪೋರ್ನ್ ಜಾಹಿರಾತುಗಳನ್ನು, ಮದ್ಯ ? ಮಾದಕ ವಸ್ತುಗಳನ್ನು ನಿಷೇಧಿಸಿ,

ಬಾಲ್ಯ ವಿವಾಹ , ಅಪ್ರಾಪ್ತ ಗರ್ಭಧಾರಣೆ ತಡೆಗಟ್ಟಲು ಕಠಿಣ ಕ್ರಮ ಕೈಗೊಳ್ಳಿ.

ಮಹಿಳೆಯರ ಮತ್ತು ಮಕ್ಕಳ ಮಾನವ ಕಳ್ಳ ಸಾಗಾಣಿಕೆಯನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಿ.

ಫಾಸ್ಟ್ ಟ್ರ್ಯಾಕ್ ನ್ಯಾಯಾಲಯಗಳ ಸಂಖ್ಯೆಗಳನ್ನು ಹೆಚ್ಚಿಸಿ, ಅವುಗಳ ಸರಿಯಾದ ಕಾರ್ಯನಿರ್ವಹಣೆಯನ್ನು ಖಾತ್ರಿಪಡಿಸಿ,

ಶಾಲಾ-ಕಾಲೇಜು ಮತ್ತು ಕಚೇರಿಗಳಲ್ಲಿ ನಮ್ಮ ಕ್ಲಿನಿಕ್ ಪ್ರಾರಂಭಿಸಿ.

ಸಾಮಾಜಿಕ ಮಾಧ್ಯಮಗಳಲ್ಲಿನ (ಶಾರ್ಟ್ಸ್, ರೀಲ್ಸ್, ಇನ್ಸ್ಟಾಗ್ರಾಮ್, ಇತ್ಯಾದಿ) ಅನುಚಿತ ವಿಷಯಗಳಿಗೆ ತಡೆಹಾಕಿ ಹಾಗೂ ಮದ್ಯ-ಮಾದಕ ವಸ್ತುಗಳನ್ನು ನಿಷೇಧಿಸಿ, ಅತ್ಯಾಚಾರಿಗಳಿಗೆ ನಿದರ್ಶನೀಯ ಶಿಕ್ಷೆ ನೀಡಿ, ಯುವತಿಯರಿಗಾಗಿ ಜೂಡೋ-ಕರಾಟೆಯಂತಹ ಆತ್ಮ ರಕ್ಷಣಾ ಕೋರ್ಸ್ ಗಳನ್ನು ಕಡ್ಡಾಯಗೊಳಿಸಿ

ಆಂತರಿಕ ದೂರು ಸಮಿತಿಗಳನ್ನು ಶಾಲೆ, ಕಾಲೇಜು ಹಾಗೂ ಉದ್ಯೋಗದ ಸ್ಥಳಗಳಲ್ಲಿ ಸ್ಥಾಪಿಸಿ, ಕಾರ್ಯನಿರ್ವಹಿಸುವಂತೆ ಕ್ರಮ ಕೈಗೊಳ್ಳಿ. ಸಮಾನ ಕೆಲಸಕ್ಕೆ ಸಮಾನ ವೇತನ ನೀಡಿ, ಶಿಕ್ಷಣ-ಆರೋಗ್ಯದ ವ್ಯಾಪಾರೀಕರಣವನ್ನು ತಡೆಗಟ್ಟಿ, ಜಸ್ಟಿಸ್ ವರ್ಮ ಸಮಿತಿಯ ವರದಿಯನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸಿ ಹಿರೇ ಮುಂತಾದ ಪ್ರಮುಖ ಬೇಡಿಕೆಗಳನ್ನು ಮಂಡಿಸಿ ಜಾರಿಗೊಳಿಸಲು ಆಗ್ರಹಿಸಿತು.

ಪ್ರತಿಭಟನೆಯಲ್ಲಿ ಎಐಎಮ್‌ಎಸ್‌ಎಸ್ ಜಿಲ್ಲಾಧ್ಯಕ್ಷೆ ಗೀತಾ ಹೆಚ್, ಕಾರ್ಯದರ್ಶಿ ಶಿವಬಾಳಮ್ಮ ಕೊಂಡಗೂಳಿ, ಜಂಟಿ ಕಾರ್ಯದರ್ಶಿ ಶಿವರಂಜನಿ, ನಿವೃತ್ತ ಉಪನ್ಯಾಸಕಿ ಲಲಿತಾ ಬಿಜ್ಜರಗಿ, ಜಿಲ್ಲಾ ಸಮಿತಿ ಸದಸ್ಯೆ ಜ್ಯೋತಿ ಹಚಡದ ಇದ್ದರು.

## ನಾಗಮೋಹನದಾಸ ವರದಿಯಲ್ಲಿ ಸ್ಪರ್ಶ,ಅಸ್ಪೃಶ್ಯ ಪದ ತೆಗೆಯಲು ಆಗ್ರಹ

**ಇಂಡಿ:** ನ್ಯಾಯಮೂರ್ತಿ ನಾಗಮೋಹನದಾಸ ವರದಿಯಲ್ಲಿ ಉಲ್ಲೇಖಿಸಿರುವ ಸ್ಪರ್ಶ ಹಾಗೂ ಅಸ್ಪೃಶ್ಯ ಪದಗಳನ್ನು ತಕ್ಷಣ ತೆಗೆಯುವುವಂತೆ ಆಲ್ ಇಂಡಿಯಾ ಬಂಜಾರ ಸಂಘದ ಆಗ್ರಹಿಸಿದೆ.

ನ್ಯಾಯಮೂರ್ತಿ ನಾಗಮೋಹನದಾಸ ಆಯೋಗದ ವರದಿಯಲ್ಲಿ ಲಂಬಾಣಿ, ಕೊರಚಾ, ಕೊರಮ, ಭೋವಿ, ಅಲೆಮಾರಿ ಅಥವಾ ಅರೆ ಅಲೆಮಾರಿ ಸಮುದಾಯದವರಿಗೆ ಸ್ಪರ್ಶ ಸಮುದಾಯಗಳೆಂದು ಪ್ರವರ್ಗ ಎ, ಮತ್ತು ಬಿ ಸಮುದಾಯದವರನ್ನು ಅಸ್ಪೃಶ್ಯ ಸಮುದಾಯದವರು ಎಂದು ಅಸಂವಿಧಾನಿಕ ಹಾಗೂ ಕಾನೂನು ವಿರೋಧಿ ಪದಗಳನ್ನು ಈ ವರದಿಯಲ್ಲಿ ಉಪಯೋಗಿಸಿರುವುದಕ್ಕೆ ತೀವ್ರ ವಿರೋಧವಿದೆ ಎಂದು ಸಂಘ ಹೇಳಿದೆ.

ಈ ಕುರಿತು ತಾಲೂಕು ಆಡಳಿತ ಮೂಲಕ ಮುಖ್ಯ ಮಂತ್ರಿ ಸಿದ್ದರಾಮಯ್ಯಗೆ ಮನವಿ ಸಲ್ಲಿಸಿದ ಸಂಘವು ಲಂಬಾಣಿ, ಕೊರಚಾ, ಕೊರಮ, ಭೋವಿ, ಅಲೆಮಾರಿ ಅಥವಾ ಅರೆ ಅಲೆಮಾರಿ ಸಮುದಾಯದವರಿಗೆ ವಿಮುಕ್ತ ಸಮುದಾಯಗಳು ಎಂದು ಮಾರ್ಪಡಿಸಿ ದಾಖಲೀಕರಿಸಬೇಕಾಗಿ ಮನವಿ



ಮಾಡಿದೆ. ಭಾರತದ ಸಂವಿಧಾನವು, ವಿಧಿ 17 ರ ಮೂಲಕ, ಅಸ್ಪೃಶ್ಯತೆಯನ್ನು ಮತ್ತು ಅದರ ಎಲ್ಲಾ ರೂಪಗಳಲ್ಲಿ ರದ್ದುಗೊಳಿದೆ. ಇದು ಕಾನೂನುಬಾಹಿರ ಮಾತ್ರವಲ್ಲದೆ ಶಿಕ್ಷಾರ್ಹ ಎಂದು ಘೋಷಿಸಿದೆ. ಅಧಿಕೃತ ಆಯೋಗಗಳು ಈ ಪರಿಭಾಷೆಯನ್ನು ಪುನರುಜ್ಜೀವನಗೊಳಿಸುವುದು ಸಾಂವಿಧಾನಿಕ ಆದೇಶಕ್ಕೆ ವಿರುದ್ಧವಾಗಿದೆ.

ಕರ್ನಾಟಕ ರಾಜ್ಯ ವಿರುದ್ಧ ಅಪ್ಪ ಬಾಲು ಇಂಗಳೆ (1995) ಪ್ರಕರಣದಲ್ಲಿ, ಸ್ವತಂತ್ರ ಭಾರತದಲ್ಲಿ ಅಸ್ಪೃಶ್ಯತೆಗೆ ಸ್ಥಾನವಿಲ್ಲ ಎಂದು ಸುಪ್ರೀಂ ಕೋರ್ಟ್ ಸ್ಪಷ್ಟಪಡಿಸಿದೆ. ಮೀಸಲಾತಿಗಳ ಉಪ-ವರ್ಗೀಕರಣದ ನೆಪದಲ್ಲಿಯೂ ಸಹ, ಅಂತಹ ಅಸಂವಿಧಾನಿಕ ವರ್ಗಗಳನ್ನು ಮರುಪರಿಚಯಿಸುವ ಅಧಿಕಾರ ಯಾವುದೇ ಆಯೋಗ ಅಥವಾ ರಾಜ್ಯ ಸಂಸ್ಥೆಗೆ ಇಲ್ಲ.

"ಸ್ಪೃಶ್ಯ ಮತ್ತು "ಅಸ್ಪೃಶ್ಯ" ಈ ಪದಗಳನ್ನು ಮತ್ತೆ ಬಳಸಲು ಪ್ರಾರಂಭಿಸಿದರೆ, ಅದೇ ಅನ್ಯಾಯವನ್ನು ಹೊಸ ರೂಪದಲ್ಲಿ ಪುನರಾವರ್ತಿಸುವುದಾಗಿದೆ. ಅದರಲ್ಲೂ, ಅಧಿಕೃತ ವರದಿಗಳಲ್ಲಿ ಬಳಸಿದಾಗ, ಅವು ತಾರತಮ್ಯವನ್ನು ಕಾನೂನುಬದ್ಧಗೊಳಿಸುವ, ಪರಿಶಿಷ್ಟ ಜಾತಿಗಳಲ್ಲಿ ಹೊಸ ಶ್ರೇಣಿಗಳನ್ನು ಸೃಷ್ಟಿಸುವ ಮತ್ತು ಬಂಜಾರ ಮತ್ತು ಭೋವಿಯಂತಹ ಇನ್ನಿತರ ಸಮುದಾಯಗಳ ಪರಿಶಿಷ್ಟ ಜಾತಿ ಸ್ಥಾನಮಾನವನ್ನು ಪ್ರಶ್ನಿಸುವ ಪ್ರಯತ್ನಗಳಂತಹ ವಿಭಜಕ ಕಾರ್ಯಸೂಚಿಗಳಿಗೆ ದಾರಿ ಮಾಡಿಕೊಡುವ ಅಪಾಯವನ್ನುಂಟುಮಾಡುತ್ತವೆ.ಇಂಥ ನಡೆ ದಲಿತರನ್ನು ವಿಭಜಿಸುವುದು ಮತ್ತು ಅವರಿಗೆ ದೊರೆಯುವ ಪ್ರಯೋಜನಗಳನ್ನು ನಿಯಂತ್ರಿಸುವ ಮೂಲಕ ಅವರನ್ನು ಮತ್ತೆ ಅಧಃಪತನಕ್ಕೆ ತಳ್ಳಲು ಒಂದು ರಾಜಕೀಯ ಆಟವಾಗಿದೆ

ಮೂಲಭೂತವಾಗಿ, ಈ ಸಮುದಾಯಗಳ ಸೇರ್ಪಡೆಯು ಆಕಸ್ಮಿಕವಲ್ಲ. ಈ ಮೊದಲು ಮಿಲ್ಲರ್ ಆಯೋಗದಿಂದ, ನಂತರ ಬ್ರಿಟಿಷ್ ಕಾನೂನಿನಿಂದ ಮತ್ತು ಅಂತಿಮವಾಗಿ ಭಾರತದ ಸಂವಿಧಾನದಿಂದ ಈ ಸಮುದಾಯಗಳು ಸಾಂವಿಧಾನಿಕ ರಕ್ಷಣೆಗೆ ಅಗತ್ಯವಿರುವ ಎಲ್ಲ ಮಾನದಂಡಗಳ ಪರಧಿಯೊಳಗೆ ಒಳಗೊಂಡಿವೆ ಎಂಬುದು ಸ್ಪಷ್ಟವಾಗಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ

## ಅಲ್ಲಮಪ್ರಭು ಪಾಟೀಲ ಎಂ.ವೈ.ಪಾಟೀಲ ಮೇಘಾಲಯ ಭೇಟಿ



**ಕಲಬುರಗಿ:** ಕರ್ನಾಟಕ ವಿಧಾನಸಭೆಯ ಸಾರ್ವಜನಿಕ ಉದ್ಯಮಗಳ ಸಮಿತಿಯು ಸಮಿತಿಯಲ್ಲಿರುವ ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ್, ಅಫಜಲಪುರ ಶಾಸಕ ಎಂ.ವೈ.ಪಾಟೀಲ ಸಮಿತಿ ಅಧ್ಯಕ್ಷ ಬಸವರಾಜ ನೀಲಪ್ಪ ಶಿವಣ್ಣನವರ್ ಮತ್ತು ಸಮಿತಿ ಸದಸ್ಯರಾದ ಆರಗ ಜ್ಞಾನೇಂದ್ರ, ಉಮಾಶ್ರೀ ಹಾಗೂ ಭಾರತಿಶೆಟ್ಟಿ ಅವರನ್ನು ಒಳಗೊಂಡ ತಂಡ ಮೇಘಾಲಯ ವಿಧಾನಸಭೆಯ ಸಭಾಧ್ಯಕ್ಷರಾದ ಥಾಮಸ್ ಎ.ಸಂಗ್ಮಾ ಮತ್ತು ಉಪಸಭಾಧ್ಯಕ್ಷರಾದ ಟಿ.ಡಿ.ಶಿರ ಅವರನ್ನು ಭೇಟಿ ಮಾಡಿತು.

ಇದೇ ಸಂದರ್ಭದಲ್ಲಿ ಮೇಘಾಲಯದ ಸಾರ್ವಜನಿಕ ಉದ್ದಿಮೆಗಳ ಸಮಿತಿಯ ಕಾರ್ಯವಿಧಾನದ ಬಗ್ಗೆ ಮತ್ತು ಮೇಘಾಲಯದ ವಿವಿಧ ವಲಯಗಳ ವಿದ್ಯಮಾನಗಳ ಬಗ್ಗೆ ಸಮಿತಿ ಅವರೊಂದಿಗೆ ಚರ್ಚಿಸಿತು.

ಕರ್ನಾಟಕ ವಿಧಾನಸಭೆಯ ಸಾರ್ವಜನಿಕ ಉದ್ದಿಮೆಗಳ ಸಮಿತಿಯ ಉಪಕಾರ್ಯದರ್ಶಿಯವರು ಸಮಿತಿಯ ಕಾರ್ಯವಿಧಾನ ಮತ್ತು ವಿಧಾನಸಭೆಯ ಕಾರ್ಯವಿಧಾನದ ನಿಯಮಗಳ ಪುಸ್ತಕಗಳನ್ನು ಮೇಘಾಲಯ ವಿಧಾನಸಭಾಧ್ಯಕ್ಷರಿಗೆ ಸಲ್ಲಿಸಿದರು.

## ನೇಣು ಹಾಕಿಕೊಂಡು ಯುವತಿ ಆತ್ಮಹತ್ಯೆ

**ಕಲಬುರಗಿ:** ನೇಣು ಹಾಕಿಕೊಂಡು ಯುವತಿಯೊಬ್ಬಳು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮಾಲಗತ್ತಿ ರಸ್ತೆಯ ಸೋನಿಯಾಗಾಂಧಿ ಕಾಲೋನಿಯಲ್ಲಿ ನಡೆದಿದೆ.

ಆಮೀನಾ ಮೇಹರಿನ್ ತಂದೆ ಅಲಿಸಾಬ್ (18) ಆತ್ಮಹತ್ಯೆ ಮಾಡಿಕೊಂಡವರು.

ಸಿಟ್ಟಿನ ಸ್ವಭಾವದವಳಾಗಿದ್ದ ಆಮೀನಾ ಮೇಹರಿನ್ ಆಗಾಗ ಸಣ್ಣಪುಟ್ಟ ವಿಚಾರಕ್ಕೆ ಸಿಟ್ಟು ಮಾಡಿಕೊಂಡು ಒಬ್ಬಂಟಿಯಾಗಿ ಮನೆಯ ಕೊಂಡಿ ಹಾಕಿಕೊಂಡು ರೂಮಿನಲ್ಲಿ ಇರುತ್ತಿದ್ದಳು. ಸೆ.3 ರಂದು ಮನೆಯಲ್ಲಿ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಳ್ಳಲು ಯತ್ನಿಸಿದ್ದು, ಆಸ್ಪತ್ರೆಗೆ ದಾಖಲಿಸಲಾಗಿತ್ತು.

## ಪೌರತ್ವ ಪಡೆಯುವ ಮೊದಲೇ ಮತದಾರರ ಪಟ್ಟಿಯಲ್ಲಿ ಸೋನಿಯಾ ಗಾಂಧಿ ಹೆಸರು; ಎಫ್ಐಆರ್ ದಾಖಲಾತಿ ಕೋರಿ ಕೋರ್ಟ್‌ಗೆ ಅರ್ಜಿ!



**ಹೊಸದಿಲ್ಲಿ:** ಬಿಹಾರ ಮತದಾರ ಪಟ್ಟಿ ಪರಿಷ್ಕರಣೆ ವಿರೋಧಿಸಿ ಕಾಂಗ್ರೆಸ್ ನೇತೃತ್ವದ ಇಂಡಿಯಾ ಮೈತ್ರಿಕೂಟ, "ಮತ ಅಧಿಕಾರ ಯಾತ್ರೆ" ನಡೆಸುತ್ತಿದೆ. ಬಿಹಾರದಲ್ಲಿ ಅಕ್ರಮವಾಗಿ ಭಾರೀ ಸಂಖ್ಯೆಯಲ್ಲಿ ಮತದಾರರನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ ಎಂದು ವಿಪಕ್ಷಗಳು ಆರೋಪಿಸುತ್ತಿವೆ.

ಆದರೆ ಕಾಂಗ್ರೆಸ್‌ಗೆ ತಿರುಗೇಟು ನೀಡಿರುವ ಆಡಳಿತಾರೂಢ ಬಿಜೆಪಿ, ಸೋನಿಯಾ ಗಾಂಧಿ ಅವರ ವಿದೇಶಿ ಮೂಲ ಮತ್ತು ಅವರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಿದ ರೀತಿಯನ್ನು ಪ್ರಶ್ನಿಸಿದೆ ಪೌರತ್ವ ಪಡೆಯುವ ಮೊದಲೇ ಸೋನಿಯಾ ಗಾಂಧಿ ಅವರ ಹೆಸರು ಮತದಾರರ ಪಟ್ಟಿಗೆ ಸೇರ್ಪಡೆ ಮಾಡಿದ್ದನ್ನೂ ಬಿಜೆಪಿ ಪ್ರಶ್ನಿಸಿದೆ.

ಇದಕ್ಕೆ ಪೂರಕವಾಗಿ ಭಾರತೀಯ ಪೌರತ್ವ ಪಡೆಯುವ ಮೂರು ವರ್ಷಗಳ ಮೊದಲೇ ಮತದಾರರ ಪಟ್ಟಿಯಲ್ಲಿ ಹೆಸರು ಇದ್ದ ಕಾರಣಕ್ಕಾಗಿ, ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಅವರ ವಿರುದ್ಧ ಎಫ್ಐಆರ್ ಕೋರಿ ದೆಹಲಿ ನ್ಯಾಯಾಲಯದಲ್ಲಿ ಕ್ರಿಮಿನಲ್ ದೂರು ದಾಖಲಾಗಿದೆ.

ರೌಸ್ ಅವೆನ್ಯೂ ನ್ಯಾಯಾಲಯ ಸಂಕೀರ್ಣದಲ್ಲಿರುವ ಎಸಿಜೆಎಂ ನ್ಯಾಯಾಲಯದಲ್ಲಿ ಸೋನಿಯಾ ಗಾಂಧಿ ವಿರುದ್ಧ ಕ್ರಿಮಿನಲ್ ದೂರು ದಾಖಲಾಗಿದ್ದು, ನ್ಯಾಯಾಧೀಶ ವೈಭವ್ ಚೌರಾಸಿಯಾ ಅವರು ಸೆಪ್ಟೆಂಬರ್ 10ರಂದು ವಿಚಾರಣೆ ಆರಂಭಿಸುವುದಾಗಿ ತಿಳಿಸಿದ್ದಾರೆ.

ಸೋನಿಯಾ ಗಾಂಧಿ ಅವರು 1983ರಲ್ಲಿ ಭಾರತೀಯ ಪೌರತ್ವ ಪಡೆದುಕೊಂಡಿದ್ದಾರೆ. ಆದರೆ ಅದಕ್ಕೂ ಮೊದಲೇ ಅಂದರೆ 1980ರಲ್ಲಿಯೇ ನವದೆಹಲಿ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ, ಸೋನಿಯಾ ಗಾಂಧಿ ಅವರ ಹೆಸರನ್ನು ಸೇರ್ಪಡೆಗೊಳಿಸಲಾಗಿದೆ" ಎಂದು ಆರೋಪಿಸಿ ವಿಕಾಸ್ ತ್ರಿಪಾಠಿ ಎಂಬುವವರು ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದಾರೆ.

ವಿಕಾಸ್ ತ್ರಿಪಾಠಿ ಅವರು ಎಸಿಜೆಎಂ ನ್ಯಾಯಾಲಯಕ್ಕೆ ಸಲ್ಲಿಸಿರುವ ಅರ್ಜಿಯಲ್ಲಿ, "ಸೋನಿಯಾ ಅವರ ಹೆಸರನ್ನು 1980ರಲ್ಲಿ ಮತದಾರರ ಪಟ್ಟಿಗೆ ಸೇರ್ಪಡೆ ಮಾಡಲಾಯಿತು. ಆದರೆ 1982ರಲ್ಲಿ ಅಳಿಸಿಹಾಕಲಾಯಿತು. ನಂತರ 1983ರಲ್ಲಿ ಮತ್ತೆ ಸೇರ್ಪಡೆ ಮಾಡಲಾಯಿತು. ಈ ಬಗ್ಗೆ ತನಿಖೆ ನಡೆಸುವುದು ಅಗತ್ಯ" ಎಂದು ಉಲ್ಲೇಖಿಸಿದ್ದಾರೆ.

## ಭಾರತೀಯರ ದಂಪತಿಯಲ್ಲಿ ಶೇ.76 ಮಂದಿ ಲೈಂಗಿಕ ಸಂತೃಪ್ತರು!



**ಉಡುಪಿ:** ಲೈಂಗಿಕ ವಿಚಾರದಲ್ಲಿ ಮಡಿವಂತಿಕೆಯಿದ್ದರೂ ಭಾರತ ಜಗತ್ತಿನಲ್ಲೇ ಲೈಂಗಿಕ ಆರೋಗ್ಯದಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆ ಹೊಂದಿದೆ.

36 ದೇಶಗಳಲ್ಲಿ ನಡೆದ ಲೈಂಗಿಕ ತೃಪ್ತಿ ಸಮೀಕ್ಷೆ(2025ರ ಡ್ಯುರೆಕ್ಸ್ ಸರ್ವೆ) ಪ್ರಕಾರ ಭಾರತದ 100 ದಂಪತಿಗಳ ಪೈಕಿ ಶೇ.76ರಷ್ಟು ಜೋಡಿ (ಫಿಲಿಪ್ಪೀನ್ಸ್: ಶೇ.70, ಮೆಕ್ಸಿಕೋ: ಶೇ.70, ಕೊಲಂಬಿಯಾ: ಶೇ.70, ದಕ್ಷಿಣ ಆಫ್ರಿಕಾ: ಶೇ.70) ಲೈಂಗಿಕ ಜೀವನದಲ್ಲಿ ತೃಪ್ತಿ, ಸಂತೃಪ್ತಿಯ ಭಾವ ಕಂಡಿದ್ದಾರೆ.

ಸೆ.4 ವಿಶ್ವ ಲೈಂಗಿಕ ಆರೋಗ್ಯ ದಿನ . 'ಲೈಂಗಿಕ ನ್ಯಾಯ: ನಾವೇನು ಮಾಡಬಹುದು?'

2025ನೇ ಸಾಲಿನ ಧ್ಯೇಯವಾಕ್ಯವಾಗಿದೆ. ಜಾಗತಿಕವಾಗಿ ಲೈಂಗಿಕ ಆರೋಗ್ಯ ಕುರಿತ ಅರಿವು ಹೆಚ್ಚಳ, ಜನರಲ್ಲಿ ಉದಾರ ಸಂವಹನ, ಶೈಕ್ಷಣಿಕ ಚರ್ಚೆಗೆ ಪ್ರೋತ್ಸಾಹ ಈ ದಿನದ ಉದ್ದೇಶವಾಗಿದೆ.

ಕಾಮಶಾಸ್ತ್ರ, ಖಜುರಾಹೊ ಶಿಲ್ಪಗಳ ನೆಲೆಯಲ್ಲಿ ಭಾರತ ಪ್ರಾಚೀನ ಕಾಲದಿಂದ ಲೈಂಗಿಕತೆಯನ್ನು ಬದುಕಿನ ಸಹಜ ಭಾಗವೆಂದು ತಿಳಿದಿದ್ದರೂ ತಪ್ಪಾಗಿ ಅರ್ಥೈಸಲಾಗಿದೆ, ಮಡಿವಂತಿಕೆಯ ಬೂದಿ ಮುಚ್ಚಿದ ಕೆಂಡದಂತಿಡಲಾಗಿದೆ.

ಶಾಲಾ ಪಠ್ಯಕ್ರಮದಲ್ಲಿ ಸಮಗ್ರ ಲೈಂಗಿಕ ಶಿಕ್ಷಣ ಬೇಕು, ಬೇಡವೆನ್ನುವ ಜಿಜ್ಞಾಸೆ ನಡುವೆ ಗ್ರಾಮೀಣ ಜನರಲ್ಲಿ ಲೈಂಗಿಕತೆ ಕುರಿತಂತೆ ಮಾಹಿತಿ ಕೊರತೆ, ಮೂಢನಂಬಿಕೆಗಳೂ ಹೆಚ್ಚಿವೆ. ಆಧುನಿಕ ತಂತ್ರಜ್ಞಾನ ಯುಗದಲ್ಲಿ ವೈಜ್ಞಾನಿಕ ಅರಿವು ಹೆಚ್ಚಬೇಕಿದೆ.

## ಇವಿಎಂ ಬದಲು ಬ್ಯಾಲೆಟ್ ಪೇಪರ್ : ಕಳ್ಳನ ಮನಸ್ಸು ಹುಳ್ಳಗೆ ಯಾಕೆ ಎಂದು ಪ್ರಶ್ನಿಸಿದ ಡಿಸಿಎಂ

**ಬೆಂಗಳೂರು :** ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಮತಪತ್ರ ಬಳಸಲು ರಾಜ್ಯ ಸರ್ಕಾರ ತೀರ್ಮಾನಿಸಿದರೆ, ಬಿಜೆಪಿ ಏಕೆ ಗಾಬರಿಯಾಗಬೇಕು ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಪ್ರಶ್ನಿಸಿದರು. ಇವಿಎಂಗೆ ಸೆಡ್ಡು ಹೊಡೆದು ಬ್ಯಾಲೆಟ್ ಪೇಪರ್ ನಲ್ಲಿ ಚುನಾವಣೆ ನಡೆಸುವ ನಿರ್ಧಾರಕ್ಕೆ ಸಿದ್ದರಾಮಯ್ಯ ಸರ್ಕಾರ ಬಂದಿದೆ.

ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಕೆ ಮಾಡುವ ಸರ್ಕಾರದ ತೀರ್ಮಾನಕ್ಕೆ ಬಿಜೆಪಿ ವಿರೋಧ ವ್ಯಕ್ತಪಡಿಸುತ್ತಿದೆ. ಮುಂದಿನ ಚುನಾವಣೆಗಳಲ್ಲಿ (ಸ್ಥಳೀಯ ಸಂಸ್ಥೆಗಳು) ಇಗಿಒ ಯಂತ್ರ ಬದಿಗಿಟ್ಟು ಮತ ಪತ್ರ(ಬ್ಯಾಲಟ್ ಪೇಪರ್ ) ಬಳಕೆಗೆ ನಿರ್ಧರಿಸಿರುವ ಕಾಂಗ್ರೆಸ್ ಸರ್ಕಾರದ ಸಂಪುಟದ ತೀರ್ಮಾನ ತಾವು ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿರುವುದೇ ಮತಗಳ್ಳತನದಿಂದ ಎಂದು ಸ್ವಯಂ ಪ್ರಾಮಾಣಿಕರಿಸಿಕೊಂಡಂತಿದೆ ಎಂದು ಬಿಜೆಪಿ ಲೇವಡಿ ಮಾಡಿದೆ.

ಇದಕ್ಕೆ ಪ್ರತಿಕ್ರಿಯಿಸಿರುವಾ ಡಿಕೆ ಶಿವಕುಮಾರ್, ?ಇದು ಕರ್ನಾಟಕ ಸರ್ಕಾರದ ತೀರ್ಮಾನ. ಇದ–ರಿಂದ ಬಿಜೆಪಿಗೆ ಆತಂಕವೇಕೆ? ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲು ರಾಜ್ಯ ಸರ್ಕಾರಕ್ಕೆ ಅವಕಾಶವಿದೆ. ಬಿಜೆಪಿ ಅವಧಿಯಲ್ಲಿ ಮಾಡಿರುವ ಕಾನೂನು ಇದೆ.

# ಜಿಎಸ್‌ಟಿ: ಮೊದಲು ಸ್ವಾಗತಿಸಿ, ನಂತರ ಮೋದಿ ಸರ್ಕಾರದ ಕಾಲೆಳೆದ ಸಿಎಂ ಸಿದ್ದರಾಮಯ್ಯ

**ಬೆಂಗಳೂರು :** ಜಿಎಸ್‌ಟಿ ಕೌನ್ಸಿಲ್ ಸಭೆಯಲ್ಲಿ ಕ್ರಾಂತಿಕಾರಿ ಬದಲಾವಣೆಯನ್ನು ತರಲಾಗಿದೆ. ಈ ವಿಷಯಕ್ಕೆ ಸಂಬಂಧಿಸಿದಂತೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರಿಕಾ ಪ್ರಕಟಣೆ ಹೊರಡಿಸಿದ್ದಾರೆ. ಅದು ಹೀಗಿದೆ :ತೆರಿಗೆದಾರ ಜನತೆ ಮತ್ತು ವ್ಯಾಪಾರಿ ವರ್ಗದ ಮೇಲಿನ ಆರ್ಥಿಕ ಭಾರ ಮತ್ತು ಅನುಷ್ಠಾನದ ಜಂಜಾಟವನ್ನು ತಗ್ಗಿಸಲು ಅತ್ಯಗತ್ಯವಾಗಿದ್ದ ತೆರಿಗೆ ಸುಧಾರಣೆಯನ್ನು ಜಾರಿಗೆ ತರುವ ಸರಕು ಸೇವಾ ತೆರಿಗೆ (ಜಿಎಸ್‌ಟಿ) ಮಂಡಳಿಯ ನಿರ್ಧಾರವನ್ನು ನಾವು ಸ್ವಾಗತಿಸುತ್ತೇವೆ.




ಇದು ನರೇಂದ್ರ ಮೋದಿ ಸರ್ಕಾರದ ಹೊಸ ಅವಿಷ್ಕಾರವೇನಲ್ಲ. ಅತ್ಯಂತ ಅವಸರದಲ್ಲಿ ಎನ್ ಡಿ ಎ ಸರ್ಕಾರ 2017ರಲ್ಲಿ ದೋಷಪೂರ್ಣ ಜಿ.ಎಸ್.ಟಿ ಯನ್ನು ಜಾರಿಗೊಳಿಸಿದಾಗಲೇ ಲೋಕಸಭೆ ವಿಪಕ್ಷ ನಾಯಕರಾದ ರಾಹುಲ್ ಗಾಂಧಿ ಮತ್ತು ವಿರೋಧ ಪಕ್ಷಗಳ ನಾಯಕರು ಜಿ.ಎಸ್.ಟಿ ಗೆ ಮಾಡಲೇಬೇಕಾಗಿದ್ದ ಸುಧಾರಣೆಗಾಗಿ ಒತ್ತಾಯಿಸಿದ್ದರು.

ಗಬ್ಬರ್ ಸಿಂಗ್ ತೆರಿಗೆ? ದೇಶದ ಸಣ್ಣ ವ್ಯಾಪಾರಿಗಳ ಸರ್ವನಾಶ ಮಾಡಲಿದೆ. ತೆರಿಗೆ ಪಾವತಿ ವ್ಯವಸ್ಥೆಯ ಸಂಕೀರ್ಣತೆ ಮತ್ತು ವೆಚ್ಚದ ಹೊರೆ ಅವರ ಬದುಕನ್ನು ಸರಣಿ ಕಷ್ಟಗಳ ಸರಮಾಲೆಗೆ ಸಿಲುಕಿಸಲಿದೆ ಎಂದು ಕಳೆದ ಎಂಟು ವರ್ಷಗಳಿಂದ ನಾವು ಹೇಳುತ್ತಲೇ ಬಂದಿದ್ದೆವು. ಆದರೆ ನರೇಂದ್ರ ಮೋದಿಯವರು ನಮ್ಮ ಮಾತಿಗೆ ಕಿವಿಗೊಡದೆ ನಿರ್ಲಕ್ಷಿಸುತ್ತಲೇ ಬಂದಿದ್ದರು.

ವಾಸ್ತವದಲ್ಲಿ ಜಿ.ಎಸ್.ಟಿ ತೆರಿಗೆ ವ್ಯವಸ್ಥೆ ಸಂಪೂರ್ಣವಾಗಿ ಕೇಂದ್ರ ಸರ್ಕಾರದ ಕಪಿಮುಷ್ಠಿಯಲ್ಲಿದ್ದು ರಾಜ್ಯ ಸರ್ಕಾರಗಳು ಅಸಹಾಯಕತೆಯಿಂದ ನರಳಾಡುವುದರ ಹೊರತಾಗಿ ಬೇರೇನನ್ನೂ ಮಾಡಲು ಸಾಧ್ಯವಿಲ್ಲದಂತಹ ಪರಿಸ್ಥಿತಿ ಇದೆ.

ವಾಸ್ತವದಲ್ಲಿ ಜಿ.ಎಸ್.ಟಿ ತೆರಿಗೆ ವ್ಯವಸ್ಥೆ ಸಂಪೂರ್ಣವಾಗಿ ಕೇಂದ್ರ ಸರ್ಕಾರದ ಕಪಿಮುಷ್ಠಿಯಲ್ಲಿದ್ದು ರಾಜ್ಯ ಸರ್ಕಾರಗಳು ಅಸಹಾಯಕತೆಯಿಂದ ನರಳಾಡುವುದರ ಹೊರತಾಗಿ ಬೇರೇನನ್ನೂ ಮಾಡಲು ಸಾಧ್ಯವಿಲ್ಲದಂತಹ ಪರಿಸ್ಥಿತಿ ಇದೆ.

ಈಗ ಜಿ.ಎಸ್.ಟಿ ಕೌನ್ಸಿಲ್ ಕೈಗೊಂಡಿರುವ ಜಿ.ಎಸ್.ಟಿ ಸುಧಾರಣೆಯ ಪ್ರಯತ್ನಕ್ಕೆ ಕೇಂದ್ರ ಸರ್ಕಾರವು ಬೆಂಬಲ ಕೊಟ್ಟಿರುವುದಕ್ಕೆ ಜನತೆಯ ಮೇಲಿನ ಅವರ ಕಾಳಜಿಗಿಂತಲೂ, ರಾಜ್ಯ ಸರ್ಕಾರಗಳು ಸತತವಾಗಿ ಹೇರುತ್ತಾ ಬಂದಿರುವ ಒತ್ತಡ ಮುಖ್ಯ ಕಾರಣ ಎನ್ನುವುದು ಸ್ಪಷ್ಟವಾಗಿದೆ. ಇದನ್ನು ಪ್ರಾರಂಭದಲ್ಲಿಯೇ ಮಾಡಿದ್ದರೆ ದೇಶದ ಜನತೆ ??ಗಬ್ಬರ್ ಸಿಂಗ್ ತೆರಿಗೆ? ವ್ಯವಸ್ಥೆಯಿಂದ ಪಡಬಾರದ ಕಷ್ಟಗಳನ್ನು ಪಡಬೇಕಾದ ಪರಿಸ್ಥಿತಿ ಇರುತ್ತಿರಲಿಲ್ಲ.

ಈಗ ಜಿ.ಎಸ್.ಟಿ ಸುಧಾರಣೆಯ ಲಾಭ ಬಳಕೆದಾರ ಜನತೆಗೆ ತಲುಪುವಂತೆ ಮಾಡುವುದು ಕೇಂದ್ರ ಸರ್ಕಾರ ಮತ್ತು ಕೇಂದ್ರ ತೆರಿಗೆ ಮತ್ತು ಸುಂಕ ಮಂಡಳಿ (ಸಿಬಿಐಸಿ)ಯ ಜವಾಬ್ದಾರಿಯಾಗಿದೆ. ಈ ತೆರಿಗೆ ಸುಧಾರಣೆಯನ್ನು ವ್ಯಾಪಾರಿಗಳು ಮತ್ತು ಉದ್ಯಮಿಗಳು ತಮ್ಮ ಲಾಭಾಂಶವನ್ನು ಹೆಚ್ಚುಮಾಡಲು ದುರುಪಯೋಗ ಮಾಡದಂತೆ ತಡೆಯುವ ಹೊಣೆ ಕೂಡಾ ಕೇಂದ್ರ ಸರ್ಕಾರದ್ದಾಗಿದೆ.

ಈಗಿನ ಲೆಕ್ಕಾಚಾರದ ಪ್ರಕಾರ ಈಗಿನ ಜಿ.ಎಸ್.ಟಿ ಸುಧಾರಣೆಯಿಂದಾಗಿ ಕರ್ನಾಟಕ ಸರ್ಕಾರ ವಾರ್ಷಿಕ ?15,000 ದಿಂದ ?20,000 ಕೋಟಿಯಷ್ಟು ವರಮಾನವನ್ನು ಕಳೆದುಕೊಳ್ಳಲಿದೆ. ಹೀಗಿದ್ದರೂ ರಾಜ್ಯದ ಜನರ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ನಮ್ಮ ಸರ್ಕಾರ ಜಿ.ಎಸ್.ಟಿ ವ್ಯವಸ್ಥೆಯಲ್ಲಿ ಸುಧಾರಣೆ ತರುವ ಈ ನಿರ್ಧಾರವನ್ನು ಸ್ವಾಗತಿಸುತ್ತದೆ. ಇದೇ ಸಂದರ್ಭದಲ್ಲಿ ಕೇಂದ್ರ ಸರ್ಕಾರ ಈಗಲೂ ಸಂಗ್ರಹಿಸುತ್ತಿರುವ ಜಿ.ಎಸ್.ಟಿ ಪರಿಹಾರ ಸುಂಕದಲ್ಲಿ ನ್ಯಾಯಬದ್ಧ ಪಾಲನ್ನು ರಾಜ್ಯಕ್ಕೆ ನೀಡಬೇಕೆಂದು ಆಗ್ರಹಿಸುತ್ತಿದ್ದೇನೆ.

ಜನತೆಯ ಖರೀದಿ ಸಾಮರ್ಥ್ಯದ ಹೆಚ್ಚಳ ಮತ್ತು ತೆರಿಗೆ ಪಾವತಿದಾರರ ಜಾಲದ ವಿಸ್ತರಣೆಯ ಮೂಲಕ ಆರ್ಥಿಕ ಅಭಿವೃದ್ಧಿಯನ್ನು ಸಾಧಿಸಿ ಸರ್ವರಿಗೂ ಸಮೃದ್ಧಿಯ ಪಾಲು ಸಿಗುವಂತೆ ಮಾಡುವುದಕ್ಕೆ ನಮ್ಮ ಸರ್ಕಾರ ಬದ್ಧವಾಗಿದೆ.

# ಕೇಂದ್ರದ ಹೊಸ ಜಿಎಸ್‌ಟಿ ಸುಧಾರಣೆಗೆ ಪ್ರತಿಪಕ್ಷಗಳ ತೀವ್ರ ವಿರೋಧ,

**ಹೊಸದಿಲ್ಲಿ:** ಕೇಂದ್ರ ಸರ್ಕಾರವು ಜಾರಿಗೆ ತಂದಿರುವ ಹೊಸ ಜಿಎಸ್‌ಟಿ ಸುಧಾರಣೆಯನ್ನು ಪ್ರತಿಪಕ್ಷಗಳು ತೀವ್ರವಾಗಿ ಟೀಕಿಸಿವೆ. ಇದು 'ತುಂಬಾ ತಡವಾಗಿ ಕೈಗೊಂಡ ಅಲ್ಪಕ್ರಮ' ಎಂದು ಬಣ್ಣಿಸಿದ್ದು, ಈ ಸುಧಾರಣೆಯಿಂದ ರಾಜ್ಯಗಳು ಆರ್ಥಿಕವಾಗಿ ಸಂಕಷ್ಟಕ್ಕೆ ಸಿಲುಕಲಿವೆ ಎಂದು ಕಾಂಗ್ರೆಸ್ ಮತ್ತು ಪ್ರಾದೇಶಿಕ ಪಕ್ಷಗಳು ಆರೋಪಿಸಿವೆ.

ಜಿಎಸ್‌ಟಿ ಕೌನ್ಸಿಲ್ ಇತ್ತೀಚೆಗೆ ಭಾರತದ ಪರೋಕ್ಷ ತೆರಿಗೆ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆಗಳನ್ನು ಮಾಡಿತ್ತು. ಈ ಹಿಂದೆ ಇದ್ದ ಅನೇಕ ತೆರಿಗೆ ಸ್ಲ್ಯಾಬ್‌ಗಳನ್ನು ಕೇವಲ ಎರಡಕ್ಕೆ ಇಳಿಸಿತ್ತು. ಅಗತ್ಯ ವಸ್ತುಗಳನ್ನು ಶೇ. 5ರ ತೆರಿಗೆ ಸ್ಲ್ಯಾಬ್‌ನಲ್ಲಿ ಇರಿಸಿ, ಉಳಿದ ವಸ್ತುಗಳ ಮೇಲೆ ಶೇ. 18ರ ತೆರಿಗೆಯನ್ನು ವಿಧಿಸಲಾಗಿತ್ತು. ಐಷಾರಾಮಿ ಮತ್ತು ಸಿನ್ ಗೂಡ್ಸ್ ಮೇಲೆ ಈ ಹಿಂದಿನಂತೆಯೇ ಶೇ. 40ರ ತೆರಿಗೆ ಮುಂದುವರಿಯಲಿದೆ.

ದಿನಸಿ, ಪಾದರಕ್ಷೆ, ಜವಳಿ, ರಸಗೊಬ್ಬರ ಮತ್ತು ನವೀಕರಿಸಬಹುದಾದ ಇಂಧನ ಉತ್ಪನ್ನಗಳು ಅಗ್ಗವಾಗಲಿದ್ದು, ಗ್ರಾಹಕರ ಕೈಯಲ್ಲಿ ಹೆಚ್ಚು ಹಣ ಉಳಿಯಲಿದೆ ಎಂದು ಕೇಂದ್ರ ಸರ್ಕಾರ ಹೇಳಿಕೊಂಡು ಬಂದಿದೆ. ಅಷ್ಟೇ ಅಲ್ಲದೆ ಬಿಜೆಪಿ ಇದನ್ನು ಐತಿಹಾಸಿಕ ಎಂದು ಕರೆದರೆ, ವಿರೋಧ ಪಕ್ಷಗಳು ಇದನ್ನು ಅರ್ಧಂಬರ್ಧ ಸುಧಾರಣೆ ಮತ್ತು ರಾಜಕೀಯ ಪ್ರೇರಿತ ಎಂದು ಜರಿದಿವೆ.



ಮೋದಿ ಸರ್ಕಾರದ ಹೊಸ ವ್ಯವಸ್ಥೆಯನ್ನು 'ಜಿಎಸ್‌ಟಿ 1.5' ಎಂದು ಕರೆದಿರುವ ಕಾಂಗ್ರೆಸ್, ನಿಜವಾದ 'ಜಿಎಸ್‌ಟಿ 2.0'ಗಾಗಿ ಕಾಯುವಿಕೆ ಮುಂದುವರಿದಿದೆ ಎಂದಿದೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, "ಕೇಂದ್ರ ಸರ್ಕಾರವು ಕಾರ್ಪೊರೇಟ್ ತೆರಿಗೆಯನ್ನು ಕಡಿಮೆ ಮಾಡಿ, ಅಗತ್ಯ ವಸ್ತುಗಳ ಮೇಲೆ ತೆರಿಗೆ ವಿಧಿಸುತ್ತಿದೆ," ಎಂದು ಆರೋಪಿಸಿದ್ದಾರೆ.

"ಒಟ್ಟು ಜಿಎಸ್‌ಟಿಯ ಮೂರನೇ ಎರಡರಷ್ಟು, ಅಂದರೆ ಶೇ. 64ರಷ್ಟು ಬಡ ಮತ್ತು ಮಧ್ಯಮ ವರ್ಗದವರ ಜೇಬಿನಿಂದ ಬರುತ್ತದೆ. ಆದರೆ, ಶತಕೋಟ್ಯಾಧಿಪತಿಗಳಿಂದ ಕೇವಲ ಶೇ. 3ರಷ್ಟು ಜಿಎಸ್‌ಟಿ ಸಂಗ್ರಹಿಸಲಾಗುತ್ತದೆ," ಎಂದು ಅವರು ಹೇಳಿದ್ದಾರೆ.

ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, "ರಾಜ್ಯಗಳ ಆದಾಯವನ್ನು ರಕ್ಷಿಸಲು ಜಿಎಸ್‌ಟಿ ಪರಿಹಾರವನ್ನು ಇನ್ನೂ ಐದು ವರ್ಷಗಳ ಕಾಲ ವಿಸ್ತರಿಸಬೇಕೆಂಬ ಪ್ರಮುಖ ಬೇಡಿಕೆಯನ್ನು ನಿರ್ಲಕ್ಷಿಸಲಾಗಿದೆ. ಇದು 'ಒಳ್ಳೆಯ ಮತ್ತು ಸರಳ ತೆರಿಗೆ' ಆಗಬೇಕಿತ್ತು, ಆದರೆ 'ಬೆಳವಣಿಗೆಯನ್ನು ನಿಗ್ರಹಿಸುವ ತೆರಿಗೆ'ಯಾಗಿ ಮಾರ್ಪಟ್ಟಿದೆ," ಎಂದು ಟೀಕಿಸಿದ್ದಾರೆ.

ಮಾಜಿ ಹಣಕಾಸು ಸಚಿವ ಪಿ. ಚಿದಂಬರಂ, "ತೆರಿಗೆ ದರ ಕಡಿತವನ್ನು ನಾನು ಸ್ವಾಗತಿಸುತ್ತೇನೆ, ಆದರೆ ಈ ನಿರ್ಧಾರವನ್ನು ಎಂಟು ವರ್ಷ ತಡವಾಗಿ ಮಾಡಲಾಗಿದೆ. ನಾವು ಯಾವಾಗಲೂ ಒಂದೇ ತೆರಿಗೆ ದರವನ್ನು ಪ್ರತಿಪಾದಿಸಿದ್ದೇವೆ. ಇಷ್ಟು ವರ್ಷಗಳ ಕಾಲ ಮಧ್ಯಮ ವರ್ಗ ಮತ್ತು ಬಡವರನ್ನು ಹಿಂಡಿ ಹಿಪ್ಪೆ ಮಾಡಲಾಗಿತ್ತು. ಈಗಲಾದರೂ ಅವರು ತಮ್ಮ ತಪ್ಪನ್ನು ಅರಿತುಕೊಂಡಿದ್ದಕ್ಕೆ ಧನ್ಯವಾದಗಳು," ಎಂದು ವ್ಯಂಗ್ಯವಾಡಿದ್ದಾರೆ.

ಇದು ಒಂದು ಕಡೆಯಾದರೆ ಪ್ರತಿಪಕ್ಷಗಳ ಆಡಳಿತ ಇರುವ ಹಲವು ರಾಜ್ಯಗಳೂ ಆತಂಕ ವ್ಯಕ್ತಪಡಿಸಿವೆ. ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, "ವಿಮೆಯ ಮೇಲೆ ಜಿಎಸ್‌ಟಿ ವಿನಾಯಿತಿ ನೀಡಬೇಕೆಂದು ನಾನು ಒತ್ತಾಯಿಸಿದ್ದೆ. ನಮ್ಮ ಪ್ರತಿಭಟನೆಯಿಂದಾಗಿಯೇ ಅವರು ಈ ಬದಲಾವಣೆ ಮಾಡಿದರು," ಎಂದು ಹೇಳಿದ್ದಾರೆ.

ಕೇರಳ ಹಣಕಾಸು ಸಚಿವ ಕೆ.ಎನ್. ಬಾಲಗೋಪಾಲ್, "ಹೊಸ ವ್ಯವಸ್ಥೆಯಿಂದ ರಾಜ್ಯಕ್ಕೆ ವಾರ್ಷಿಕ 8,000 ರಿಂದ 10,000 ಕೋಟಿ ರೂ. ನಷ್ಟವಾಗಬಹುದು. ಆದ–ರೆ, ಗ್ರಾಹಕರಿಗೆ ಅನುಕೂಲವಾಗುವ ದರ ಕಡಿತವನ್ನು ನಾವು ಬೆಂಬಲಿಸುತ್ತೇವೆ. ಕೇಂದ್ರ ಸರ್ಕಾರವು ರಾಜ್ಯಗಳಿಗೆ ಪರಿಹಾರವನ್ನು ಖಚಿತಪಡಿಸಬೇಕು," ಎಂದು ಒತ್ತಾಯಿಸಿದ್ದಾರೆ.

ತಮಿಳುನಾಡು ಹಣಕಾಸು ಸಚಿವ ತಂಗಂ ತೆನ್ನರಸು, "ಸ್ವಯಂಚಾಲಿತ ಮರುಪಾವತಿ ಮತ್ತು ಸಣ್ಣ ಉದ್ಯಮಗಳಿಗೆ ಸುಲಭ ನೋಂದಣಿಯಂತಹ ಸರಳೀಕರಣ ಕ್ರಮಗಳನ್ನು ಸ್ವಾಗತಿಸುತ್ತೇವೆ. ಆದರೆ, ರಾಜ್ಯಗಳ ಆದಾಯ ರಕ್ಷಣೆ ನಿರ್ಣಾಯಕವಾಗಿದೆ,"

# 34 ವಾಹನಗಳಲ್ಲಿ 400 ಕೆಜಿ ಆರ್‌ಡಿಎಕ್ಸ್ ಹೊತ್ತ ಮಾನವ ಬಾಂಬ್‌ರ್‌ಗಳು 1 ಕೋಟಿ ಜನರನ್ನು ಕೊಲ್ಲಲಿದ್ದಾರೆ; ಮುಂಬೈಗೆ ಬೆದರಿಕೆ ಕರೆ!

**ಮೂಮಬೈ:** ರಾಷ್ಟ್ರದ ವಾಣಿಜ್ಯ ರಾಜಧಾನಿ ಮತ್ತು ಮಹಾರಾಷ್ಟ್ರದ ನಾಡಿಮಿಡಿತ ಮುಂಬೈ ಅದ್ದೂರಿ ಗಣೇಶ ವಿಸರ್ಜನೆ ಸಜ್ಜಾಗಿದೆ. ಆದರೆ ಅದಕ್ಕೂ ಮೊದಲು ನಗರದಾದ್ಯಂತ ವಿಧ್ವಂಸಕ ಕೃತ್ಯಗಳನ್ನು ಎಸಗಲು ಒಟ್ಟು 34 ವಾಹನಗಳಲ್ಲಿ ಆರ್‌ಡಿಎಕ್ಸ್ ತುಂಬಿಸಿ ಇಡಲಾಗಿದೆ ಎಂಬ ಬೆದರಿಕೆ ಕರೆ ಮುಂಬೈ ನಗರವಾಸಿಗಳನ್ನು ಬೆಚ್ಚಿ ಬೀಳಿಸಿದೆ.

ಹೌದು, "ಇಡೀ ನಗರವನ್ನು ಬೆಚ್ಚಿಬೀಳಿಸುವ ಸ್ಫೋಟಕ್ಕಾಗಿ ಒಟ್ಟು 34 ವಾಹನಗಳಲ್ಲಿ 400 ಕೆಜಿ ಆರ್‌ಡಿಎಕ್ಸ್ ಹೊತ್ತ 34 ಮಾನವ ಬಾಂಬ್‌ಗಳನ್ನು ನಗರದ ಬೇರೆ ಬೇರೆ ಪ್ರದೇಶಗಳಲ್ಲಿ ನಿಯೋಜಿಸಲಾಗಿದೆ" ಎಂದು ಮುಂಬೈ ಸಂಚಾರ ಪೊಲೀಸ್ ಸಹಾಯವಾಣಿಗೆ ಬೆದರಿಕೆ ಕರೆಯೊಂದು ಬಂದಿದೆ.

ಅನಾಮಧೇಯ ವ್ಯಕ್ತಿಯೋರ್ವ ಸಂಚಾರ ಸಹಾಯವಾಣಿ ಕೇಂದ್ರಕ್ಕೆ ಬೆದರಿಕೆ ಕರೆ ಮಾಡಿದ್ದು, ಕೂಡಲೇ ಕಾರ್ಯಪ್ರವೃತ್ತರಾಗಿರು ಮುಂಬೈ ಪೊಲೀಸರು, ಇಡೀ ನಗರದಲ್ಲಿ ಕಟ್ಟೆಚ್ಚರವಹಿಸಿದ್ದಾರೆ. ನಗರಕ್ಕೆ ಬಹಳ ದೊಡ್ಡ ಮಟ್ಟದ ಬೆದರಿಕೆ ಹಾಕಲಾಗಿದ್ದು, ಪೊಲೀಸ್ ಇಲಾಖೆ ತೀವ್ರ ಕಟ್ಟೆಚ್ಚರವಹಿಸಿದೆ. ಇತ್ತೀಚಿಗೆ 2006ರ ಮುಂಬೈ ರೈಲು ಸ್ಫೋಟ ಪ್ರಕರಣದ ಆರೋಪಿಗಳು ಖುಲಾಸೆ ಆಗಿದ್ದನ್ನು ಇಲ್ಲಿ ಸ್ಮರಿಸಬಹುದು.



ಅನಂತ ಚತುರ್ದಶಿ ಹಬ್ಬದ ಮುನ್ನಾದಿನ ಲಷ್ಕರ್–ಎ–ಜಿಹಾದಿ ಎಂಬ ಸಂಘಟನೆಯಿಂದ ಈ ಬೆದರಿಕೆ ಬಂದಿದ್ದು, ರಾಜ್ಯಾದ್ಯಂತ ಭದ್ರತೆಯನ್ನು ಹೆಚ್ಚಿಸಲಾಗಿದೆ ಎಂದು ಮುಂಬೈ ಪೊಲೀಸರು ಸ್ಪಷ್ಟಪಡಿಸಿದ್ದಾರೆ. ಅಲ್ಲದೇ ಕರೆ ಮಾಡಿರುವ ವ್ಯಕ್ತಿಯ ಗುರುತು ಪತ್ತೆಹಚ್ಚುವ ಕಾರ್ಯಕ್ಕೆ ಮುಂವೈ ಪೊಲೀಸರು ಚಾಲನೆ ನೀಡಿದ್ದಾರೆ ಎಂದು ಮೂಲಗಳು ಖಚಿತಪಡಿಸಿವೆ.

"34 ಕಾರುಗಳಲ್ಲಿ ಮಾನವ ಬಾಂಬ್‌ಗಳನ್ನು ಹೊತ್ತೊಯ್ಯುವ ಮೂಲಕ, 400 ಕೆಜಿ ಆರ್‌ಡಿಎಕ್ಸ್ ಸ್ಫೋಟಿಸಿ ಒಂದು ಕೋಟಿ ಜನರನ್ನು ಕೊಲ್ಲಲಾಗುವುದು" ಎಂದು ಅನಾಮಧೇಯ ವ್ಯಕ್ತಿ ಮುಂಬೈ ಸಂಚಾರ ಸಹಾಯವಾಣಿ ಕೇಂದ್ರಕ್ಕೆ ಕರೆ ಮಾಡಿ ಬೆದರಿಕೆ ಹಾಕಿದ್ದಾನೆ. ಮುನ್ನೆಚ್ಚರಿಕಾ ಕ್ರಮವಾಗಿ ಪೊಲೀಸರು ಇಡೀ ನಗರದಲ್ಲಿ ಭದ್ರತಾ ಕ್ರಮಗಳನ್ನು ಹೆಚ್ಚಿಸಿದ್ದು, ವಾಹನಗಳ ತಪಾಸಣೆ ಕಾರ್ಯ ನಡೆಯುತ್ತಿದೆ. ಅಲ್ಲದೇ ಪ್ರಮುಖ ಸ್ಥಳಗಳಿಗೆ ಹೆಚ್ಚಿನ ಭದ್ರತೆ ಒದಗಿಸಲಾಗಿದೆ. 1993ರಲ್ಲಿ ಮುಂಬೈನಲ್ಲಿ ಸಂಭವಿಸಿದ ಸರಣಿ ಸ್ಫೋಟ ಪ್ರಕರಣ, ಅತ್ಯಂತ ಭೀಕರ ಇತಿಹಾಸವನ್ನು ಹೊಂದಿದೆ.

ಇದಕ್ಕೂ ಮೊದಲು ಮಹಾರಾಷ್ಟ್ರದ ಥಾಣೆ ಜಿಲ್ಲೆಯ ರೈಲು ನಿಲ್ದಾಣವನ್ನು ಸ್ಫೋಟಿಸುವ ಬಗ್ಗೆ ಹುಸಿ ಬಾಂಬ್ ಬೆದರಿ–ಕೆ ಕರೆ ಮಾಡಿದ್ದ ಆರೋಪದ ಮೇಲೆ, ಕಳೆದ ಸೋಮವಾರ (ಸೆ.1) 43 ವರ್ಷದ ವ್ಯಕ್ತಿಯನ್ನು ಮಹಾರಾಷ್ಟ್ರ ಪೊಲೀಸರು ಬಂಧಿಸಿದ್ದರು. "ರೂಪೇಶ್ ಮಧುಕರ್ ರಾನ್ಪಿಸೆ ಎಂದು ಗುರುತಿಸಲಾದ ಆರೋಪಿ ಭಾನುವಾರ ಸಂಜೆ 4 ಗಂಟೆ ಸುಮಾರಿಗೆ ಪೊಲೀಸ್ ಸಹಾಯವಾಣಿ ಸಂಖ್ಯೆಗೆ ಕರೆ ಮಾಡಿ ಕಲ್ವಾ ರೈಲು ನಿಲ್ದಾಣದಲ್ಲಿ ಬಾಂಬ್ ಇಟ್ಟಿರುವುದಾಗಿ ತಿಳಿಸಿದ್ದ" ಎಂದು ಸರ್ಕಾರಿ ರೈಲ್ವೆ ಪೊಲೀಸರು (ಜಿಆರ್‌ಪಿ) ತಿಳಿಸಿದ್ದಾರೆ.

ಕಳೆದ ಆಗಸ್ಟ್‌ನಲ್ಲಿ ದಕ್ಷಿಣ ಮುಂಬೈನ ಗಿರ್ಗಾಂವ್ ಪ್ರದೇಶದಲ್ಲಿರುವ ಇಸ್ಕಾನ್ ದೇವಾಲಯಕ್ಕೆ, ಬಾಂಬ್ ಬೆದರಿಕೆ ಇಮೇಲ್ ಬಂದಿತ್ತು. ಕೂಡಲೇ ದೇವಾಲಯದ ಆಡಳಿತ ಮಂಡಳಿ ಪೊಲೀಸರಿಗೆ ವಿಷಯ ತಿಳಿಸಿದ್ದು, ಬಾಂಬ್ ನಿಷ್ಕ್ರಿಯ ದಳದವರು ದೇವಾಲಯದ ಆವರಣದಲ್ಲಿ ಸಂಪೂರ್ಣ ಶೋಧ ನಡೆಸಿದ ನಂತರ, ಅದೊಂದು ಹುಸಿ ಕರೆ ಎಂಬುದು ಗೊತ್ತಾಯಿತು.

# ಧರ್ಮಸ್ಥಳ ಸೌಜನ್ಯಾ ನಿವಾಸಕ್ಕೆ ದಿಢೀರ್ ಭೇಟಿ– ಕೊಟ್ಟಿದ್ದೇಕೆ : ಬಿ.ವೈ. ವಿಜಯೇಂದ್ರ ಮಹತ್ವದ ಸ್ಪಷ್ಟನೆ

**ಬೆಂಗಳೂರು :** ಧರ್ಮಸ್ಥಳದಲ್ಲಿ ಬಿಜೆಪಿಯು ಬೃಹತ್'ಧರ್ಮಸ್ಥಳಚಲೋ'ಕಾರ್ಯಕ್ರಮವನ್ನು ಹಮ್ಮಿಕೊಂಡಿತ್ತು. ಇದರಲ್ಲಿ, ರಾಜ್ಯದ ಬಹುತೇಕ ಹಿರಿಯ ನಾಯಕರು ಇದರಲ್ಲಿ ಭಾಗವಹಿಸಿದ್ದರು. ಈ ಕಾರ್ಯಕ್ರಮ ಮುಗಿದ ಬೆನ್ನಲ್ಲೇ, ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಸೌಜನ್ಯಾ ನಿವಾಸಕ್ಕೆ ಭೇಟಿ ನೀಡಿದ್ದರು.

ವಿಜಯೇಂದ್ರ ದಿಢೀರ್ ಭೇಟಿ ನೀಡಿ–ದ್ದು, ಬಿಜೆಪಿ ರಾಜ್ಯ ಘಟಕದಲ್ಲೇ ಅಪಸ್ವರಕ್ಕೆ ಕಾರಣವಾಗಿತ್ತು. ಹಲವು ಹಿರಿಯ ನಾಯಕರು ಇದಕ್ಕೆ ಆಕ್ಷೇಪ ಎತ್ತಿದ್ದರು ಎನ್ನುವ ಸುದ್ದಿ ಹರಿದಾಡುತ್ತಿತ್ತು. ಸಚಿವ ಪ್ರಿಯಾಂಕ್ ಖರ್ಗೆ ಕೂಡಾ, ಬಿಜೆಪಿ ಯಾರ ಪರ ಎಂದು ಪ್ರಶ್ನಿಸಿದ್ದರು. ಇದಕ್ಕೆ ವಿಜಯೇಂದ್ರ ಈಗ ಸ್ಪಷ್ಟನೆಯನ್ನು ನೀಡಿದ್ದಾರೆ.


ಮಾನವೀಯ ದೃಷ್ಟಿಯಿಂದ ಸೌಜನ್ಯಾ ನಿವಾಸಕ್ಕೆ ಭೇಟಿ ನೀಡಿದ್ದೇನೆಯೇ ಹೊರತು ಇದರಲ್ಲಿ ಯಾವುದೇ ಬೇರೆ ಉದ್ದೇಶವಿಲ್ಲ. ಎಲ್ಲದಕ್ಕೂ ತಪ್ಪು ಹುಡುಕಿದರೆ ಏನು ಮಾಡಲು ಸಾಧ್ಯ, ಸರ್ಕಾರ ಹುಟ್ಟುಹಾಕಿದ ಅನುಮಾನವೇ ಇದಕ್ಕೆ ಕಾರಣ ಎಂದು ವಿಜಯೇಂದ್ರ ಹೇಳಿದ್ದಾರೆ.



"ಧರ್ಮಸ್ಥಳ ಪ್ರಕರಣದಲ್ಲಿ ಸಿದ್ದರಾಮಯ್ಯ ಸರ್ಕಾರ ಯಾರ ಪರವಾಗಿ ಕೆಲಸ ಮಾಡುತ್ತಿದೆ ಎನ್ನುವುದನ್ನು ಮೊದಲು ಸ್ಪಷ್ಟ ಪಡಿಸಲಿ. ಸರ್ಕಾರ ಹುಟ್ಟು ಹಾಕಿದ ಹಲವು ಅನುಮಾನಗಳಿಂದಾಗಿಯೇ ನಾವು ಧರ್ಮಸ್ಥಳ ಚಲೋ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕಾಯಿತು" ಎಂದು ವಿಜಯೇಂದ್ರ ಹೇಳಿದ್ದಾರೆ.

ಮಂಜುನಾಥನ ದರ್ಶನ ಪಡೆದು, ವೀರೇಂದ್ರ ಹೆಗ್ಗಡೆಯವರ ಆಶೀರ್ವಾದ ಪಡೆದ ನಂತರ, ಬಿಜೆಪಿ ನಾಯಕರು ಧರ್ಮಸ್ಥಳ ಚಲೋ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಅದರಲ್ಲಿ ಬಹುತೇಕ ಎಲ್ಲಾ ಹಿರಿಯ ನಾಯಕರು ಭಾಗವಹಿಸಿದ್ದರು. ಈ ಕಾರ್ಯಕ್ರಮ ಮುಗಿದ ನಂತರ, ಕೆಲವರು ಬೆಂಗಳೂರು, ಮಂಗಳೂರು ಮತ್ತು ಉಡುಪಿ ಕಡೆಗೆ ಹೊರಟಿದ್ದರು. ಆದರೆ, ವಿಜಯೇಂದ್ರ, ಕ್ಯಾ. ಬ್ರಿಜೇಶ್ ಚೌಟ ಮತ್ತು ಹರೀಶ್ ಪೂಂಜಾ, ಸೌಜನ್ಯಾ ನಿವಾಸಕ್ಕೆ ಭೇಟಿ ನೀಡಿದ್ದರು. ಇದು, ಬಿಜೆಪಿ ಆಂತರಿಕ ವಲಯದಲ್ಲಿ ಅಪಸ್ವರಕ್ಕೆ ಕಾರಣವಾಯಿತು ಎಂದು ಹೇಳಲಾಗುತ್ತಿದೆ.

## ಭಾರತ, ರಷ್ಯಾವನ್ನು ಚೀನಾಕ್ಕೆ ಕಳೆದುಕೊಂಡಿದ್ದೇವೆ: ಡೊನಾಲ್ಡ್ ಟ್ರಂಪ್ ರಿಂದ ತೀಕ್ಷ್ಣ ಹೇಳಿಕೆ



**ವಾಷಿಂಗ್ಟನ್:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇದೇ ಮೊದಲ ಬಾರಿಗೆ ಭಾರತ, ಚೀನಾ ಹಾಗೂ ರಷ್ಯಾ ಮೈತ್ರಿಯ ಬಗ್ಗೆ ಪ್ರತಿಕ್ರಿಯೆ ನೀಡಿದ್ದಾರೆ. 'ನಾವು ಭಾರತ ಮತ್ತು ರಷ್ಯಾವನ್ನು ಕತ್ತಲೆಯ ಕೂಪವಾಗಿರುವ ಚೀನಾದ ಬಳಿ ಕಳೆದುಕೊಂಡಿದ್ದೇವೆ' ಎಂದು ಅವರು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಾಕಿದ್ದಾರೆ.

ಇದರ ಜೊತೆಗೆ, ಈ ಮೂರೂ ದೇಶಗಳ ಭವಿಷ್ಯ 'ಸಮೃದ್ಧ;ವಾಗಿರಲಿ ಎಂದು ವ್ಯಂಗ್ಯವಾಗಿ ಹಾರೈಸಿದ್ದಾರೆ.

ಈ ವಾರದ ಆರಂಭದಲ್ಲಿ ಚೀನಾದ ಟಿಯಾಂಜಿನ್‌ನಲ್ಲಿ ನಡೆದ ಶಾಂಘೈ ಸಹಕಾರ ಸಂಘಟನೆ (ಎಸ್‌ಸಿಒ) ಶೃಂಗಸಭೆಯಲ್ಲಿ ಚೀನಾದ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರು ಪ್ರಧಾನಿ ನರೇಂದ್ರ ಮೋದಿ ಮತ್ತು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಆತಿಥ್ಯ ವಹಿಸಿದ್ದರು. ಈ ಸಭೆಯ ಬೆನ್ನಲ್ಲೇ ಟ್ರಂಪ್ ಈ ಹೇಳಿಕೆ ನೀಡಿ–ದ್ದಾರೆ.

"ನಾವು ಭಾರತ ಮತ್ತು ರಷ್ಯಾವನ್ನು ಕತ್ತಲೆಯ ಕೂಪವಾಗಿರುವ ಚೀನಾಕ್ಕೆ ಕಳೆದುಕೊಂಡಿದ್ದೇವೆ. ಅವರು ಒಟ್ಟಾಗಿ ದೀರ್ಘ ಮತ್ತು ಸಮೃದ್ಧ ಭವಿಷ್ಯವನ್ನು ಹೊಂದಲಿ!" ಎಂದು ಟ್ರಂಪ್ ತಮ್ಮ 'ಟ್ರುತ್ ಸೋಶಿಯಲ್' ಖಾತೆಯಲ್ಲಿ ಬರೆದುಕೊಂಡಿದ್ದಾರೆ.


ಹೊಸದಿಲ್ಲಿ, ಮಾಸ್ಕೋ ಮತ್ತು ಬೀಜಿಂಗ್ ನಡುವೆ ಹೆಚ್ಚುತ್ತಿರುವ ಆಪ್ತ ಸಂಬಂಧಗಳ ಬಗ್ಗೆ ಟ್ರಂಪ್ ನೀಡಿದ ಅತ್ಯಂತ ಸ್ಪಷ್ಟವಾದ ಸಾರ್ವಜನಿಕ ಹೇಳಿಕೆ ಇದಾಗಿದೆ. ಶೃಂಗಸಭೆಯಲ್ಲಿ ಈ ಮೂವರು ನಾಯಕರು ಇಂಧನದಿಂದ ಭದ್ರತೆಯವರೆಗಿನ ಕ್ಷೇತ್ರಗಳಲ್ಲಿ ಸಹಕಾರದ ಬಗ್ಗೆ ಚರ್ಚಿಸಿದ್ದು, ಉಕ್ರೇನ್ ಯುದ್ಧ ಮತ್ತು ಜಾಗತಿಕ ವ್ಯಾಪಾರ ನೀತಿಯಂತಹ ವಿಷಯಗಳಲ್ಲಿ ವಾಷಿಂಗ್ಟನ್ ಜೊತೆ ಭಿನ್ನಾಭಿಪ್ರಾಯಗಳನ್ನು ಹೊಂದಿದ್ದಾರೆ.

ದಶಕಗಳಿಂದ, ಚೀನಾದ ಹೆಚ್ಚುತ್ತಿರುವ ಜಾಗತಿಕ ಪ್ರಭಾವಕ್ಕೆ ಪ್ರತಿಯಾಗಿ ಭಾರತವನ್ನು ಸಂಭಾವ್ಯ ಪ್ರತಿಸ್ಪರ್ಧಿಯಾಗಿ ವಾಷಿಂಗ್ಟನ್ ನೋಡುತ್ತಾ ಬಂದಿತ್ತು. ರಿಪಬ್ಲಿಕನ್ ಮತ್ತು ಡೆಮಾಕ್ರಟಿಕ್ ಎರಡೂ ಸರ್ಕಾರಗಳು ನವದೆಹಲಿಯನ್ನು ಆಯಕಟ್ಟಿನ ಪಾಲುದಾರನನ್ನಾಗಿ ರೂಪಿಸಲು ಹೂಡಿಕೆ ಮಾಡಿದ್ದವು.

ಟ್ರಂಪ್ ಕೂಡ ತಮ್ಮ ಮೊದಲ ಅವಧಿಯಲ್ಲಿ, 2019 ರಲ್ಲಿ ಹೂಸ್ಟನ್‌ನಲ್ಲಿ ನಡೆದ 'ಹೌಡಿ ಮೋದಿ' ರ?ಯಾಲಿಯಲ್ಲಿ ಪ್ರಧಾನಿ ಮೋದಿಯವರೊಂದಿಗೆ ಕಾಣಿಸಿಕೊಂಡು ಮತ್ತು ಜಪಾನ್ ಹಾಗೂ ಆಸ್ಟ್ರೇಲಿಯಾದೊಂದಿಗೆ 'ಕ್ವಾಡ್' ಸಂಘಟನೆಯನ್ನು ಪುನಶ್ಚೇತನಗೊಳಿಸಿ ಭಾರತದ ಸ್ನೇಹ ಗಳಿಸಲು ಯತ್ನಿಸಿದ್ದರು.

ಆದಾಗ್ಯೂ, ಇತ್ತೀಚಿನ ಬೆಳವಣಿಗೆಗಳು ಸಂಬಂಧಗಳಲ್ಲಿ ಬಿರುಕು ಮೂಡಿಸಿದ್ದು, ಟ್ರಂಪ್ ಅವರ ಸುಂಕ ಕ್ರಮಗಳು ಮತ್ತು ರಷ್ಯಾದೊಂದಿಗಿನ ಭಾರತದ ಇಂಧನ ವ್ಯಾಪಾರದ ಬಗೆಗಿನ ಟೀಕೆಗಳು ವಾಷಿಂಗ್ಟನ್‌ನ ಹಿಡಿತವನ್ನು ದುರ್ಬಲಗೊಳಿಸಿವೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

## ಮುಂದಿನ 15 ವರ್ಷಗಳಲ್ಲಿ ಭಾರತೀಯ ಸೇನೆಗೆ ಸೇರ್ಪಡೆಯಾಗಲಿದೆ ಹಿಂದೆ–ಂದೂ ಕಂಡರಿಯದ ಶಸ್ತ್ರಾಸ್ತ್ರ ಭಂಡಾರ!



**ನವದೆಹಲಿ:** ಆಪರೇಷನ್ ಸಿಂಧೂರ್ ಕಾರ್ಯಾಚರಣೆಯು ಭಾರತದ ಸೇನಾ ಶಕ್ತಿಯನ್ನು ಪ್ರಪಂಚಕ್ಕೆ ಪ್ರದರ್ಶಿಸಿದ್ದು ಮಾತ್ರವಲ್ಲ, ನಮ್ಮ ಶಸ್ತ್ರಾಸ್ತ್ರ ಸಂಗ್ರಹಾಗಾರಕ್ಕೆ ಮತ್ಯಾವ ಶಸ್ತ್ರಾಸ್ತ್ರಗಳು ಬೇಕು ಎಂಬುದನ್ನು ಮತ್ತೆ ಮನದಟ್ಟು ಮಾಡಿಕೊಟ್ಟಿತು. ಇದರಿಂದ, ಹೊಸ ಪೀಳಿಗೆಯ ಶಸ್ತ್ರಾಸ್ತ್ರಗಳನ್ನು ತಯಾರಿಸಲು ಭಾರತ ಸರ್ಕಾರ ಮುಂದಾಗಿದೆ.

ಮುಂದಿನ 15 ವರ್ಷಗಳಲ್ಲಿ ಹಂತಹಂತವಾಗಿ ಹೊಸ ಬಗೆಯ ಶಸ್ತ್ರಾಸ್ತ್ರಗಳನ್ನು ಭಾರತಕ್ಕೆ ಸೇರಿಸಲು ಕೇಂದ್ರ ಸರ್ಕಾರ ಸನ್ನದ್ಧವಾಗಿದೆ. ಭಾರತಕ್ಕೆ ಸೇರ್ಪಡೆಯಾಗಲಿರುವ ಹೊಸ ಪೀಳಿಗೆಯ ಶಸ್ತ್ರಾಸ್ತ್ರಗಳ ಪಟ್ಟಿ ಹೀಗಿದೆ?

ಪರಮಾಣು ಶಕ್ತಿ ಆಧಾರಿದ ಸಮರನೌಕೆಗಳು, ಮುಂದಿನ ತಲೆಮಾರಿನ ಯುದ್ಧ ಟ್ಯಾಂಕರ್ ಗಳು, ಹೈಪರ್ ಸಾನಿಕ್ ಕ್ಷಿಪಣಿಗಳು, ರಹಸ್ಯ ಕಾರ್ಯಾಚರಣೆ ನಡೆಸಬಲ್ಲ ಬಾಂಬರ್ ಡ್ರೋನ್ ಗಳು, ಕೃತಕ ಬುದ್ಧಿಮತ್ತೆ ಇರುವ ಶಸ್ತ್ರಾಸ್ತ್ರಗಳು, ಗಗನ ಆಧಾರಿತ ಯುದ್ಧ ತಂತ್ರಜ್ಞಾನ – ಇವೆಲ್ಲವನ್ನು ಭಾರತದ ಸೇನಾ ಶಕ್ತಿಗೆ ಸೇರ್ಪಡೆಗೊಳಿಸಲು ಮೋದಿ ಸರ್ಕಾರ ನಿರ್ಧರಿಸಿದೆ.

ಸದ್ಯಕ್ಕೆ ನಮ್ಮಲ್ಲಿ ಟಿ–72 ಮಾದರಿಯ ಯುದ್ಧ ಟ್ಯಾಂಕರ್ ಇದೆ. ಬೆಟ್ಟ ಗುಡ್ಡಗಳನ್ನು ಹತ್ತಿ ಇಳಿಯಬಲ್ಲ 400 ಯುದ್ಧ ಟ್ಯಾಂಕರ್ ಗಳಿವೆ, 50 ಸಾವಿರ ಟ್ಯಾಂಕರ್ ಧ್ವಂಸಗೊಳಿಸುವ ಕ್ಷಿಪಣಿಗಳಿವೆ, 700 ರೋಬೋಟಿಕ್ ಕೌಂಟರ್ – ಸುಧಾರಿತ ಸ್ಫೋಟಕ ಸಾಮಗ್ರಿ ವ್ಯವಸ್ಥೆಯಿದೆ. ಈ ಎಲ್ಲವನ್ನೂ ಒಟ್ಟಿಗೇ ಏಕಕಾಲದಲ್ಲಿ ನಿಭಾಯಿಸಬಲ್ಲಂಥ ಹೊಸ ಮಾದರಿಯ ಟ್ಯಾಂಕರ್ ಗಳನ್ನು ನಿರ್ಮಿಸಲು ರಕ್ಷಣಾ ಇಲಾಖೆಯು ನಿರ್ಧರಿಸಿದೆ. ಅದರಂತೆ 1,800 ಟ್ಯಾಂಕರ್ ಗಳು ಕಾರ್ಯನಿರ್ವಹಿಸಲಿವೆ.

ನೌಕಾಪಡೆಗೆ ಹೊಸತಾಗಿ, ದೊಡ್ಡ ಹೆಲಿಕಾಪ್ಟರ್ ಗಳನ್ನೇ ಹೊತ್ತೊಯ್ಯಬಲ್ಲಂಥ ದೈತ್ಯ ಹೆಲಿಕಾಪ್ಟರ್ ಸಿಗಲಿದೆ. ಮುಂದಿನ ಪೀಳಿಗೆಯ ಫ್ರಿಗೇಟ್ಸ್, 7 ಅತ್ಯಾಧುನಿಕ ಕಾರ್ವೆಟ್ಸ್, 4 ಲ್ಯಾಂಡಿಂಗ್ ಡಾಕ್ ಗಳು ಸಿಗಲಿವೆ. ಇದರ ಜೊತೆಗೆ, ಪರಮಾಣು ಚಾಲಿತ ಸಮರ ನೌಕೆಗಳ ಬಗ್ಗೆಯೂ ಚರ್ಚೆಗಳು ನಡೆಯುತ್ತಿದ್ದು ಅವುಗಳಿಗೆ ಶೀಘ್ರವೇ ಸಂಪುಟದ ಒಪ್ಪಿಗೆ ಸಿಗುವ ನಿರೀಕ್ಷೆಯಿದೆ.

## ಚಿನ್ನಯ್ಯ ಪ್ರಕರಣದಲ್ಲಿ ಕೇರಳದ ಯೂಟ್ಯೂಬರ್ ಮನಾಫ್ ಲಿಂಕ್! ಬೆಳ್ತಂಗಡಿ ಎಸ್‌ಐಟಿಯಲ್ಲಿ 'ಬುರುಡೆ ಗ್ಯಾಂಗ್' ವಿಚಾರಣೆ ತೀವ್ರ



**ಬೆಳ್ತಂಗಡಿ:** ಧರ್ಮಸ್ಥಳದ ಬಗ್ಗೆ ಅಪಪ್ರಚಾರ ಮಾಡುತ್ತಿರುವ ಆರೋಪದಲ್ಲಿ ಕೇರಳ ಮೂಲದ ಯೂಟ್ಯೂಬರ್ ಮನಾಫ್ ಗೂ ವಿಚಾರಣೆಗೆ ಹಾಜರಾಗುವಂತೆ ಅಧಿಕಾರಿ ಜಿತೇಂದ್ರ ದಯಾಮ ನೋಟಿಸ್ ಕಳಿಸಿದ್ದಾರೆ. ಹಬ್ಬದ ಹಿನ್ನೆಲೆ ಆತ ಇಂದು ವಿಚಾರಣೆಗೆ ಹಾಜರಾಗದೆ ಸೋಮವಾರ ಬರುವ ಸಾಧ್ಯತೆ ಇದೆ.

ಚಿನ್ನಯ್ಯ ಕೋರ್ಟ್ ಗೆ ಬುರುಡೆ ನೀಡಿದ ದಿನವೇ ಮನಾಫ್ ಕೂಡಾ ಯೂಟ್ಯೂಬ್ ವಿಡಿಯೋ ಕೂಡಾ ಅಪ್ಲೋಡ್ ಮಾಡಲಾಗಿದೆ. ಮರದಲ್ಲಿ ಸೀರೆ ನೇತುಹಾಕಲಾಗಿದೆ. ಬುರುಡೆ ಕೂಡಾ ಇದೆ ಎಂದು ವಿಡಿಯೋ ಮಾಡಿ ಜುಲೈ 11 ರಂದು ಅಪ್ಲೋಡ್ ಮಾಡಿದ್ದ. ಜಯಂತ್ ಮೂಲಕ ಈತನ ಸಂಪರ್ಕ ಮಾಡಲಾಗಿದೆ ಎನ್ನಲಾಗಿದೆ. ಆತ ಮಹೇಶ್ ಶೆಟ್ಟಿ ತಿಮರೋಡಿ ಜೊತೆಗೆ ಇರುವ ಫೋಟೋ ಕೂಡಾ ಸಿಕ್ಕಿದೆ.

ಉತ್ತರ ಕನ್ನಡದ ಶಿರೂರು ಗುಡ್ಡ ಕುಸಿತದಲ್ಲಿ ಕೊಚ್ಚಿಹೋದ ಲಾರಿಯ ಮಾಲೀಕ ಈ ಮನಾಫ್. ಯೂಟ್ಯೂಬ್ ಕೂಡಾ ಅದೇ ಸಮಯದಲ್ಲಿ ಪ್ರಚಲಿತವಾಗತೊಡಗಿತ್ತು. ಈಗ ಚಿನ್ನಯ್ಯನ ಪ್ರಕರಣದಲ್ಲಿಯೇ ನೋಟಿಸ್ ನೀಡಿ ವಿಚಾರಣೆಗೆ ಕರೆಯಲಾಗಿದೆ. ಚಿನ್ನಯ್ಯ ನ್ಯಾಯಾಧೀಶರಿಗೆ ಕೊಟ್ಟ ಬುರುಡೆ ವಿಡಿಯೋ ಹಾಗೂ ಯೂಟ್ಯೂಬರ್ ಮನಾಫ್ ಹಾಕಿದ ವಿಡಿಯೋ ಸಾಮ್ಯತೆ ಇದೆ. ಬುರುಡೆಯನ್ನು ಕತ್ತಿಯಲ್ಲಿ ತೆಗೆಯುತ್ತಿರುವುದು, ಮರದಲ್ಲಿ ನೇತುಹಾಕಿದ ರೂಪದಲ್ಲಿರುವ ಸೀರೆ, ಹಾಗೂ ಧರ್ಮಸ್ಥಳ ಪರಿಸರದಲ್ಲಿ ಓಡಾಡಿ ಮಾಡಿದ ವಿಡಿಯೋ ಮನಾಫ್ ಅಪ್ಲೋಡ್ ಮಾಡಿದ್ದ, ಇದೇ ವಿಡಿಯೋ ಈಗ ಸಂಕಷ್ಟ ತಂದೊಡ್ಡಿದೆ.

ಶನಿವಾರ ಎಸ್ ಐಟಿ ಕಸ್ಟಡಿ ಅಂತ್ಯ ಆಗಲಿರುವ ಹಿನ್ನೆಲೆ ಮಾಸ್ಕ್ ಧಾರಿಯಾಗಿರುವ ಆರೋಪಿ ಚಿನ್ನಯ್ಯನಿಗೆ ಇಂದು ಮೆಡಿಕಲ್ ಟೆಸ್ಟ್ ನಡೆಸಲು ಬೆಳ್ತಂಗಡಿ ತಾಲೂಕು ಆಸ್ಪತ್ರೆಗೆ ಕರೆದೊಯ್ಯಲಾಯಿತು.

## ಸೆ. 08, 09 ರಂದು ಆಧುನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

**ದಾವಣಗೆರೆ** :ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಸೆಪ್ಟೆಂಬರ್ 08 ಮತ್ತು 09 ರಂದು ಆಧುನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿಯನ್ನು ಆಯೋಜಿಸಲಾಗಿದೆ.

ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ತರಬೇತಿಯು ದಾವಣಗೆರೆ ಜಿಲ್ಲೆಯ ರೈತರಿಗೆ ಮಾತ್ರ ಸೀಮಿತವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192–233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

## ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಶಾಲಾ, ಕಾಲೇಜುಗಳಲ್ಲಿ ಚಿತ್ರಕಲೆ, ಚರ್ಚಾಸ್ಪರ್ಧೆ

**ದಾವಣಗೆರೆ** : ಸೆ.15 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಯಶಸ್ಸಿಗೆ ಇಲಾಖೆಗಳ ಜೊತೆಗೆ ಜನರು ಸಹ ಕೈ ಜೋಡಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ ತಿಳಿಸಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಜಿಲ್ಲಾ ಮಟ್ಟದಲ್ಲಿ ಆಯೋಜಿಸಲು ನಡೆದ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪರಿಶಿಷ್ಟ ಜಾತಿಯ ಅಲೆಮಾರಿ ಮತ್ತು ಅರೆಅಲೆಮಾರಿ ಸಮುದಾಯ ಹಾಗೂ ಇನ್ನಿತರ ಕೆಳ ಸಮುದಾಯದ ಜನರಿಗೆ ಮತದಾನ ಹಕ್ಕು ಚಲಾಯಿಸುವ ಬಗ್ಗೆ ಜಾಗೃತಿ ಮೂಡಿಸಬೇಕು. ಪ್ರಜಾಪ್ರಭುತ್ವ ಅಂತಾರಾಷ್ಟ್ರೀಯ ದಿನಾಚಾರಣೆಯನ್ನು ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಉನ್ನತ ಶಿಕ್ಷಣ ಇಲಾಖೆ, ಕಾರ್ಮಿಕ ಕಲ್ಯಾಣ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಗಳ ಜೊತೆಗೆ ಇನ್ನಿತರೆ ಇಲಾಖೆಗಳ ಸಹಭಾಗಿತ್ವದಲ್ಲಿ ಆಯೋಜಿಸಲಾಗುತ್ತಿದೆ. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮದ ಅಂಗವಾಗಿ ರಾಜ್ಯ, ಜಿಲ್ಲಾ ಮಟ್ಟದಲ್ಲಿ ಎಲ್ಲಾ ಶಾಲಾ, ಕಾಲೇಜುಗಳ ವಿದ್ಯಾರ್ಥಿಗಳಿಗೆ ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಮತದಾನದ ಹಕ್ಕಿನ ಮಹತ್ವದ ಬಗ್ಗೆ ಅರಿವು ಮೂಡಿಸುವ ಬಗ್ಗೆ ಚಿತ್ರಕಲಾ ಸ್ಪರ್ಧೆ, ಚರ್ಚಾ ಸ್ಪರ್ಧೆ ಹಾಗೂ ಛಾಯಾಚಿತ್ರ ಸ್ಪರ್ಧೆಯನ್ನು ಆಯೋಜಿಸಲಾಗಿದ್ದು ಪ್ರತಿ ಸ್ಪರ್ಧೆಯಿಂದ 3 ಅಭ್ಯರ್ಥಿಗಳನ್ನು ರಾಜ್ಯ ಮಟ್ಟಕ್ಕೆ ಆಯ್ಕೆ ಮಾಡಲಾಗುವುದು.

ಚಿತ್ರಕಲಾ ಸ್ಪರ್ಧೆಯನ್ನು ಪ್ರತಿ ತಾಲ್ಲೂಕಿನಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಸೆಪ್ಟೆಂಬರ್ 9 ರಂದು ಹಾಗೂ ಚರ್ಚಾಸ್ಪರ್ಧೆಯನ್ನು ಜಿಲ್ಲಾ ಮಟ್ಟದಲ್ಲಿ ಡಿಗ್ರಿ ವಿದ್ಯಾರ್ಥಿಗಳಿಗೆ ಆಯೋಜಿಸಲಾಗಿದೆ. ತಾಲ್ಲೂಕು ಮಟ್ಟದಲ್ಲಿ ಆಯ್ಕೆಯಾದ ಅಭ್ಯರ್ಥಿಗಳನ್ನು ಜಿಲ್ಲಾ ಮಟ್ಟಕ್ಕೆ ಆಯ್ಕೆ ಮಾಡಲಾಗುವುದು.

ಛಾಯಚಿತ್ರ ಸ್ಪರ್ಧೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಛಾಯಾಚಿತ್ರ ಗ್ರಾಹಕರಿಗೆ ಅವಕಾಶ ಕಲ್ಪಿಸಲಾಗಿದೆ ಎಂದರು.

ಜಿ.ಪಂ ಯೋಜನಾ ನಿರ್ದೇಶಿಕಿ ರೇಷ್ಮಾ ಕೌಸರ್, ನಗರಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಮಹಾಂತೇಶ್, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ನಾಗರಾಜ. ಕೆ ಉಪಸ್ಥಿತರಿದ್ದರು.

## ಮದ್ಯ ಮಾರಾಟದ ಆದೇಶ ಪರಿಷ್ಕರಣೆ

**ದಾವಣಗೆರೆ** : ಸೆ.6 ಹಾಗೂ ಸೆ.14 ರಂದು ಹರಿಹರ ನಗರಸಭೆ ವ್ಯಾಪ್ತಿಯಲ್ಲಿ ಮುಂಜಾಗ್ರತಾ ಕ್ರಮವಾಗಿ ಮದ್ಯ ಮಾರಾಟ ಮತ್ತು ಸರಬರಾಜನ್ನು ನಿಷೇಧಗೊಳಿಸಿ ಆದೇಶಿಸಿರುವ ಆದೇಶದಲ್ಲಿ ಹರಿಹರ ಕೆ.ಎಸ್.ಬಿ.ಸಿ.ಎಲ್ ಡಿಪೋ ಹೊರತುಪಡಿಸಿ ಉಳಿದಂತೆ ಎಲ್ಲಾ ಅಂಗಡಿಗಳನ್ನು ಮುಚ್ಚಲು ಆದೇಶಿಸಲಾಗಿದೆ. ಉಳಿದಂತೆ ಈ ಆದೇಶದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದ್ದಾರೆ.

## ಸೆ.10 ಉದ್ಯಮಿಗಳಿಗೆ ಜಿಲ್ಲಾ ಮಟ್ಟದ ಅರಿವು ಕಾರ್ಯಕ್ರಮ

**ಚಿಕ್ಕಮಗಳೂರು:** ಉದ್ಯಮಿಗಳಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಸೆಪ್ಟೆಂಬರ್ 10 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಪಂಚಾಯಿತಿಯ ಅಬ್ದುಲ್ ನಜೀರ್‌ಸಾಬ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಕಾರ್ಯಾಗಾರವನ್ನು ಆಯೋಜಿಸಲಾಗಿದೆ.

ಮಾನ್ಯ ಕೃಷಿ ಸಚಿವರಾದ ಶ್ರೀ ಎನ್.ಚೆಲುವರಾಯಸ್ವಾಮಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. 2025–26ನೇ ಸಾಲಿನ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಮಹತ್ವಾಕಾಂಕ್ಷಿ ಕಾರ್ಯಕ್ರಮವಾಗಿದ್ದು, ರಾಜ್ಯದಲ್ಲಿ ಕಿರು ಆಹಾರ ಸಂಸ್ಕರಣಾ ಉದ್ಯಮಗಳ ಅಭಿವೃದ್ಧಿಗೆ ಅಪಾರವಾದ ಅವಕಾಶ ಒದಗಿಸಲಾಗಿದೆ. ಈ ಯೋಜನೆಯಡಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಈಗಾಗಲೇ 120ಕ್ಕೂ ಹೆಚ್ಚು ಉದ್ಯಮಿಗಳಿಗೆ ಸಾಲ ಮಂಜೂರಾತಿ ದೊರಕಿದೆ.

ಮಾನ್ಯ ಮುಖ್ಯಮಂತ್ರಿಗಳು 2025–26ನೇ ಸಾಲಿನ ಆಯವ್ಯಯ ಭಾಷಣದಲ್ಲಿ ರಾಜ್ಯದಲ್ಲಿ 5 ಸಾವಿರ ಕಿರು ಆಹಾರ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸುವ ಗುರಿಯನ್ನು ಘೋಷಿಸಿ 206 ಕೋಟಿ ರೂ. ಅನುದಾನವನ್ನು ಒದಗಿಸಿರುವುದು ಮಹತ್ವದ್ದಾಗಿದೆ. ಪ್ರಸ್ತುತ ಹಣಕಾಸು ವರ್ಷವು ಯೋಜನೆ ಅನುಷ್ಠಾನದ ಕೊನೆಯ ಭಾಗವಾಗಿರುವುದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಆಸಕ್ತ ರೈತರು ಮತ್ತು ಉದ್ಯಮಿಗಳು ಈ ಯೋಜನೆಯ ಪ್ರಯೋಜನ ಪಡೆದು ಕೃಷಿ ಸಂಸ್ಕರಣಾ ಕ್ಷೇತ್ರದಲ್ಲಿ ಉದ್ದಿಮೆಗಳನ್ನು ಪ್ರಾರಂಭಿಸಲು ಮುಂದಾಗುವಂತೆ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರವಾಸಿ ತಾಣದ ಮಳಿಗೆಗಳ ಹರಾಜು

**ಚಿಕ್ಕಮಗಳೂರು:** ಶೃಂಗೇರಿ ತಾಲ್ಲೂಕು ಸಿರಿಮನೆ ಫಾಲ್ಸ್ ಪ್ರವಾಸಿ ತಾಣದಲ್ಲಿ ನಿರ್ಮಿಸಿರುವ ಆರು ಮಳಿಗೆಗಳನ್ನು ಸೆಪ್ಟೆಂಬರ್ 16 ರಂದು ಬೆಳಿಗ್ಗೆ 11 ಗಂಟೆಗೆ ಬಹಿರಂಗ ಹರಾಜು ಮಾಡಲು ಕ್ರಮ ಕೈಗೊಳ್ಳಲಾಗಿದೆ. ಕೊಪ್ಪ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಈ ಬಗ್ಗೆ ಸೂಚನೆ ನೀಡಿರುವುದಾಗಿ ಬಾಳೆಹೊನ್ನೂರು ಉಪವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# MBA ಪದವೀಧರರಿಗೆ ಕೌಶಲ್ಯಾಭಿವೃದ್ಧಿ ಅಗತ್ಯ : ಡಾ. ರಮೇಶ್ ಚಂದ್ರಹಾಸ



**ದಾವಣಗೆರೆ** : ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಾಣಿಜ್ಯ ಭವನದಲ್ಲಿ ನಿರ್ವಹಣಾ ಶಾಸ್ತ್ರ ವಿಭಾಗದ ವತಿಯಿಂದ 'ಅಸ್ತಿತ್ವ 2ಏ25' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಹಾಜರಾದ ಡಾ. ರಮೇಶ್ ಚಂದ್ರಹಾಸ್, ಸಹಾಯಕ ಪ್ರಾಧ್ಯಾಪಕರು, ಖಔಖ, ದಾವಣಗೆರೆ ವಿಶ್ವವಿದ್ಯಾಲಯ, ಮಾತನಾಡಿ "ಭವಿಷ್ಯದಲ್ಲಿ ಒಃಂ ಪದವೀಧರರಿಗೆ ಅಪಾರ ಅವಕಾಶಗಳಿವೆ. ಆದರೆ ಅದಕ್ಕಾಗಿ ಬೇಕಾದ ತಜ್ಞತೆ, ಉದ್ಯಮ ಕ್ಷೇತ್ರಕ್ಕೆ ಬೇಕಾದ ಕೌಶಲ್ಯಗಳು ಹಾಗೂ ನಿರಂತರ ಕಲಿಕೆಯ ಮನೋಭಾವವನ್ನು ಹೊಂದಿರಬೇಕು" ಎಂದು ತಿಳಿಸಿದರು. ಉದ್ಯಮ ಮತ್ತು ನಿಗಮ ಕ್ಷೇತ್ರದಲ್ಲಿ ಅಗತ್ಯವಿರುವ ಕೌಶಲ್ಯಗಳನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು ಎಂದು ಅವರು ಪ್ರೇರಣೆ ನೀಡಿದರು.

ನಿರ್ವಹಣಾ ವಿಭಾಗದ ಮುಖ್ಯಸ್ಥರಾದ ಡಾ. ವೆಂಕಟೇಶ್ ಬಾಬು ಎಸ್ ಪ್ರಾಸ್ತಾವಿಕ ಭಾಷಣ ಮಾಡಿ, "ಇಂದಿನ ವಿದ್ಯಾರ್ಥಿಗಳು ಕೇವಲ ಪಠ್ಯ ಜ್ಞಾನಕ್ಕಿಂತ ಹೆಚ್ಚಿನ ಪ್ರತಿಭೆ ಹಾಗೂ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಬೇಕು. ನಿರ್ವಹಣಾ ಕ್ಷೇತ್ರವು ನಿರೀಕ್ಷಿಸುವ ಸಾಮರ್ಥ್ಯಗಳನ್ನು ತಾವು ಹೊಂದಿದಾಗ ಮಾತ್ರ ಯಶಸ್ಸು ಸಿಗುತ್ತದೆ" ಎಂದು ಹೇಳಿದರು.

IQAC ಸಂಯೋಜಕರಾದ ಡಾ. ಗುರುರಾಜ್ ಜೆ.ಪಿ ಮಾತನಾಡಿ, "ಅಧ್ಯಯನದ ಜೊತೆಗೆ ಪೂರಕ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳ ವ್ಯಕ್ತಿತ್ವದ ಸಮಗ್ರ ಬೆಳವಣಿಗೆ ಸಾಧ್ಯವಾಗುತ್ತದೆ" ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷರಾಗಿ ಮಾತನಾಡಿದ ಪ್ರಾಚಾರ್ಯ ಪ್ರೊ. ಬಸವರಾಜ್ ಸಿ ತಹಶೀಲ್ದಾರ, "ಕಾಲೇಜಿನಲ್ಲಿರುವ ಸಂಪನ್ಮೂಲಗಳನ್ನು ಸಮರ್ಪಕವಾಗಿ ಬಳಸಿಕೊಂಡು ಜ್ಞಾನ ಹಾಗೂ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿಕೊಳ್ಳಿ. ಅದು ನಿಮ್ಮ ಭವಿಷ್ಯ ನಿರ್ಮಾಣಕ್ಕೆ ಮುಖ್ಯ" ಎಂದು ವಿದ್ಯಾರ್ಥಿಗಳನ್ನು ಪ್ರೇರೇಪಿಸಿದರು.

ಕಾರ್ಯಕ್ರಮದಲ್ಲಿ ನಿರ್ವಹಣ ಶಾಸ್ತ್ರದ ಅಧ್ಯಾಪಕರಾದ ಪ್ರೊ ವಿನಾಯಕ್ ಪ್ರಭಾಕರ್ ಪ್ರೊ ನಾಗರಾಜ್ ಹೊಂಡೇಕರ್ ಪ್ರತಿಭಾ ಪ್ರೊ ರಾಧಾ ರವರನ್ನು ಶಿಕ್ಷಕರ ದಿನಾಚರಣೆ ಪ್ರಯುಕ್ತ ಸನ್ಮಾನಿಸಲಾಯಿತು ಪ್ರೊ ನಾಗೇಂದ್ರ ನಾಯಕ್ ಪ್ರೊ ರೆಹ್ಮಾನ್ ಸಾಬ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು

ಕಾರ್ಯಕ್ರಮವನ್ನು ವಿದ್ಯಾರ್ಥಿನಿ ಅನುಷಾ ಬಿ.ಜೆ ನಿರ್ವಹಿಸಿದರು. ಹಾಲೇಶ್ ಬಿ ಪ್ರಾರ್ಥನೆ ಸಲ್ಲಿಸಿದರು. ನಾಗರಾಜ್ ಜಿ ಸ್ವಾಗತಿಸಿ, ಗೌರಿ ಜೆ.ಸಿ ಧನ್ಯವಾದ ಅರ್ಪಿಸಿದರು.

## ಪರಿಶಿಷ್ಟ ಜಾತಿಯ ವಸತಿ ಶಾಲೆ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ** : ಪ್ರಸಕ್ತ ಸಾಲಿಗೆ ನ್ಯಾಮತಿ ತಾಲ್ಲೂಕು ಸೂರಗೊಂಡನಕೊಪ್ಪ ಸಂತಸೇವಾಲಾಲ್ ಪ್ರಾಥಮಿಕ ಪರಿಶಿಷ್ಟ ಜಾತಿಯ ವಸತಿ ಶಾಲೆಯ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ನಮೂನೆಯನ್ನು ಸಹಾಯಕ ನಿರ್ದೇಶಕರ ಕಚೇರಿ ಸಮಾಜ ಕಲ್ಯಾಣ ಇಲಾಖೆ ಹೊನ್ನಾಳಿ ಇಲ್ಲಿ ಪಡೆದು ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಸೆಪ್ಟೆಂಬರ್ 15 ರೊಳಗಾಗಿ ಸಲ್ಲಿಸಬೇಕು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಸೀಟ್‌ಗಳ ಲಭ್ಯತೆಯನುಸಾರ ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಲಾಗುವುದು.ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಹೊನ್ನಾಳಿ ಇವರನ್ನು ಸಂಪರ್ಕಿಸಲು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ನಾಗರಾಜ ತಿಳಿಸಿದ್ದಾರೆ.

## ಉದ್ದಿಮೆ ವ್ಯಾಪಾರಸ್ಥರಿಗೆ ಪರವಾನಗಿ ಕಡ್ಡಾಯ

**ದಾವಣಗೆರೆ** : ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿನ ಎಲ್ಲಾ ಉದ್ದಿಮೆದಾರರು, ವ್ಯಾಪಾರಸ್ಥರು ಪಾಲಿಕೆ ವ್ಯಾಪ್ತಿಯಲ್ಲಿ ತಮ್ಮ ಉದ್ದಿಮೆ, ವ್ಯಾಪಾರ ನಡೆಸಲು ಪಾಲಿಕೆಯಿಂದ ಪರವಾನಗಿ ಪಡೆಯುವುದು ಕಡ್ಡಾಯವಾಗಿರುತದೆ ಎಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.. ಉದ್ದಿಮೆಗಳು, ಅಂಗಡಿಗಳು ಪರವಾನಗಿ ಪಡೆಯದೇ ವ್ಯಾಪಾರ ವಹಿವಾಟು ನಡೆಸುತ್ತಿರುವುದು ಕಂಡು ಬಂದಿರುತ್ತದೆ. ಈ ಪ್ರಕಟಣೆಯನ್ನು ತಿಳುವಳಿಕೆ ಪತ್ರ ಎಂದು ತಿಳಿದು ಪಾಲಿಕೆ ವ್ಯಾಪ್ತಿಯಲ್ಲಿನ ಎಲ್ಲಾ ಉದ್ದಿಮೆದಾರರು, ವ್ಯಾಪಾರಸ್ಥರು ಪಾಲಿಕೆಯಿಂದ ಪರವಾನಗಿ ಪಡೆಯುವುದು ಮತ್ತು ಪರವಾನಗಿ ಪಡೆದಿರುವವರು ನವೀಕರಿಸಿಕೊಳ್ಳಬಹುದು. ಇಲ್ಲವಾದಲ್ಲಿ ದಂಡ ವಿಧಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೊಸೈಟಿಗಳ ಠರಾವು ನಿರ್ಧರಿಸಲಿದೆ ಭವಿಷ್ಯ ।ಅಜ್ಞಾತ ಸ್ಥಳಕ್ಕೆ ನಿರ್ದೇಶಕರು

## ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ಹಣದ ಹೊಳೆ!

**ಬೆಳಗಾವಿ:** ರಾಜ್ಯದ ಸಹಕಾರ ವಲಯದಲ್ಲಿ ಏಳು ಸಾವಿರ ಕೋಟಿ ರೂ. ಆರ್ಥಿಕ ವ್ಯವಹಾರ ಹೊಂದಿರುವ ಬಲಿಷ್ಠ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ (ಬಿಡಿಸಿಸಿ) ಆಡಳಿತ ಮಂಡಳಿ ನಿರ್ದೇಶಕರ ಚುನಾವಣೆ ಸಮೀಪಿಸುತ್ತಿದ್ದಂತೆ ಹಣದ ಹೊಳೆ ಹರಿಯುತ್ತಿದೆ!.

ರಾಜ್ಯ ರಾಜಕಾರಣದಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವ ಜಿಲ್ಲೆಯ ಪ್ರತಿಷ್ಠಿತ ರಾಜಕೀಯ ಕುಟುಂಬಗಳು ಇದೀಗ ಡಿ.ಸಿ.ಸಿಬ್ಯಾಂಕ್ ಅಧಿಕಾರಕ್ಕಾಗಿ ಪ್ರತಿಷ್ಠೆ ಪಣಕ್ಕಿಟ್ಟಿವೆ. ಜಿಲ್ಲೆಯ 2,693 ಸೊಸೈಟಿ ಆಡಳಿತ ಮಂಡಳಿಯ ಸಾವಿರಕ್ಕೂ ಅಧಿಕ ನಿರ್ದೇಶಕರನ್ನು ಹಿಡಿದಿಟ್ಟುಕೊಳ್ಳಲು ಬೆಂಗಳೂರು, ರಾಮನಗರ ಹಾಗೂ ಮಹಾರಾಷ್ಟ್ರದ ಕೊಲ್ಲಾಪುರದ ಅಜ್ಞಾತ ಸ್ಥಳಗಳಿಗೆ ಕರೆದೊಯ್ದಿದ್ದಾರೆ.

ಅಭ್ಯರ್ಥಿಗಳ ಆಯ್ಕೆ, ಸೊಸೈಟಿ ನಿರ್ದೇಶಕರ ಪ್ರವಾಸ ಹಾಗೂ ಇತರ ಉದ್ದೇಶಗಳಿಗಾಗಿ ಅಂದಾಜು 100 ಕೋಟಿ ರೂ. ವ್ಯವಹಾರ ನಡೆಯುವ ಸಾಧ್ಯತೆ ಇದೆ. ಸೊಸೈಟಿಗಳಿಗೆ ಲಕ್ಷಾಂತರ ರೂ. ಹಣ ಹರಿದುಬರುತ್ತಿದ್ದು, ಇದರ ಮೇಲೆ ಚುನಾವಣಾಧಿಕಾರಿ ನಿಗಾವಹಿಸಬೇಕೆಂಬ ಮಾತುಗಳೂ ಕೇಳಿಬರುತ್ತಿವೆ.

ಬ್ಯಾಂಕಿನ 100 ವರ್ಷದ ಆಡಳಿತದಲ್ಲಿ

ಇದೇ ಮೊದಲ ಬಾರಿಗೆ ಚುನಾವಣೆ ಜಿದ್ದಾಜಿದ್ದಿ ಪಡೆದುಕೊಂಡು ಕುತೂಹಲ ಕೆರಳಿಸಿದೆ. ಹಲವು ದಶಕಗಳಿಂದ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ನಿರ್ದೇಶಕರು ಅವಿರೋಧ ಆಯ್ಕೆಯಾಗುತ್ತಿದ್ದರು. ಎಲ್ಲ ಪಕ್ಷದ ಶಾಸಕರು, ಸಂಸದರು ಪಕ್ಷಾತೀತವಾಗಿ ಆಯ್ಕೆ ಮಾಡುತ್ತಿದ್ದರು. ಆದರೆ, ಬದಲಾದ ರಾಜಕೀಯ, ಪ್ರತಿಷ್ಠೆ ಹಿನ್ನೆಲೆಯಲ್ಲಿ ನೇರಾನೇರ ಸ್ಪರ್ಧೆ ಏರ್ಪಟ್ಟಿದೆ. ಸೊಸೈಟಿ ನಿರ್ದೇಶಕರನ್ನು ಸೆಳೆಯಲು ವಿಧಾನಸಭೆ ಚುನಾವಣೆಯನ್ನೂ ಮೀರಿಸುವಂತೆ ಪ್ರಚಾರ ಕೈಗೊಂಡಿದ್ದಾರೆ.

ಚುನಾವಣೆಯನ್ನು ಪಕ್ಷದ ಚಿಹ್ನೆಯಡಿ ಎದುರಿಸುವಂತೆ ಕಾಂಗ್ರೆಸ್, ಬಿಜೆಪಿ ನಾಯಕರು ನಿರ್ದೇಶನ ನೀಡಿದ್ದಾರೆ. ಆದರೆ, ಸ್ಥಳೀಯ ಮುಖಂಡರು ಹೊಂದಾಣಿಕೆ ರಾಜಕಾರಣದ ಮುಂಬರುವ ವಿಧಾನಸಭೆ, ಮೂಲಕ ಲೋಕಸಭೆ ಚುನಾವಣೆಯಲ್ಲಿ ಗೆಲುವಿನ ವೇದಿಕೆ ಗಟ್ಟಿ ಮಾಡಿಕೊಳ್ಳಲು ಡಿಸಿಸಿ ಬ್ಯಾಂಕ್ ಅನ್ನು ವೇದಿಕೆಯಾಗಿ ಬಳಸಿಕೊಳ್ಳಲು ಸಿದ್ಧತೆಯಲ್ಲಿದ್ದಾರೆ. ಹೀಗಾಗಿ 14 ತಾಲೂಕುಗಳಲ್ಲಿ ಹೊಸ ಮುಖಗಳಿಗೆ ಅವಕಾಶ ಕಲ್ಪಿಸುವ ಪ್ರಯತ್ನಗಳ ನಡುವೆ ಹಾಲಿ, ಮಾಜಿ ನಿರ್ದೇಶಕರು, ಶಾಸಕರೂ ಸ್ಪರ್ಧೆಗೆ ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ.

### ಠರಾವು ಕೈಗೊಳ್ಳಲು ಷರತ್ತು!

ಡಿಸಿಸಿ ಬ್ಯಾಂಕಿನ 16 ನಿರ್ದೇಶಕರ ಆಯ್ಕೆಗೂ ಮುನ್ನ ಜಿಲ್ಲೆಯ 2,693 ಸೊಸೈಟಿಯ ಆಡಳಿತ ಮಂಡಳಿಯ ನಿರ್ದೇಶಕರಲ್ಲಿ ಒಬ್ಬರಿಗೆ ಮತದಾನದ ಹಕ್ಕು ನೀಡಲು ಸೊಸೈಟಿಗಳು ಸಾಮಾನ್ಯ ಸಭೆ ಕರೆದು ಠರಾವು ಕೈಗೊಂಡು ಸೆ.10ರೊಳಗೆ ಹೆಸರು ಘೋಷಿಸಬೇಕು. ಆದರೆ, ಬಹುತೇಕ ಸೊಸೈಟಿ ನಿರ್ದೇಶಕರಲ್ಲಿ ಒಮ್ಮತದ ಅಭ್ಯರ್ಥಿಗೆ ಮತ ಹಾಕಲು ಪರ–ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಹೆಚ್ಚು 'ದೇಣಿಗೆ' ನೀಡುವ ಅಭ್ಯರ್ಥಿಯನ್ನು ಬೆಂಬಲಿಸಲು ಷರತ್ತು ವಿಧಿಸಿರುವುದು ಚರ್ಚೆಗೆ ಕಾರಣವಾಗುತ್ತಿದೆ.

### ಕುತೂಹಲ ಕೆರಳಿಸಿದ ಬೈಲಹೊಂಗಲ

ರಾಮದುರ್ಗ, ಚನ್ನಮ್ಮನ ಕಿತ್ತೂರು, ಕಾಗವಾಡ, ಬೈಲಹೊಂಗಲ ತಾಲೂಕಿನ ಮೇಲೆ ಕಣ್ಣಿಟ್ಟಿರುವ ಆಕಾಂಕ್ಷಿಗಳು, ಗೆಲ್ಲಲು ತೆರೆಮರೆ ಕಸರತ್ತು ಆರಂಭಿಸಿದ್ದಾರೆ. ಯಾರೊಬ್ಬರೂ ನಾನೇ ಅಭ್ಯರ್ಥಿ ಎಂದು ಬಹಿರಂಗ ಹೇಳಿಕೆ ನೀಡಿಲ್ಲ. ಶಾಸಕ ಬಾಲಚಂದ್ರ ಜಾರಕಿಹೊಳಿ ಸಹೋದರರು ಮತ್ತು ಮಾಜಿ ಸಂಸದ ರಮೇಶ ಕತ್ತಿ ಕುಟುಂಬಗಳ ನೇರ ಹಣಾಹಣಿಯಲ್ಲಿ ಯಾರ ಬೆಂಬಲದಡಿ ಚುನಾವಣೆ ಎದುರಿಸಬೇಕೆಂಬ ಗೊಂದಲದಲ್ಲಿದ್ದಾರೆ. ಬೈಲಹೊಂಗಲದಲ್ಲಿ ಕಾಂಗ್ರೆಸ್, ಬಿಜೆಪಿ ಚುನಾವಣೆಗೆ ಸಜ್ಜಾಗಿರುವುದು ಕುತೂಹಲ ಕೆರಳಿಸಿದೆ.

## ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆ



**ಗದಗ :** ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅಚ್ಚುಕಟ್ಟಾಗಿ ಆಚರಿಸಬೇಕು ಎಂದು ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಅವರು ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ನಲ್ಲಿ ಬುಧವಾರ ಜರುಗಿದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗು ಸಮಾಜ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಸರ್ಕಾರ ನಿಗದಿ ಮಾಡಿದ ದಿನದಂದು ಜಿಲ್ಲಾಡಳಿತ ಭವನದಲ್ಲಿ ಸಾಂಕೇತಿಕವಾಗಿ ಜಯಂತಿ ಜರುಗುವುದು ಮುಂದೆ ಸಮುದಾಯದವರು ತಿರ್ಮಾನಿಸಿದಂತೆ ನಗರದ ಶ್ರೀ ಮಹರ್ಷಿ ವಾಲ್ಮೀಕಿ ಭವನದಲ್ಲಿ ಏರ್ಪಡಿಸಲಾಗುವುದು ಎಂದು ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕಿ ನಂದಾ ಹನಬರಟ್ಟಿ ಮಾತನಾಡಿ ಪ್ರತಿ ವರ್ಷದಂತೆ ಶ್ರೀ ವಾಲ್ಮೀಕಿ ಜಯಂತಿಯಂದು ಪರಿಶಿಷ್ಟ ಪಂಗಡದ ಏಳಿಗಾಗಿ ಶ್ರಮೀಸಿದ ಪರಿಶಿಷ್ಟ ಪಂಗಡಕ್ಕೆ ಸೇರಿದ ಶೈಕ್ಷಣಿಕ, ಸಾಮಾಜಿಕ , ಸಾಹಿತ್ಯ ಹಾಗೂ ಇನ್ನಿತರ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ದಿನಾಂಕ ಅಕ್ಟೋಬರ್7 ರಂದು ಜರಗುವ ರಾಜ್ಯ ಮಟ್ಟದ ಶ್ರೀ ವಾಲ್ಮೀಕಿ ಜಯಂತಿಯಂದು ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ನೀಡಲಾಗುತ್ತದೆ ಈ ಪ್ರಶಸ್ತಿಗಾಗಿ ಸಪ್ಟಂಬರ್ 10 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಭೆಗೆ ತಿಳಿಸಿದರು.

ಸಮುದಾಯದ ಮುಖಂಡರು ಮಾತನಾಡಿ ಭೀಷ್ಮ ಕೆರೆಯ ಹತ್ತಿರುವಿರುವ ವೃತ್ತಕ್ಕೆ ಮಹರ್ಷಿ ವಾಲ್ಮೀಕಿ ಅವರ ಹೆಸರನ್ನು ನೇಮಕ ಮಾಡಲಾಗಿದೆ,ಅದನ್ನು ಅಭಿವೃದ್ಧಿ ಪಡಿಸಬೇಕು,ಜಯಂತಿ ದಿನದಂದು ಮೆರವಣಿಗೆಗೆ ಕಲಾವಿದರ ತಂಡವನ್ನು ಒದಗಿಸಿಕೊಡಬೇಕು,ಜಿಲ್ಲೆಯಲ್ಲಿ ಶ್ರೀ ವಾಲ್ಮೀಕಿ ಭವನಗಳ ಕಾಮಗಾರಿಗಳು ಚುರುಕುಗೊಳಬೇಕು ಎಂದು ಸಭೆಗೆ ತಿಳಿಸಿದರು.

ಇದನ್ನು ಆಲಿಸಿದ ಜಿಲ್ಲಾಧಿಕಾರಿಗಳು ಶ್ರೀ ಮಹರ್ಷಿ ವಾಲ್ಮೀಕಿ ವೃತ್ತಕ್ಕೆ ಸಂಬಂಧಿಸಿದಂತೆ ಇನ್ನುಳಿದ ಸಮಸ್ಯೆಗಳನ್ನು ಚರ್ಚಿಸಲು ಮತ್ತೊಂದು ಸಭೆ ನಡೆಸಲಾಗುವುದು ಎಂದು ತಿಳಿಸಿದರು.ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ದುರುಗೇಶ ಕೆ.ಆರ್,ಡಿವೈಎಸ್ ಪಿ ಮುರ್ತುಜಾ ಖಾದ್ರಿ,ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಸಿ ಆರ್ ಮುಂಡರಗಿ,ಎ ಸಿ ಗಂಗಪ್ಪ, ಜಿಲ್ಲಾಮಟ್ಟದ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಶ್ರೀ ವಾಲ್ಮೀಕಿ ಸಮುದಾಯದ ಮುಖಂಡರು ಹಾಗೂ ಪರಿಶಿಷ್ಟ ವರ್ಗ,ಪರಿಶಿಷ್ಟ ಜಾತಿ ಗಣ್ಯರು, ಸಂಘ ಸಂಸ್ಥೆಯ ಪದಾಧಿಕಾರಿಗಳು ಆಗಮಿಸಿ ಶ್ರೀ ವಾಲ್ಮೀಕಿ ಜಯಂತಿ ಆಚರಣೆಯ ಕುರಿತು ಸಲಹೆ ಮತ್ತು ಸೂಚನೆಗಳನ್ನು ನೀಡಿದರು.

## ಅತ್ಯುತ್ತಮ ಶಿಕ್ಷಕರ ಪ್ರಶಸ್ತಿಗೆ ಜಿಲ್ಲೆಯಿಂದ 40 ಶಿಕ್ಷಕ/ಶಿಕ್ಷಕಿಯರು ಆಯ್ಕೆ

**ಶಿವಮೊಗ್ಗ:** ಶಿಕ್ಷಕರ ದಿನಾಚರಣೆಯ ಪ್ರಯುಕ್ತ ಸೆ.5 ರಂದು ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಯ ವತಿಯಿಂದ 2025–26 ನೇ ಸಾಲಿನ ಜಿಲ್ಲಾ ಅತ್ಯುತ್ತಮ ಶಿಕ್ಷಕರ ಪ್ರಶಸ್ತಿಯನ್ನು ನೀಡಲಾಗುತ್ತಿದ್ದು, ಜಿಲ್ಲೆಯಿಂದ 40 ಶಿಕ್ಷಕ/ಶಿಕ್ಷಕಿಯರು ಆಯ್ಕೆಯಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಅತ್ಯುತ್ತಮ ಕಿರಿಯ ಪ್ರಾಥಮಿಕ ಶಾಲಾ ವಿಭಾಗದಲ್ಲಿ ಶಿಕ್ಷಕಿ/ಶಿಕ್ಷಕ ಪ್ರಶಸ್ತಿಗೆ –07, ಹಿರಿಯ ಪ್ರಾಥಮಿಕ ಶಾಲಾ ವಿಭಾಗದಲ್ಲಿ ಜಿಲ್ಲಾ ಅತ್ಯುತ್ತಮ ಶಿಕ್ಷಕಿ/ಶಿಕ್ಷಕ ಪ್ರಶಸ್ತಿಗೆ–07, ಪ್ರೌಢಶಾಲಾ ವಿಭಾಗದಲ್ಲಿ ಅತ್ಯುತ್ತಮ ಶಿಕ್ಷಕಿ/ಶಿಕ್ಷಕ ಪ್ರಶಸ್ತಿಗೆ–07 ಹಾಗೂ ವಿಶೇಷ ಶಿಕ್ಷಕ ಪ್ರಶಿಸ್ತಿಗೆ –19 ಶಿಕ್ಷಕರುಗಳು ಜಿಲ್ಲೆಯಿಂದ ಆಯ್ಕೆಯಾಗಿದ್ದಾರೆ.

ಸರ್ಕಾರಿ ಕಿರಿಯ ಪ್ರಾಥಮಿಕ ಶಾಲಾ ವಿಭಾಗದಲ್ಲಿ ಸಹ ಶಿಕ್ಷಕರುಗಳಾದ ಶೀಲಾ ಪಿ.,– ಸಾಗರ, ಮಂಜಪ್ಪ ಡಿ.,–ಹೊಸನಗರ, ಜ್ಯೋತಿ ಹೆಚ್. ಎಂ., –ತೀರ್ಥಹಳ್ಳಿ, ಶಾರದಾ ಎಸ್.,–ಭದ್ರಾವತಿ, ಗಣೇಶ್ ನಾಯ್ಕ ಎನ್., –ಸೊರಬ, ಸುರೇಶ್ ಕೆ.,–ಶಿಕಾರಿಪುರ, ತಸ್ನಿಂ ಕೌಸರ್–ಶಿವಮೊಗ್ಗ ಇವರುಗಳು ಆಯ್ಕೆಯಾಗಿದ್ದಾರೆ.

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ವಿಭಾಗದಲ್ಲಿ ಬಡ್ತಿ ಮುಖ್ಯ ಶಿಕ್ಷಕರಗಳಾಗಿ ಸುಮ ಹೆಚ್.ಎ.,–ತೀರ್ಥಹಳ್ಳಿ, ರಾಧಾಬಾಯಿ–ಶಿವಮೊಗ್ಗ, ಕೃಷ್ಣಪ್ಪ ಹೆಚ್.ವಿ.–ಸೊರಬ ಹಾಗೂ ಸಹ ಶಿಕ್ಷಕರುಗಳಾದ ಬೂದ್ಯಪ್ಪ ಡಿ.,–ಸಾಗರ, ಶಿಲ್ಪ ಜೆ., –ಹೊಸನಗರ, ಭಾರತಿ ಎಸ್.,–ಭದ್ರಾವತಿ, ಮಹೇಶಪ್ಪ ಬಂಡಿಬೈರನಹಳ್ಳಿ –ಶಿಕಾರಿಪುರ ಇವರುಗಳು ಆಯ್ಕೆಯಾಗಿದ್ದಾರೆ.

ಸರ್ಕಾರಿ ಪ್ರೌಢಶಾಲಾ ವಿಭಾಗದಲ್ಲಿ ಮುಖ್ಯ ಶಿಕ್ಷಕರುಗಳಾದ ಗಜೇಂದ್ರ ಎಸ್. ಹೆಚ್., –ಸಾಗರ, ರಾಮಚಂದ್ರ ಎಸ್.ಜೆ. –ಸೊರಬ ಹಾಗೂ ಸಹ ಶಿಕ್ಷಕರುಗಳಾದ ಚಂದ್ರು ಸಿ.,–ಹೊಸನಗರ, ಕೃಷ್ಣಪ್ಪ ಡಿ.,–ತೀರ್ಥಹಳ್ಳಿ, ಛಾಯಾ ಶ್ಯಾಮಸುಂದರ–ಭದ್ರಾವತಿ, ನಾಗರಾಜಪ್ಪ ಪಿ.–ಶಿಕಾರಿಪುರ, ಹಸನ್ ಸಾಬ್ ಕೆ.ಹೆಚ್.–ಶಿವಮೊಗ್ಗ ಇವರುಗಳು ಆಯ್ಕೆಯಾಗಿದ್ದಾರೆ.

ವಿಶೇಷ ಶಿಕ್ಷಕ ಪ್ರಶಸ್ತಿಗೆ ಜಿಲ್ಲೆಯ ಸರ್ಕಾರಿ ಶಾಲೆಯ ಬಡ್ತಿ ಮುಖ್ಯ ಶಿಕ್ಷಕರುಗಳಾದ ಶರಣಪ್ಪ ಎ.–ಸಾಗರ, ಆಶಾ ಬಿ.ಕೆ.–ತೀರ್ಥಹಳ್ಳಿ, ಮುಖ್ಯ ಶಿಕ್ಷಕರಾದ ಭಾರತಿ ಎ.,–ಹೊಸನಗರ, ಸಹ ಶಿಕ್ಷಕರುಗಳಾದ ಶಬಿನಾ–ಭದ್ರಾವತಿ, ದುರುಗಪ್ಪ ಡಿ.ಬಿ.–ಸೊರಬ, ಸಂಜೀವ ನಾಯ್ಕ–ಶಿಕಾರಿಪುರ, ., ಕಲಾವತಿ ಎ.–ಸೊರಬ, ಅಂಥೋನಿ ಫರ್ನಾಂಡಿಸ್–ಸಾಗರ, ಗೋಪಿ ವಿ.–ತೀರ್ಥಹಳ್ಳಿ, ಚಿತ್ರಕಲಾ ಶಿಕ್ಷಕರಾದ ಅರವಿಂದ ಟಿ.ಎನ್.–ತೀರ್ಥಹಳ್ಳಿ ಹಾಗೂ ದೈಹಿಕ ಶಿಕ್ಷಣ ಶಿಕ್ಷಕರಾದ ಸುಶೀಲಮ್ಮ ಎಸ್.–ಶಿವಮೊಗ್ಗ ಇವರುಗಳು ಆಯ್ಕೆಯಾಗಿದ್ದಾರೆ.

## ಒಳ್ಳೆಯ ಕೆಲಸ ಮಾಡಿದರೆ ಪ್ರತಿದಿನವೂ ಒಳ್ಳೆಯ ದಿನವೇ

ಉಪಾಸ್ಯ ಮತ್ತು ಉಪಾಸಕರ ನಡುವೆ ವ್ಯತ್ಯಾಸವಿರುವುದಿಲ್ಲ. ಯಾವುದರ ಮೇಲಾದರೂ ಉಪಾಸನೆಯನ್ನು ಮಾಡುವ ಉಪಾಸಕರು ಹಾಗೂ ಉಪಾಸ್ಯದ ನಡುವೆ ಯಾವ ಭೇದವೂ ಇರುವುದಿಲ್ಲ. ಆದ್ದರಿಂದಲೇ ಭಕ್ತರು ಬಂದಾಗ, ಅವರ ಆರಾಧ್ಯ ದೈವವೇ ಬಂದಿತೆಂದು ಪರಿಗಣಿಸಲಾಗುತ್ತದೆ. 'ಯೋಗಕ್ಷೇಮಂ ವಹಾಮ್ಯಹಂ'– ಭಕ್ತರ ಪೂರ್ಣ ಯೋಗಕ್ಷೇಮವನ್ನು ನಾನು ನೋಡಿಕೊಳ್ಳುತ್ತೇನೆ ಎಂದು ಭಗವಾನ್ ಶ್ರೀಕೃಷ್ಣ ಭಗವದ್ಗೀತೆಯಲ್ಲಿ ಹೇಳಿದ್ದಾನೆ.

ನಾವು ಒಮ್ಮೆ ಚೆನ್ನೈಯಿಂದ ಪುದುಚ್ಚೇರಿಗೆ ಹೋಗುತ್ತಿದ್ದೆವು. ರಸ್ತೆಯಲ್ಲಿ ಒಂದು ಅತೀ ಪ್ರಾಚೀನವಾದ ದೇವಸ್ಥಾನವಿತ್ತು. ಅದು ಸ್ವಲ್ಪ ಶಿಥಿಲಾವಸ್ಥೆಯಲ್ಲೂ ಇತ್ತು. ಅದು ಭಗವಾನ್ ವಿಷ್ಣುವಿನ ದೇವಸ್ಥಾನವಾಗಿತ್ತು. ಓರ್ವ ವೃದ್ಧ ಪೂಜಾರಿಗಳು ಆ ದೇವಸ್ಥಾನದ ಕಥೆಯನ್ನು ಹೇಳಿದರು. ಕಾಲನೇಮಿ ಎಂಬ ಋಷಿಗಳೋರ್ವರು ಇದ್ದರು ಮತ್ತು ಅವರಿಗೆ 365 ಹೆಣ್ಣುಮಕ್ಕಳಿದ್ದರು. ಇದನ್ನು ಕೇಳಿ ಗಾಬರಿಯಾಗಬೇಡಿ! ಅಷ್ಟೂ ಹೆಣ್ಣುಮಕ್ಕಳಿಗೆ ವಿವಾಹ



**ಗುರುದೇವ ಶ್ರೀ ಶ್ರೀ ರವಿಶಂಕರ್**

ಮಾಡಿಸಬೇಕಿತ್ತು. ಇದರಿಂದ ಅವರು ಬಹಳ ಚಿಂತಿತರಾಗಿದ್ದರು. ಅವರ ದೊಡ್ಡ ಪರಿವಾರದಿಂದಾಗಿ ಅವರ ಬಳಿ ಯಾರೂ ಬರುತ್ತಿರಲಿಲ್ಲ. ಒಬ್ಬರಿಗೆ ಉಡುಗೊರೆ ಎಂದು ಕೊಡಲು ಸಾಧ್ಯವಿಲ್ಲವಲ್ಲ? ಅಷ್ಟು ಜನರಿಗೂ ಉಡುಗೊರೆ ಕೊಡಬೇಕು! ಯಾರೂ ಇವರನ್ನು ಔತಣಕೂಟಕ್ಕೆ ಕರೆಯುತ್ತಿರಲಿಲ್ಲ. ಅವರನ್ನು

ಕರೆದರೆ ಎಲ್ಲಾ 365 ಹೆಣ್ಣುಮಕ್ಕಳೂ ಬಂದುಬಿಡುತ್ತಾರೆಂದು ಯಾರೂ ಅವರನ್ನು ಕರೆಯುತ್ತಿರಲಿಲ್ಲ! ಈ ರೀತಿಯಾಗಿ ಅನೇಕ ಸಮಸ್ಯೆಗಳು ಇದ್ದುದರಿಂದ ಅವರು ಭಗವಂತನನ್ನು ಸದಾ ಪ್ರಾರ್ಥಿಸುತ್ತಿದ್ದರು.

ಒಂದು ದಿನ ಭಗವಾನ್ ವಿಷ್ಣು ಅವರೆಉರು ಪ್ರತ್ಯಕ್ಷನಾದ. 'ನೀನು ಚಿಂತಿಸಬೇಡ. ನಿನ್ನ ಎಲ್ಲ ಹೆಣ್ಣುಮಕ್ಕಳನ್ನೂ ನಾನೇ ವಿವಾಹವಾಗುತ್ತೇನೆ!' ಎಂದ. ಮಾತ್ರವಲ್ಲ ಭಗವಾನ್ 365 ಹೆಣ್ಣುಮಕ್ಕಳನ್ನೂ ಮದುವೆಯಾದ. ಆದ್ದರಿಂದ ಭಗವಂತನಿಗೆ, ನಿತ್ಯಕಲ್ಯಾಣ ಶ್ರೀನಿವಾಸ ಎಂಬ ಹೆಸರು ಬಂದಿತು, ಎಂದರೆ ಪ್ರತಿನಿತ್ಯವೂ ಅವನು ಮದುಮಗನು. ಎಲ್ಲರೂ ಜೀವನದಲ್ಲಿ ಒಂದು ಸಲ ಮದುಮಗನಾದರೆ, ಇಲ್ಲಿ ಭಗವಂತ ನಿತ್ಯ ಮದುಮಗ! ಮದುಮಗನ ಸುತ್ತಲೂ ಸದಾ ಸಡಗರವೇ ಅಲ್ಲವೇ!

ಈ ಕಥೆಯನ್ನು ಕೇಳಿದಾಗ ಸ್ವಲ್ಪ ಮುಜುಗರವುಂಟಾಗುತ್ತದೆ, ಭಗವಾನ್ ವಿಷ್ಣುವಿಗೆ ಇಷ್ಟೊಂದು ಪತ್ನಿಯರೇ? ಎಂದು. ಇದರ ಬಗ್ಗೆ ಸ್ವಲ್ಪ ಆಳವಾಗಿ ಯೋಚಿಸಿದರೆ ಒಂದು ಅದ್ಭುತವಾದ ರಹಸ್ಯ ಈ ಕಥೆಯಲ್ಲಿದೆ. ನಾವು ಯಾವಾಗಲೂ ಇದು ಒಳ್ಳೆಯ ದಿನ, ಇದು ಕೆಟ್ಟ ದಿನ. ಈ ದಿನ ಸರಿಯಿಲ್ಲ ಎಂದೆಲ್ಲಾ ನೋಡುತ್ತೇವೆ. 365 ದಿನಗಳಲ್ಲಿ ಕೆಲವು ದಿನಗಳನ್ನು ಒಳ್ಳೆಯ ದಿನಗಳಾಗಿ ಮತ್ತು ಕೆಲವು ದಿನಗಳನ್ನು ಕೆಟ್ಟ ದಿನಗಳಾಗಿ ಪರಿಗಣಿಸುತ್ತೇವೆ. ಆದರೆ ಭಗವಂತನೊಡನಿದ್ದಾಗ, ಪ್ರತಿದಿನವೂ ಮದುವೆಯ ದಿನವೇ, ಮಂಗಳಕರ ದಿನವೇ! ಪ್ರತಿನಿತ್ಯವೂ ಮಂಗಳಕಾರ್ಯ ನಡೆಯುತ್ತದೆ! ಪ್ರತಿದಿನವನ್ನೂ ಒಂದು ಕನ್ಯೆಯಾಗಿ ಪರಿಗಣಿಸಿದರೆ ಮತ್ತು ಆ ಪ್ರತಿದಿನವೂ ಭಗವಂತನ ಮದುಮಗಳಾದರೆ, ಆ ದಿನವು ಹೇಗೆ ಕೆಟ್ಟ ದಿನವಾಗಲು ಸಾಧ್ಯ?! ಕೆಟ್ಟದಾಗಿರುವ ಸಾಧ್ಯತೆಯೇ ಇಲ್ಲ. ಆ ಕನ್ಯೆಯರನ್ನು ತಿಥಿ ದೇವತೆಗಳು ಎಂದು ಕರೆಯುತ್ತಾರೆ. ಯಾರು ತಮ್ಮ ಭಗವಂತನ ಮೇಲಿಡುತ್ತಾರೋ ಅವರಿಗೆ ಮನಸ್ಸನ್ನು ಕೆಟ್ಟ ದಿನ ಎನ್ನುವಂಥದ್ದೇ ಇರುವುದಿಲ್ಲ! ಪ್ರತಿನಿತ್ಯವೂ ಉತ್ಸವವೇ. ಇದೇ ಕಥೆಯ ಸಾರ.

ಎಷ್ಟು ಅದ್ಭುತವಾದ ಸಿದ್ಧಾಂತವಿದು! ಋಷಿಗಳ

ಹೆಸರೇನು? ಕಾಲನೇಮಿ, ಎನದು ಕಾಲನೇಮಿ ಎಂದರೆ? ಹಾಗೆಂದರೆ ಕಾಲದ ನಿಯಮಕ್ಕೆ ತಕ್ಕಂತೆ ನಡೆಯುವವನು. ಕಾಲನೇಮಿಯಿಂದ ಜನಿಸಿರುವ ಪ್ರತಿಯೊಂದು ದಿನವೂ ಭಗವಂತನಿಗೆ ಸಮರ್ಪಿತವಾಗಿದೆ. ಪ್ರತಿಯೊಂದು ದಿನವೂ ಭಗವಂತನ ಮದುಮಗಳು. ಆದ್ದರಿಂದ ಯಾವ ದಿನವೂ ಕೆಟ್ಟದಾಗಿ, ಅಸುಂದರವಾಗಿ ಇರಲು ಸಾಧ್ಯವೇ ಇಲ್ಲ. ಎಲ್ಲಾ ಗ್ರಹಗಳ ಮೇಲೂ ಶಿವನು ಕುಳಿತ್ತಿದ್ದಾನೆ. 'ಓಂ ನಮಃ ಶಿವಾಯ' ಎಂದು ಮಂತ್ರೋಚ್ಚಾರಣೆ ಮಾಡಿದರೆ ಸಾಕು. ಎಲ್ಲಾ ದಿನಗಳೂ ಒಳ್ಳೆಯ ದಿನವೇ ಆಗುತ್ತವೆ.

ಪುರಂದರದಾಸರು, 'ಸಕಲ ಗ್ರಹಬಲ ನೀನೇ ಸರಸಿಜಾಕ್ಷ' ಎಂದು ಹಾಡಿದ್ದಾರೆ. ಸರಸಿಜಾಕ್ಷನಾದ ವಿಷ್ಣುವಿನೊಳಗೆ ಎಲ್ಲಾ ಗ್ರಹಗಳ ಬಲವೂ ಇದೆ. ಭಗವಂತನ ಸೂಚನೆ ಮಾತ್ರದಿಂದಲೇ ಎಲ್ಲಾ ಗ್ರಹಗಳೂ ಚಲಿಸುತ್ತವೆ ಎಂದು ಪುರಂದರದಾಸರು ಹೇಳಿದ್ದಾರೆ. ಒಳ್ಳೆಯ ಕೆಲಸ ಮಾಡಿದರೆ ಪ್ರತಿದಿನವೂ ಒಳ್ಳೆಯ ದಿನವೇ. ಕೆಟ್ಟ ಕೆಲಸ ಮಾಡಿದರೆ, ಬಹಳ ಒಳ್ಳೆಯ ದಿನವೂ ಕೆಟ್ಟ ದಿನವೇ ಆಗಿಬಿಡುತ್ತದೆ. ಆದ್ದರಿಂದ, ನಿತ್ಯವೂ ಕಲ್ಯಾಣವೇ ಆಗುತ್ತದೆ. ಅದ್ದರಿಂದ ಪ್ರತಿದಿನವೂ ಒಳ್ಳೆಯ ದಿನವೇ ಎಂಬುದನ್ನು ನಿಮ್ಮ ಮನದಲ್ಲಿ ನಿಶ್ಚಯಿಸಿಕೊಂಡುಬಿಡಿ!

# ಸಂಪದ್ಭರಿತ ಮಾನವ ಸಂಪನ್ಮೂಲದ ನಿರ್ಮಾಣ ಶಿಕ್ಷಕರಿಂದ ಮಾತ್ರ ಸಾಧ್ಯ : ಡಿ. ಸುಧಾಕರ್




**ಚಿತ್ರದುರ್ಗ:** ಒಂದು ದೇಶ ಅಭಿವೃದ್ಧಿಯಾಗಬೇಕಾದರೆ ಆ ದೇಶದ ಮಾನವ ಸಂಪನ್ಮೂಲ ಸಂಪದ್ಭರಿತವಾಗಿರಬೇಕು. ಈ ಸಂಪದ್ಭರಿತ ಮಾನವ ಸಂಪನ್ಮೂಲದ ನಿರ್ಮಾಣ ಶಿಕ್ಷಕರಿಂದ ಮಾತ್ರ ಸಾಧ್ಯ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ನಗರದ ಕೆ.ಇ.ಬಿ ಸಮುದಾಯ ಭವನದಲ್ಲಿ ಶುಕ್ರವಾರ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಆಯೋಜಿಸಲಾದ ಶಿಕ್ಷಕರ ದಿನಾಚರಣೆ–ಡಾ.ಸರ್ವೆಪಲ್ಲಿ ರಾಧಾಕೃಷ್ಣನ್‌ರವರ ಜನ್ಮದಿನೋತ್ಸವ ಹಾಗೂ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಇಂದಿಗೂ ಶಿಕ್ಷಕರಿಗೆ ಒಳ್ಳೆಯ ಗೌರವವಿದೆ. "ಗುರುವೇ ನಮಃ" ಎಂದು ನಮಿಸುವ ಸಮಾಜ ಗುರುಗಳಿಂದ ಶ್ರೇಷ್ಠವಾದದ್ದನ್ನು ಬಯಸುತ್ತದೆ ಎನ್ನುವುದನ್ನು ಅರಿಯಬೇಕಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಯ ಜೀವನದಲ್ಲಿಯೂ ಶಿಕ್ಷಕರು ನಿರ್ಣಾಯಕ ಪಾತ್ರ ವಹಿಸುತ್ತಾರೆ ಮತ್ತು ಅವರ ಬದುಕು ಶಿಕ್ಷಕರಿಂದ ಮಾತ್ರ ಬೆಳಗಲು ಸಾಧ್ಯ ಎಂದು ಅರಿತು ಕೆಲಸ ಮಾಡಬೇಕಾಗಿದೆ ಎಂದು ಹೇಳಿದರು.

ಪ್ರಸ್ತುತ ಸಮಾಜದಲ್ಲಿ ಮೌಲ್ಯಗಳು ದಿನೇ ದಿನೇ ಕುಸಿಯುತ್ತಿರುವುದು ಆತಂಕದ ವಿಷಯವಾಗಿದೆ. ಶಿಕ್ಷಕರು ತಮ್ಮ ಪಾಠ ಬೋಧನೆ ಜೊತೆ ಜೊತೆಗೆ ವಿದ್ಯಾರ್ಥಿಗಳಿಗೆ ಮಾನವೀಯ ಹಾಗೂ ನೈತಿಕ ಮೌಲ್ಯಗಳನ್ನು ಮತ್ತು ವೈಚಾರಿಕ ಪ್ರಜ್ಞೆಯನ್ನು ಬೆಳೆಸಬೇಕಾಗಿರುವುದು ಸಮಾಜದ ಅತ್ಯಂತ ತುರ್ತು ಎಂದು ಭಾವಿಸಿ ಶಿಕ್ಷಕರು ಕೆಲಸ ಮಾಡಬೇಕಾಗಿದೆ. ವಿದ್ಯಾರ್ಥಿಯ ಬದುಕು ಶಿಕ್ಷಕರ ಮಾರ್ಗದರ್ಶನ ಆಧರಿಸಿರುತ್ತದೆ ಎನ್ನುವುದನ್ನು ಎಲ್ಲ ಶಿಕ್ಷಕರು ಮನಗಾಣಬೇಕು ಎಂದರು.

ಈ ವರ್ಷದಲ್ಲಿ ಶೈಕ್ಷಣಿಕ ಚಟುವಟಿಕೆ, ಪೂರ್ವ ಪರೀಕ್ಷೆ, ಸಾಫಲ್ಯ ಪರೀಕ್ಷೆಗಳನ್ನು ಹೆಚ್ಚಾಗಿ ನಡೆಸುವ ಮೂಲಕ ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ಗುರುತಿಸಿ ಪರಿಹಾರ ಬೋಧನೆ ನೀಡುವ ವಿಶೇಷ ತರಗತಿಗಳನ್ನು ನಡೆಸಿ, ವಿದ್ಯಾರ್ಥಿಗಳ ಕಲಿಕಾ ಕೌಶಲ್ಯ ಹೆಚ್ಚಿಸುವ ಮೂಲಕ ಈ ಬಾರಿಯ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಚಿತ್ರದುರ್ಗ ಜಿಲ್ಲೆಯು ರಾಜ್ಯದಲ್ಲಿಯೇ 10ನೇ ಸ್ಥಾನದೊಳಗೆ ಬರಲು ಎಲ್ಲ ಅಧಿಕಾರಿಗಳು ಮತ್ತು ಶಿಕ್ಷಕರು ಸಂಘಟಿತ ಶ್ರಮದ ಮೂಲಕ ಕಾರಣೀಭೂತರಾಗಲು ಪ್ರಯತ್ನ ಮಾಡಬೇಕು ಎಂದರು.

**ಗುರುಭವನ ನಿರ್ಮಾಣಕ್ಕೆ ರೂ.2 ಕೋಟಿ:** ಜಿಲ್ಲಾ ಕೇಂದ್ರ ಚಿತ್ರದುರ್ಗ ನಗರದಲ್ಲಿ ಗುರುಭವನ ನಿರ್ಮಾಣಕ್ಕೆ ರೂ.2 ಕೋಟಿ ಅನುದಾನ ನೀಡಲಾಗುವುದು ಎಂದು ಸಚಿವ ಡಿ.ಸುಧಾಕರ್ ಭರವಸೆ ನೀಡಿದರು.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಚಿತ್ರದುರ್ಗ ಜಿಲ್ಲಾ ಶಾಖೆಯ ಮನವಿಗೆ ಸ್ಪಂದಿಸಿದ ಸಚಿವ ಡಿ.ಸುಧಾಕರ್, ಜಿಲ್ಲೆಯ ಎಲ್ಲ ಶಾಸಕರ ಸಹಕಾರದೊಂದಿಗೆ ಮುಂದಿನ ವರ್ಷದೊಳಗ ಅತ್ಯುತ್ತಮ ಗುರುಭವನ ನಿರ್ಮಾಣ ಮಾಡಿಕೊಡಲಾಗುವುದು ಎಂದು ತಿಳಿಸಿದರು.

ವಿಧಾನ ಪರಿಷತ್ ಶಾಸಕರಾದ ಕೆ.ಎಸ್.ನವೀನ್ ಮಾತನಾಡಿ, ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರು ಭಾರತದ ಒಬ್ಬ ಅಗ್ರಗಣ್ಯ ಶಿಕ್ಷಕ, ತತ್ವಜ್ಞಾನಿ ಮತ್ತು ರಾಜನೀತಿ ತಜ್ಞರಾಗಿದ್ದರು ಹಾಗೂ ಭಾರತ ರಾಷ್ಟ್ರಪತಿಯಾಗಿ ಸೇವೆ ಸಲ್ಲಿಸಿದವರು. ಶಿಕ್ಷಣದ ಬಗ್ಗೆ ಅವರ ಅಚಲ ಭಕ್ತಿಯಿಂದಾಗಿ, ಅವರ ಜನ್ಮ ದಿನವಾದ ಸೆಪ್ಟೆಂಬರ್ 05ಅನ್ನು ದೇಶಾದ್ಯಂತ ಶಿಕ್ಷಕರ ದಿನವಾಗಿ ಆಚರಿಸಲಾಗುತ್ತದೆ. ದೇಶ, ಸಮಾಜವನ್ನು ಕಟ್ಟುವ, ಸರಿದಾರಿಗೆ ತರುವ ಅತ್ಯಂತ ಪ್ರಮುಖ ಪಾತ್ರವನ್ನು ಶಿಕ್ಷಕರು ನಿರ್ವಹಿಸುತ್ತಿದ್ದಾರೆ. ನಿಷ್ಠೆ, ಶ್ರದ್ಧೆಯಿಂದ ನಿತ್ಯವೂ ಒತ್ತಡಗಳ ಮಧ್ಯೆ ಶಿಕ್ಷಕರು ತಮ್ಮ ಜವಾಬ್ದಾರಿ ನಿರ್ವಹಿಸುತ್ತಿದ್ದಾರೆ ಎಂದು ತಿಳಿಸಿದ ಅವರು, ಮಗುವನ್ನು ಜವಾಬ್ದಾರಿಯುತ ನಾಗರೀಕನನ್ನಾಗಿ ಮಾಡುವಲ್ಲಿ ಶಿಕ್ಷಕರ ಪಾತ್ರ ಬಹಳ ಅಮೂಲ್ಯವಾದುದು ಎಂದು ಹೇಳಿದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ. ಆರ್.ಮಂಜುನಾಥ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ 2025–26ನೇ ಸಾಲಿನ ಜಿಲ್ಲಾಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಮತ್ತು ವಿಶೇಷ ಶಿಕ್ಷಕರ ಪ್ರಶಸ್ತಿ ಪಡೆದ ಶಿಕ್ಷಕರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ತಾಜ್‌ಪೀರ್, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ಉಪಾಧ್ಯಕ್ಷ ಡಿ.ಎನ್.ಮೈಲಾರಪ್ಪ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಎಸ್.ಆಕಾಶ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಮಹೆಬೂಬ್ ಜಿಲಾನಿ ಖು–ರೇಷಿ, ಡಯಟ್ ಪ್ರಾಂಶುಪಾಲ ನಾಸಿರುದ್ದೀನ್, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಮಾಲತೇಶ್ ಮುದ್ದಜ್ಜಿ, ರಾಜ್ಯ ಪರಿಷತ್ ಸದಸ್ಯ ಎಸ್.ರಾಜಪ್ಪ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಜಿ.ಬಿ.ಮಹಂತೇಶ್ ಸೇರಿದಂತೆ ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳು, ಶಿಕ್ಷಕರ ಸಂಘದ ಅಧ್ಯಕ್ಷರು, ಕಾರ್ಯದರ್ಶಿಗಳು, ಪದಾಧಿಕಾರಿಗಳು ಹಾಗೂ ನಿರ್ದೇಶಕರು ಹಾಗೂ ಶಿಕ್ಷಕರು ಇದ್ದರು.

## ಗುಣಮಟ್ಟದ ಛಾಯಾಚಿತ್ರೀಕರಣಕ್ಕೆ ಅತ್ಯುತ್ತಮ ಕ್ಯಾಮಾರ ಬಳಸಿ : ನದೀಮ್



**ಚಿಕ್ಕಮಗಳೂರು:** ಗುಣಮಟ್ಟದ ಛಾಯಾಚಿತ್ರ ಹಾಗೂ ವೀಡೀಯೋ ಚಿತ್ರೀಕರಣ ಮಾಡಲು ಅತ್ಯುತ್ತಮ ಕ್ಯಾಮರಾಗಳು ಅವಶ್ಯಕವಾಗಿದೆ. ಹೊಸ ಆವಿಷ್ಕಾರದ ಕ್ಯಾಮಾರಗಳನ್ನು ಬಳಸಿಕೊಂಡು ವೃತ್ತಿಯಲ್ಲಿ ಉತ್ತಮ ಸೇವೆ ಸಲ್ಲಿಸಬೇಕು ಎಂದು ಚಿಕ್ಕಮಗಳೂರು ಛಾಯಾಗ್ರಾಹಕರ ಸಂಘದ ಅಧ್ಯಕ್ಷ ನದೀಮ್‌ಬಾಷ ಹೇಳಿದರು.

ನಗರದ ಜಿಲ್ಲಾ ಸ್ಕೌಟ್ಸ್ ಭವನದಲ್ಲಿ ಛಾಯಾಗ್ರಾಹಕರ ಸಂಘದಿಂದ ಆಯೋಜಿಸಿದ್ದ 'ನಿಕಾನ್' ಕ್ಯಾಮಾರಾಗಳ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಛಾಯಾಗ್ರಾಹಕ ವೃತ್ತಿ ಪೂರ್ವಿಕರ ಹಳೆಯ ನೆನಪುಗಳು ಮೆಲುಕು ಹಾಕುವುದು ಹಾಗೂ ವರ್ತಮಾನದ ಶುಭ ಸಮಾರಂಭಗಳನ್ನು ಸೆರೆಹಿಡಿಯುವ ಕೆಲಸವಾಗಿದೆ. ಗ್ರಾಹಕರಿಗೆ ಉತ್ತಮ ಗುಣಮಟ್ಟದ ಛಾಯಾಚಿತ್ರ ಒದಗಿಸಿದಾಗ ಮಾತ್ರ ವೃತ್ತಿಗೆ ಗೌರವ ಸಿಗಲಿದೆ ಎಂದು ಕಿವಿಮಾರು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಹಲವಾರು ಕಂಪನಿಗಳ ಕ್ಯಾಮಾರಾಗಳು ಮಾರುಕಟ್ಟೆಯಲ್ಲಿವೆ. ವೃತ್ತಿ ತಕ್ಕಂತೆ ಖರೀದಿಸುವ ಕೆಲಸ ಛಾಯಾಗ್ರಾಹಕರು ಮಾಡಬೇಕು. ಪ್ರಸ್ತುತ ಛಾಯಾಗ್ರಾಹಕರಲ್ಲಿ ನಿಕಾನ್ ಕಂಪನಿಗಳ ಕ್ಯಾಮರಾಗಳೇ ಹೆಚ್ಚಿರುವ ಹಿನ್ನೆಲೆಯಿದೆ. ಹೀಗಾಗಿ ಕಂಪನಿಗಳ ಹೊಸ ಮಾದರಿಗಳ ಕ್ಯಾಮಾರಗಳನ್ನು ಖರೀದಿಸಿದರೆ ಗುಣಮಟ್ಟದ ಕೆಲಸ ಮಾಡಬಹುದು ಎಂದರು.

ನಿಕಾನ್ ಕಂಪನಿ ಮುಖ್ಯಸ್ಥ ರೋಷನ್ ಮಾತನಾಡಿ, ಪ್ರಸಕ್ತ ಸಾಲಿನಲ್ಲಿ ನಿಕಾನ್ ಕ್ಯಾಮಾರ ಹೊಸ ಹೊಸ ಮಾದರಿಯ ಕ್ಯಾಮಾರಾಗಳು ಮಾರುಕಟ್ಟೆಯಲ್ಲಿ ಲಭ್ಯವಾಗುತ್ತಿದೆ. ಗ್ರಾಹಕರನ್ನು ಸಂತೋಷಪಡಿಸುವ ನಿಟ್ಟಿನಲ್ಲಿ ಛಾಯಾಗ್ರಾಹಕರು ಕೆಲಸ ಮಾಡಿದರೆ ಮತ್ತೊಂದು ಆರ್ಡರ್‌ಗಳು ಹುಡುಕಿಕೊಂಡು ಬರಲಿವೆ ಎಂದು ಹೇಳಿದರು.

ನಿಕಾನ್ ಕ್ಯಾಮಾರಾಗಳು ಬೇರೆಲ್ಲಾ ಕ್ಯಾಮಾರಾಗಳಿಗಿಂತ ವಿಭಿನ್ನವಾಗಿದೆ.

## ತೆಂಗಿನಕಾಯಿ ಕಳವು ಮಾಡಿದ್ದ ಇಬ್ಬರು ಆರೋಪಿಗಳ ಬಂಧನ

ಚಿಕ್ಕಮಗಳೂರು: ನಗರದ ಎಪಿಎಂಸಿ ಆವರಣದಲ್ಲಿನ ಅಂಗಡಿಯಿಂದ ನಿರಂತರವಾಗಿ 2500 ತೆಂಗಿನಕಾಯಿಗಳನ್ನು ಕಳವು ಮಾಡಿದ್ದ ಇಬ್ಬರು ಆರೋಪಿಗಳನ್ನು ಬಸವನಹಳ್ಳಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ಇದಲ್ಲದೆ ತೆಂಗಿನಕಾಯಿ ಮಾರಾಟದಿಂದ ಬಂದಿದ್ದ 1.10 ಲಕ್ಷ ರೂ. ಹಣ ಹಾಗೂ ಕೃತ್ಯಕ್ಕೆ ಬೆಳೆಸಿದ ಪ್ಯಾಸೆಂಜರ್ ಆಟೋವನ್ನು ವಶಪಡಿಸಿಕೊಂಡಿದ್ದಾರೆ.

ತೆಂಗಿನಕಾಯಿ ಕಳ್ಳತನವಾಗಿರುವ ಸಂಬಂಧ ಅಂಗಡಿ ಮಾಲೀಕ ನೀಡಿದ ದೂರನ್ನು ಆದರಿಸಿ ಆರೋಪಿಗಳ ಪತ್ತೆಗಾಗಿ ಎಸ್ಪಿ ಡಾ. ವಿಕ್ರಂ ಅಮಟೆ ಅವರು ಎಎಸ್‌ಪಿ ಜಯಕುಮಾರ್, ಡಿವೈಎಸ್‌ಪಿ ಶೈಲೇಂದ್ರ ಅವರ ಮಾರ್ಗದರ್ಶನದಲ್ಲಿ ಬಸವನಹಳ್ಳಿ ಸಿಪಿಐ ವಿಜಯಕುಮಾರ ಎಂ.ಬಿರಾಧರ ಪಿಎಸ್‌ಐಗಳಾದ ಕೀರ್ತಿಕುಮಾರ್ ಮತ್ತು ಅಜರುದ್ದೀನ್ ಅವರನ್ನೊಳಗೊಂಡ ತಂಡ ರಚನೆ ಮಾಡಿದ್ದರು. ಈ ತಂಡ ವೈಜ್ಞಾನಿಕವಾಗಿ ತನಿಖೆ ನಡೆಸಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ.

ತೆಂಗಿನಕಾಯಿ ಕಳ್ಳತನ ಮಾಡಿದ್ದ ಮೂಡಿಗೆರೆ ಪಟ್ಟಣದ ಬಿಳಗುಳ ಇಂದಿರಾ ನಗರದ ತರಕಾರಿ ವ್ಯಾಪಾರಿ ಮಹಮ್ಮದ್ ನೌಷದ್, ಬೀಳಗುಳ ವಿವೇಕಾನಂದ ನಗರದ ಆಟೋಚಾಲಕ ಗಣೇಶ್ ಎಂಬುವರನ್ನು ಬಂಧಿಸಿದ್ದಾರೆ.

## ಅಮೇರಿಕಾದೊಂದಿಗೆ ವಾಣಿಜ್ಯ ಒಪ್ಪಂದ ಮಾಡಿಕೊಳ್ಳದಂತೆ ಆಗ್ರಹಿಸಿ ರೈತ ಸಂಘ ಮನವಿ



**ಚಿಕ್ಕಮಗಳೂರು:** ಅಮೇರಿಕಾದೊಂದಿಗೆ ಸಮಗ್ರ ಆರ್ಥಿಕ ಹಾಗೂ ವಾಣಿಜ್ಯ ಒಪ್ಪಂದವನ್ನಾಗಲೀ ಮತ್ತು ಮುಕ್ತ ವ್ಯಾಪಾರ ಒಪ್ಪಂದ ಮಾಡಿಕೊಳ್ಳಬಾರದು. ಅಮೇರಿಕ ವಿಧಿಸಿರುವ ಶೇ.25 ರಷ್ಟು ಆಮದು ಸುಂಕವನ್ನು ಪ್ರತಿಭಟಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಯುಕ್ತ ಕಿಸಾನ್ ಮೋರ್ಚಾ, ಕೇಂದ್ರ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ಆಗ್ರಹಿಸಿ ಇಂದು ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿ ದ್ರೌಪದಿ ಮುರ್ಮುರವರಿಗೆ ಮನವಿ ಸಲ್ಲಿಸಿದರು.

ಯುನೈಟೆಡ್ ಕಿಂಗ್‌ಡಮ್ ಜೊತೆಗಿನ ಸಮಗ್ರ ಹಾಗೂ ವಾಣಿಜ್ಯ ಒಪ್ಪಂದವು ಹೈನುಗಾರಿಕೆ, ತರಕಾರಿಗಳು ಮತ್ತು ಹಣ್ಣುಗಳು ಸೇರಿದಂತೆ ಸಂಸ್ಕರಿತ ಆಹಾರಗಳ ಆಮದನ್ನು ಹೆಚ್ಚಿಸುತ್ತದೆ. ಇದು ಭಾರತದಲ್ಲಿ ಆಹಾರ ಸಂಸ್ಕರಣೆಯಲ್ಲಿ ವಿದೇಶಿ ನೇರ ಹೂಡಿಕೆ ಹೆಚ್ಚಳಕ್ಕೆ ಕಾರಣವಾಗಿ ದೇಶದ ರೈತರ ಗಳಿಕೆ ಮತ್ತು ಸಣ್ಣ ಕೃಷಿ ವ್ಯಾಪಾರ ಸಂಸ್ಥೆಗಳ ಗಳಿಕೆಯನ್ನು ಇದರಿಂದಾಗಿ ಗಣನೀಯವಾಗಿ ಕಡಿಮೆಯಾಗುತ್ತದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಕುಲಾಂತರಿ ತಳಿಗಳ ಬೆಳೆಗಳು ಆಹಾರಗಳು, ಆಹಾರ ಧಾನ್ಯಗಳು, ಸೋಯಾ, ಜೋಳ, ಹತ್ತಿ ಇತ್ಯಾದಿಗಳನ್ನು ಬೃಹತ್ ಪ್ರಮಾಣದಲ್ಲಿ ಆಮದು ಮಾಡಿಕೊಳ್ಳಲು ಅಮೇರಿಕಾದೊಂದಿಗೆ ಮಾತುಕತೆ ನಡೆಯುತ್ತಿದ್ದು, ಇದು ಭಾರತದ ಆರ್ಥಿಕತೆಗೆ ಅನಿಯಂತ್ರಿತವಾಗಿ ಬಹು ರಾಷ್ಟ್ರೀಯ ಕಂಪನಿಗಳ ಪ್ರವೇಶವನ್ನು ಉತ್ತೇಜಿಸಲಾಗುತ್ತದೆ. ಇದನ್ನು ಕೂಡಲೇ ನಿಲ್ಲಿಸಿ ಏಕಪಕ್ಷೀಯವಾಗಿ ಅಮೇರಿಕ ಭಾರತದ ಮೇಲೆ ವಿಧಿಸಿರುವ ಶೇ. 25 ರಷ್ಟು ಆಮದು ಸುಂಕವು ದೇಶದ ಸಾರ್ವಭೌಮತೆಗೆ ಗಂಭೀರ ಆಕ್ರಮಣವಾಗಿದ್ದು, ಕೂಡಲೇ ಭಾರತ ಸರ್ಕಾರ ಇದನ್ನು ವಿರೋಧಿಸುವಂತೆ ಒತ್ತಾಯಿಸಿದ್ದಾರೆ. ಎನ್‌ಪಿಎಫ್ಎಎಂ ಹಾಗೂ ಎನ್‌ಸಿಪಿಗಳನ್ನು ರದ್ದುಪಡಿಸಲು ಆಗ್ರಹಿಸಿ ಕೇಂದ್ರ ಸರ್ಕಾರ ಪರಿಚಯಿಸಿರುವ ಕೃಷಿ ಮಾರುಕಟ್ಟೆ ಕುರಿತ ರಾಷ್ಟ್ರೀಯ ನೀತಿ ಚೌಕಟ್ಟು ಮೂಲಭೂತವಾಗಿ ಎಪಿಎಂಸಿ ಆಧುನೀಕರಣ, ಆಹಾರ ಧಾನ್ಯ ನಿರ್ವಹಣೆ, ಆಹಾರ ದಾಸ್ತಾನು ಮತ್ತು ಆಹಾರ ಸಂಸ್ಕರಣೆಯಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವದ ಮೂಲಕ ಖಾಸಗಿ ಬಂಡವಾಳವನ್ನು ಉತ್ತೇಜಿಸುವ ನೀತಿಯಾಗಿದೆ ಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.

## ಕಳವಾಗಿದ್ದ 17.50 ಲಕ್ಷ ರೂ. ಮೌಲ್ಯದ ಚಿನ್ನಾಭರಣ ವಶ



ಚಿಕ್ಕಮಗಳೂರು: ಚಿನ್ನಾಭರಣ ಕಳ್ಳತನ ಮಾಡಿದ್ದ ವ್ಯಕ್ತಿಯನ್ನು ಬಂಧಿಸಿರುವ ಪೊಲೀಸರು ಆತನಿಂದ ಕದ್ದಮಾಲು ಅಂದಾಜು 17.50 ಲಕ್ಷ ರೂ. ಮೌಲ್ಯದ 195.9 ಗ್ರಾಂ ಚಿನ್ನಾಭರಣಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಕಡೂರು ಪಟ್ಟಣದ ಲಕ್ಷೀಶ ನಗರದ ನಿವಾಸಿಯೊಬ್ಬರ ಮನೆಯಲ್ಲಿದ್ದ ಚಿನ್ನಾಭರಣಗಳನ್ನು ಕಳ್ಳತನ ಮಾಡಿರುವ ಬಗ್ಗೆ ಮನೆಯ ಮಾಲೀಕರು ನೀಡಿದ ದೂರಿನ ಮೇರೆಗೆ ಕಡೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಆಭರಣ ಕಳವುಮಾಡಿದ್ದ ಆರೋಪಿಯನ್ನು ಬಂಧಿಸಿ ಕದ್ದಮಾಲನ್ನು ವಶಕ್ಕೆ ಪಡೆಯುವ ನಿಟ್ಟಿನಲ್ಲಿ ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿ ಡಾ. ವಿಕ್ರಂ ಅಮಟೆ, ಹೆಚ್ಚುವರಿ ಪೊಲೀಸ್ ಮುಖ್ಯಾಧಿಕಾರಿ ಜಯಕುಮಾರ್, ತರೀ–ಕೆರೆ ಡಿವೈಎಸ್‌ಪಿ ಹಾಲಮೂರ್ತಿರಾವ್ ಇವರ ಮಾರ್ಗದರ್ಶನದಲ್ಲಿ ವೃತ್ತ ನಿರೀಕ್ಷಕ ಎಂ. ರಫೀಕ್ ನೇತೃತ್ವದಲ್ಲಿ ಆರೋಪಿ ಪತ್ತೆಗಾಗಿ ತಂಡವೊಂದನ್ನು ರಚಿಸಲಾಗಿತ್ತು.

## ಜಿಎಸ್‌ಟಿ ಇಳಿಕೆ ಜನಜೀವನ ಸುಧಾರಣೆಗೆ ಸಹಕಾರಿ: ಪುಟ್ಟಸ್ವಾಮಿ




**ಚಿಕ್ಕಮಗಳೂರು:** ಜನರ ಜೀವನ ನಿರ್ವಹಣೆ ಸುಲಭಗೊಳಿಸಲು ಮತ್ತು ಆತ್ಮನಿರ್ಭರ ಭಾರತದ ನಿರ್ಮಾಣಕ್ಕಾಗಿ ಸರಕು ಮತ್ತು ಸೇವಾ ತೆರಿಗೆ ವ್ಯವಸ್ಥೆಯನ್ನು ಸರಳೀಕರಣಗೊಳಿಸಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಕ್ರಮವನ್ನು ಜಿಲ್ಲಾ ಬಿಜೆಪಿ ಸ್ವಾಗತಿಸಿರುವುದಾಗಿ ಆ ಪಕ್ಷದ ಜಿಲ್ಲಾ ವಕ್ತಾರ ಹಿರೇಮಗಳೂರು ಪುಟ್ಟಸ್ವಾಮಿ ತಿಳಿಸಿದ್ದಾರೆ.

ಪತ್ರಿಕಾ ಹೇಳಿಕೆಯಲ್ಲಿ ಮಾಹಿತಿ ನೀಡಿರುವ ಅವರು, ದೆಹಲಿಯಲ್ಲಿ ನಡೆದ ಎರಡು ದಿನಗಳ ಜಿಎಸ್‌ಟಿ ಮಂಡಳಿ ಸಭೆಯಲ್ಲಿ ಹಾಲಿ ಇದ್ದ ನಾಲ್ಕು ಸ್ಲ್ಯಾಬ್‌ಗಳನ್ನು ಎರಡಕ್ಕೆ ಇಳಿಸಲು ಕೈಗೊಂಡಿರುವ ಕ್ರಮ ದೇಶದ ಮಧ್ಯಮ ವರ್ಗದ ಜನರಿಗೆ ನೀಡಿರುವ ದೊಡ್ಡ ಕೊಡುಗೆ ಇದಾಗಿದೆ ಎಂದರು.

ನೀಡಿರುವ ಹೇಳಿಕೆಯಲ್ಲಿ ಮಾಹಿತಿ ನೀಡಿ–ದ್ದಾರೆ.ಜನರ ದೈನಂದಿನ ಬಳಕೆಯ ವಸ್ತುಗಳಾದ ಕೂದಲಿಗೆ ಬಳಸುವ ಎಣ್ಣೆ, ಶ್ಯಾಂಪು, ಟೂತ್ ಪೇಸ್ಟ್, ಸ್ನಾನದ ಸಾಬೂನು, ಬಟ್ಟೆ ಸಾಬೂನು, ಶೇವಿಂಗ್ ಕ್ರೀಂಗೆ ಈ ಹಿಂದೆ ಶೇ.18 ಇದ್ದದ್ದನ್ನು ಈಗ ಶೇ.5ಕ್ಕೆ ಇಳಿಸಲಾಗಿದೆ. ಹಾಲಿನ ಉತ್ಪನ್ನಗಳು, ಪ್ಯಾಕ್ ಮಾಡಲಾದ ನಮ್ಕಿನ್‌ಗಳು ಮತ್ತು ಮಿಕ್ಸಿಗಳು, ಪಾತ್ರೆಗಳು, ಶಿಶುಗಳಿಗೆ ಹಾಲುಣಿಸುವ ಬಾಟಲಿಗಳು, ಹೊಲಿಗೆ ಯಂತ್ರಗಳು ಮತ್ತು ಅವುಗಳ ಬಿಡಿ ಭಾಗಗಳಿಗೆ ಈ ಹಿಂದೆ ಇದ್ದ ಶೇ.12 ರಿಂದ ಶೇ.5 ಕ್ಕೆ ಇಳಿಸಿರುವುದು ಜನರ ಜೀವನ ಸುಧಾರಣೆಗೆ ಸಹಕಾರಿಯಾಗಲಿದೆ ಎಂದು ಹೇಳಿದ್ದಾರೆ.

## ಸಮ್ಮೇಳನಗಳು ಅರ್ಥಪೂರ್ಣವಾಗಿ ಗುಣಮಟ್ಟಕ್ಕೆ ಆದ್ಯತೆ ನೀಡಬೇಕು : ಸಾಣೇಹಳ್ಳಿ ಶ್ರೀ



**ತರೀಕೆರೆ:** ಸಮ್ಮೇಳನಗಳು ಅರ್ಥ ಪೂರ್ಣವಾಗಿ ಮಿತವ್ಯಯ ಅಳವಡಿಸಿಕೊಂಡು ಗುಣಮಟ್ಟಕ್ಕೆ ಆದ್ಯತೆ ನೀಡಬೇಕು ಎಂದು ಸಾಣೇಹಳ್ಳಿ ಪಂಡಿತರಾಧ್ಯ ಶಿವಾಚಾರ್ಯ ಸ್ವಾಮೀಜಿ ಹೇಳಿದ್ದಾರೆ.

ಇತ್ತೀಚೆಗೆ ಸಾಣೇಹಳ್ಳಿಯಲ್ಲಿ ಜರುಗಿದ ಪ್ರಪ್ರಥಮ ಅಂತರ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಖರ್ಚು ವೆಚ್ಚದ ಸಭೆಯಲ್ಲಿ ಅವರು ಮಾತನಾಡಿದರು.

2024ರ ಫೆಬ್ರವರಿ 2 ಮತ್ತು 3ರಂದು ಜರುಗಿದ ಪ್ರಪ್ರಥಮ ಅಂತರ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಅತ್ಯಂತ ಸಂಭ್ರಮ ಮತ್ತು ಸಡಗರದಿಂದ ನೆರವೇರಿತು. ಸಮ್ಮೇಳನದ ವಿಷಯದಲ್ಲಿ ಯಾವುದೇ ಸಮಸ್ಯೆಗಳಿರಲಿಲ್ಲ ಎಲ್ಲವೂ ಅಚ್ಚುಕಟ್ಟಾಗಿ ಜರುಗಿತು, ಊಟ ವಸತಿ ಎಲ್ಲವೂ ಕೂಡ ತುಂಬಾ ವ್ಯವಸ್ಥಿತವಾಗಿ ನಡೆಯಿತು. ಆದಾಯ ಮತ್ತು ಖರ್ಚುಗಳ ಪಟ್ಟಿಯನ್ನು ಗಮನಿಸಿದ್ದೇನೆ. ಸಮ್ಮೇಳನದಲ್ಲಿ ಖರ್ಚು ಹೆಚ್ಚಾಗಿ ಆದಾಯದ ಮೂಲಗಳು ಕಡಿಮೆಯಾಗಿದ್ದು, ಹಣದ ಕೊರತೆ ಆಗಿರುವುದು ಕಂಡುಬಂದಿದೆ. ಅಂತಿಮವಾಗಿ ಎಲ್ಲಾ ಖರ್ಚುಗಳನ್ನು ಸರಿದೂಗಿಸಲಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಹೆಚ್ಚಿನ ಕಾರ್ಯಕ್ರಮಗಳನ್ನು ಕೈಗೊಳ್ಳಿ ಎಂದು ಶ್ರೀಗಳು ಸಲಹೆ ನೀಡಿದರು.

ಸಾಹಿತ್ಯ ಸಮ್ಮೇಳನದ ಸ್ವಾಗತ ಸಮಿತಿಯ ಅಧ್ಯಕ್ಷ ಎ.ಸಿ.ಚಂದ್ರಪ್ಪ ಕೆಲವು ಹಣಕಾಸಿನ ಮೂಲಗಳಿಂದ ಹಣ ತಲುಪುವುದು ತಡವಾದುದರಿಂದಾಗಿ ಲೆಕ್ಕಪತ್ರ ನೀಡಲು ತಡವಾಯಿತು. ಆದರೆ, ಅಂತಿಮವಾಗಿ ಪ್ರತಿಯೊಬ್ಬರಿಗೂ ಬಾಕಿ ಹಣವನ್ನು ಪಾವತಿಸಿ ಈ ದಿನ ಸಮ್ಮೇಳನದಲ್ಲಿನ ಖರ್ಚುವೆಚ್ಚಗಳನ್ನು ಅತ್ಯಂತ ಪಾರದರ್ಶಕವಾಗಿ ನಿರ್ವಹಿಸಲಾಗಿದೆ. ಚಿಕ್ಕಮಗಳೂರು ಜಿಲ್ಲಾ 20ನೇ ಕನ್ನಡ ಸಾಹಿತ್ಯ

## ರಸ್ತೆ ಸುರಕ್ಷತಾ ಜಾಥಾ

**ಚಿಕ್ಕಮಗಳೂರು:** ಸಾರ್ವಜನಿಕರಲ್ಲಿ ಸುರಕ್ಷತಾ ವಾಹನ ಚಾಲನೆಯ ಬಗ್ಗೆ ಅರಿವು ಮೂಡಿಸಲು "ಡ್ರೈವ್ ಸೇಫ್ಟಿ–ಪೂನಾ ಡ್ರೈವ್–2025" ನ್ನು ಸೆ.3 ರಿಂದ 7 ರವರೆಗೆ ಏರ್ಪಡಿಸಲಾಗಿದೆ ಎಂದು ರೋಟರಿ ಕಾಫಿ ಲ್ಯಾಂಡ್ ಅಧ್ಯಕ್ಷ ನಾಗೇಶ್ ಕೆಂಜಿಗೆ ತಿಳಿಸಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ರೋಟರಿ ಕಾಫಿಲ್ಯಾಂಡ್ ಪ್ರಸ್ತುತ 25 ವರ್ಷಗಳನ್ನು ಪೂರೈಸಿದ್ದು, ಬೆಳ್ಳಿಹಬ್ಬ ಆಚರಿಸಿಕೊಳ್ಳುತ್ತಿದೆ. ಈ ಸಂದರ್ಭದಲ್ಲಿ ರೋಟರಿ "ರಸ್ತೆ ಸುರಕ್ಷತಾ ಜಾಥಾ" ಜಿಲ್ಲಾ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಸುಮಾರು 2500 ಕಿ.ಮೀ ಗಳನ್ನು ಪೂರ್ಣಗೊಳಿಸಲು ರೋಟರಿ ಕ್ಲಬ್‌ನ 25 ಸದಸ್ಯರು 6 ವಾಹನಗಳಲ್ಲಿ ಸಂಚರಿಸಿ ಯಶಸ್ವಿಗೊಳಿಸಲಿದ್ದಾರೆ ಎಂದರು.

ಸೆ.3 ರ ಮುಂಜಾನೆ 5 ಗಂಟೆಗೆ ಚಿಕ್ಕಮಗಳೂರಿನಿಂದ ಹೊರಟು ಚಿತ್ರದುರ್ಗ, ಹೊಸಪೇಟೆ, ವಿಜಯಪುರ, ಶಿರಡಿ, ಪೂನಾ ತಲುಪಿ ಸತಾರಾ–ಬೆಳಗಾವಿ ಮಾರ್ಗವಾಗಿ ಸೆ.7 ರಂದು ಸಂಜೆ ಚಿಕ್ಕಮಗಳೂರು ನಗರವನ್ನು ತಲುಪಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾರ್ಗದುದ್ದಕ್ಕೂ ರೋಟರಿ ಕ್ಲಬ್‌ಗಳ ಯೋಜನೆಯ ಉದ್ದೇಶಗಳನ್ನು ವಿನಿಮಯ ಮಾಡಿಕೊಳ್ಳುವುದಲ್ಲದೆ ಸಾರ್ವಜನಿಕರಿಗೆ ರೋಟರಿ ಜನೋಪಯೋಗಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ವಿಚಾರ ವಿನಿಮಯ ಮಾಡಿಕೊಡಲಾಗುತ್ತದೆ ಎಂದರು.

ರೋಟರಿ ಜಿಲ್ಲೆಯ ಮತ್ತೊಂದು ಪ್ರತಿಷ್ಠಿತ ಕಾರ್ಯಕ್ರಮವಾದ ಪರಿಸರ ರಕ್ಷಣೆಯ ಜಾಗೃತಿಗಾಗಿ ವಿವಿಧ ರೀತಿಯ ಅರಣ್ಯ ಬೀಜಗಳನ್ನು ಸೀಡ್‌ಬಾಲ್‌ಗಳಾಗಿ ಪರಿವರ್ತಿಸಿ ಸಾರ್ವಜನಿಕರೊಂದಿಗೆ

# ಜನದಟ್ಟಣೆ ಹಾಗೂ ವಿಪತ್ತು ನಿರ್ವಹಣೆಗೆ ಸಮನ್ವಯ ಅಗತ್ಯ

### ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಹೇಳಿಕೆ



**ಚಿತ್ರದುರ್ಗ :** ನಗರದಲ್ಲಿ ಜರುಗುವ ಹಿಂದೂ ಮಹಾಗಣಪತಿ ವಿಸರ್ಜನೆ ಹಾಗೂ ಶೋಭಾಯಾತ್ರೆ ಮೆರವಣಿಗೆ ವೇಳೆ ಜನದಟ್ಟಣೆ ಹಾಗೂ ವಿಪತ್ತು ನಿರ್ವಹಣೆಗೆ ಜಿಲ್ಲಾಡಳಿತ, ಪೊಲೀಸ್, ಅಗ್ನಿಶಾಮಕ, ಗೃಹ ರಕ್ಷಕದಳ, ನಗರಸಭೆ, ಆರೋಗ್ಯ, ಸಾರಿಗೆ, ಬೆಸ್ಕಾಂ, ಎನ್.ಸಿ.ಸಿ, ಎನ್.ಎಸ್.ಎಸ್ ಹಾಗೂ ಸ್ವಯಂ ಸೇವಕರ ನಡುವೆ ಸಮನ್ವಯ ಅಗತ್ಯವಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಹೇಳಿದರು.

ನಗರದ ಜಿಲ್ಲಾ ಕವಾಯತು ಮೈದಾನದಲ್ಲಿ ಸೋಮವಾರ ಹಿಂದೂ ಮಹಾಗಣಪತಿ ಶೋಭಾಯಾತ್ರೆ ಸಿದ್ದತೆ ಹಾಗೂ ವಿಪತ್ತು ನಿರ್ವಹಣೆ ಅಣಕು ಪ್ರದರ್ಶನ ಕುರಿತು ಸಂಬಂಧಪಟ್ಟ ಇಲಾಖೆಗಳ ಸಭೆ ನಡೆಸಿ ಅವರು ಮಾತನಾಡಿದರು.

ಈ ಬಾರಿಯ ಮೆರವಣಿಗೆಯಲ್ಲಿ ನಾಲ್ಕು ಲಕ್ಷಕ್ಕೂ ಹೆಚ್ಚು ಜನರು ಸೇರುವ ನಿರೀಕ್ಷೆಯಿದೆ. ವಿಪತ್ತು ನಿರ್ವಹಣೆ ಹಾಗೂ ಜನರ ಜೀವ ರಕ್ಷಣೆ ಕಾರ್ಯಕ್ಕೆ ಸಕಲ ಸಿದ್ದತೆಗಳನ್ನು ಮಾಡಿಕೊಳ್ಳಬೇಕು. ಅತಿಯಾದ ಜನದಟ್ಟಣೆಯಿಂದ ನೂಕು ನುಗ್ಗಲು, ಕಾಲ್ತುಳಿತ, ವಿದ್ಯುತ್ ಹಾಗೂ ಅಗ್ನಿ ಅವಘಡದಂತಹ ವಿಪತ್ತು ಉಂಟಾಗಬಹದು. ಕೆಲವರಿಗೆ, ರಕ್ತದೊತ್ತಡ, ಹೃದಯಘಾತ ಸೇರಿದಂತೆ ವೈದ್ಯಕೀಯ ತುರ್ತು ಎದುರಾಗಬಹುದು. ಈ ವೇಳೆ ಸ್ಥಳದಲ್ಲಿರುವ ಪೊಲೀಸರು, ವೈದ್ಯಕೀಯ ಸಿಬ್ಬಂದಿ ಮೊದಲಿಗೆ ಸ್ಪಂದಿಸಬೇಕು ಎಂದು ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ತಿಳಿಸಿದರು.

ಉಪವಿಭಾಗಾಧಿಕಾರಿ ಮಹೆಬೂಬ್ ಜಿಲಾನಿ ಖುರೇಷಿ ಮಾತನಾಡಿ, (5ನೇ ಪುಟಕ್ಕೆ)

## ಕ್ಷೇತ್ರ ಧರ್ಮಸ್ಥಳ ಹೆಸರಿಗೆ ಅಪಪ್ರಚಾರ ಖಂಡಿಸಿ ಮೊಳಕಾಲ್ಮೂರಲ್ಲಿ ಬಿಜೆಪಿಯಿಂದ ಪ್ರತಿಭಟನೆ



**ಮೊಳಕಾಲ್ಮೂರು :** ಶಿವನ ರೂಪದಲ್ಲಿ ಧರೆಗಿಳಿದು ಬಂದ ಶ್ರೀ ಮಂಜುನಾಥ ಸ್ವಾಮಿ ನೆಲಸಿರುವ ಪವಿತ್ರ ಶ್ರೀ ಕ್ಷೇತ್ರ ಧರ್ಮಸ್ಥಳದ ವಿರುದ್ಧ ರಾಜ್ಯ ಕಾಂಗ್ರೆಸ್ ಸರ್ಕಾರವು ಷಡ್ಯಂತರವು ಹಿಂದೂಗಳ ಧಾರ್ಮಿಕ ಭಾವನೆಗಳನ್ನು ಕೆರಳಿಸುವ ದುಷ್ಕೃತ್ಯವಾಗಿದೆ ಎಂದು ಕ್ಷೇತ್ರದ ಮಾಜಿ ಶಾಸಕ ಎಸ್.ತಿಪ್ಪೇಸ್ವಾಮಿ ಆರೋಪಿಸಿದ್ದಾರೆ. ಇವರು ಪಟ್ಟಣದ ತಾಲೂಕು ಆಡಳಿತ ಸೌಧದ ಆವರಣದಲ್ಲಿ ಶ್ರೀ ಕ್ಷೇತ್ರಧರ್ಮಸ್ಥಳದ ಹೆಸರಿಗೆ ಅಪಪ್ರಚಾರ ಮಾಡುತ್ತಿರುವುದನ್ನು ಖಂಡಿಸಿ ಭಾರತೀಯ ಜನತಾ ಪಾರ್ಟಿಯು ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಾತನಾಡಿದರು.

ರಾಜ್ಯ ಕಾಂಗ್ರೆಸ್ ಸರ್ಕಾರವು ದಿವಾಳಿಯಾಗಿರುವುದರಿಂದ ಬಿಟ್ಟಿ ಭಾಗ್ಯಗಳಿಗೆ ಹಣ ಒದಗಿಸುವ ದುರುದ್ದೇಶದಿಂದ ಶ್ರೀ ಕ್ಷೇತ್ರ ಧರ್ಮಸ್ಥಳದ ವಿರುದ್ಧ ಸುಳ್ಳು ಆಪಾದನೆ ಮಾಡಿ ಸರ್ಕಾರದ ವಶಕ್ಕೆ ಪಡೆಯುವ ಷಡ್ಯಂತರವಾಗಿದೆ. ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಕೈಗೊಳ್ಳದೆ ಯಾರೂ ಕೇಳಿರದ ಬಿಟ್ಟಿ ಭಾಗ್ಯಗಳನ್ನು ನೀಡಿ ಈ ನೆಪದಲ್ಲಿ ನಿಮ್ಮ ಕಾಂಗ್ರೆಸ್ ಸರ್ಕಾರದ ಶಾಸಕರು, ಸಚಿವರೇ ಲೂಟಿ ಮಾಡುತ್ತಿದ್ದು, ಅವರನ್ನು ಬಿಟ್ಟು ಶ್ರೀಸ್ವಾಮಿಯ ದರ್ಶನಕ್ಕೆ ಬರುವ ಭಕ್ತರಿಗೆ ಅಪವಾದ ತರುವ ಕೆಲಸ ಶೋಭೆಯಲ್ಲ. ಶ್ರೀಮಂಜುನಾಥನ ಧರ್ಮಸ್ಥಳ ಕ್ಷೇತ್ರಕ್ಕೆ ಕೆಟ್ಟ ಅಪವಾದವನ್ನು ಕಾಂಗ್ರೆಸ್ ಮಾಡುತ್ತಿದ್ದು, ಈ ಕುರಿತು ಸ್ವ–ಸಹಾಯ ಸಂಘಗಳಿಗೆ ಹೇಳಿ ತಿಳಿ ಹೇಳಿ ಸುಳ್ಳು ಆಪಾದನೆ ಮಾಡುವುದಕ್ಕೆ ತಕ್ಕ ಶಿಕ್ಷೆ ನೀಡುವುದಾಗಿ ಆರೋಪಿಸಿದರು.

ಬಿ.ಜೆ.ಪಿ.ಪಕ್ಷದ ಮಂಡಲಾಧ್ಯಕ್ಷ ಕೆ.ಟಿ.ಶ್ರೀರಾಮರೆಡ್ಡಿ ಮಾತನಾಡಿ ಶ್ರೀಮಂಜುನಾಥಸ್ವಾಮಿಯ ಸನ್ನಿಧಿಯಾದ ಧರ್ಮಸ್ಥಳದಲ್ಲಿ ಧರ್ಮಯುತವಾಗಿ ಪ್ರಸಾದ ನೀಡುವ ಶ್ರೇಷ್ಠ ಕ್ಷೇತ್ರವಾಗಿದೆ. ಐತಿಹಾಸಿಕವಾಗಿರುವ ಪ್ರಸಿದ್ದ ಧಾರ್ಮಿಕವಾಗಿ ಖ್ಯಾತಿ ಹೊಂದಿರುವುದಲ್ಲದೆ ಸುಮಾರು 43 ವರ್ಷಗಳಿಂದಲೂ ಗ್ರಾಮೀಣಾಭಿವೃದ್ದಿ ಸಂಸ್ಥೆಯನ್ನು ಸ್ಥಾಪಿಸಿ ಇಡೀ ರಾಜ್ಯಾದ್ಯಂತ ಕಟ್ಟ ಕಡೆಯ ವ್ಯಕ್ತಿಗೂ ಹಲವಾರು ಸೌಲಭ್ಯಗಳನ್ನು ನೀಡುವ ವ್ಯವಸ್ಥೆಯಾಗಿದ್ದು, ಅಂತರರಾಷ್ಟ್ರ ಸಂಸ್ಥೆಯಿಂದಲೂ ಪ್ರಮಾಣ ಪತ್ರ ನೀಡಲಾಗಿದೆ. ಸಾಲ ರೂಪ ಹೊರತುಪಡಿಸಿ ದೇವಸ್ಥಾನಗಳು, ಕೆರೆಗಳು, ವಸತಿ ನಿರ್ಮಾಣ, ಶುದ್ದ ಗಂಗ ಕುಡಿಯುವ ನೀರು ಸೇರಿದಂತೆ ಹಲವಾರು ಸೌಲಭ್ಯಗಳನ್ನು ಕಲ್ಪಿಸುತ್ತಿದೆ. ಆದರೆ ಎಡಪಂಥೀಯರು ಈ ಕೆಲಸಗಳನ್ನು ಸಹಿಸಲಾಗದೆ ಈ ಕ್ಷೇತ್ರದ ವಿರುದ್ದ ಸೌಜನ್ಯ ಕೇಸಿನ ಮೂಲಕ ಷಡ್ಯಂತರ ಹೂಡಿ ಅಪಪ್ರಚಾರ ಮಾಡುತ್ತಾ (5ನೇ ಪುಟಕ್ಕೆ)

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**